12 September 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಅಂತರಂಗವೆನ್ನುವುದು ನಮ್ಮ ದೇಹದಲ್ಲಿರುವ ದೇವರ ಗರ್ಭಗುಡಿ ಇದ್ದಂತೆ, ಹೀಗಾಗಿ ಅದು ಯಾವಾಗಲೂ ನಿರ್ಮಲವೇ, ನಾವು ಅದಕ್ಕೆ ಮಹತ್ವ ಕೊಡಬೇಕು ಅಷ್ಟೇ!

-ಸ್ನೇಹಾ ಆನಂದ್

info.varthaman@gmail.com

ವರ್ತಮಾನ ವರದಿ ಪರಿಣಾಮ

ಎಚ್.ಡಿ.ಕೋಟೆ ಬಸ್ ಡಿಪೋದ ನಾಲ್ವರಿಗೆ ನೋಟಿಸ್ — ಪುಟ ಸಂ. 2



ಜಿಪಂ ಸಿಇಒಯಿಂದ ವಿಬಿ–ಜಿ ರಾಮ್ ಜಿ ಕಾಮಗಾರಿ ಪರಿಶೀಲನೆ — ಪುಟ ಸಂ. 3



ಬಟ್ಟೆ ಬ್ಯಾಗ್ ಬಳಕೆಗೆ ರಾಮನಗರ ನಗರಸಭೆ ಪ್ರೋತ್ಸಾಹ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 268 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಕಾಂಗ್ರೆಸ್ ಟ್ರ್ಯಾಪ್‌ಗೆ ಬಿಜೆಪಿ ಸಂಚು

## ಸಮುದಾಯವಷ್ಟೇ ಅಲ್ಲ, ಪಕ್ಷವೇ ಟಾರ್ಗೆಟ್: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

**ಬೆಂಗಳೂರು:** ಸಚಿವ ಸತೀಶ್ ಜಾರಕಿಹೊಳಿ ಅವರು ಏನೂ ತಪ್ಪು ಮಾಡಿಲ್ಲ. ಕಾನೂನು ಚೌಕಟ್ಟಿನಲ್ಲಿ ವ್ಯವಹಾರ ಮಾಡಿದ್ದಾರೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಮಾಧ್ಯಮದವರೊಂದಿಗೆ ಜಾರಕಿಹೊಳಿ ಭೇಟಿ ವಿಚಾರವಾಗಿ ಶುಕ್ರವಾರ ಮಾತನಾಡಿದ ಅವರು, ಅವರು ನನ್ನ ಸಹೋದ್ಯೋಗಿ. ಅವರು ತಪ್ಪು ಮಾಡಿಲ್ಲ. ಕಾನೂನು ಚೌಕಟ್ಟಿನಲ್ಲಿ ವ್ಯವಹಾರ ಮಾಡಿದ್ದಾರೆ. ಹೊರಗಡೆ ಹೋಗಬಾರದು, ವ್ಯವಹಾರ ಮಾಡಬಾರದು ಅಂತ ಎಲ್ಲಿದೆ? ಇದೆಲ್ಲ ರಾಜಕಾರಣ. ಇನ್ನೂ ಮೂರ್ನಾಲ್ಕು ಜನರ ಮೇಲೆ ದಾಳಿ ಮಾಡಬಹುದು. ಕಾಂಗ್ರೆಸ್ ಪಾರ್ಟಿನ ಆಫ್ ಮಾಡೋದಕ್ಕೆ ಬಿಜೆಪಿ ಮುಂದಾಗಿದೆ ಎಂದು ಆರೋಪಿಸಿದರು.

ಬಿಜೆಪಿಯವರ ಯಾರ ಮನೆಯ ಮೇಲೆ ಕೂಡ ಏಕೆ ದಾಳಿ ಮಾಡುತ್ತಿಲ್ಲ. ಸಮುದಾಯ ಮಾತ್ರ ಅಲ್ಲ. ಇಡೀ ಪಕ್ಷವನ್ನೇ ಟಾರ್ಗೆಟ್ ಮಾಡಲಾಗಿದೆ ಎಂದು ಆರೋಪಿಸಿದರು. ವಂದೇ ಮಾತರಂ ಬಗ್ಗೆ ನಮ್ಮ ಪಕ್ಷದ ಸ್ಟ್ಯಾಂಡ್ ಸ್ಪಷ್ಟವಾಗಿದೆ. ಅವರು ರಾಜಕೀಯ ಮಾಡ್ತಿದ್ದಾರೆ ಅಷ್ಟೇ ಎಂದರು.



### ಜಾರಕಿಹೊಳಿ ನಿವಾಸಕ್ಕೆ ಸಿಎಂ, ಸಚಿವರ ಮಧ್ಯ ರಾತ್ರಿ ಭೇಟಿ

**ಬೆಂಗಳೂರು:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ಇಡಿ ದಾಳಿ ಬೆನ್ನಲ್ಲೇ ಕಾಂಗ್ರೆಸ್ ನಾಯಕರು ಬುಧವಾರ ಮಧ್ಯ ರಾತ್ರಿ ಸಚಿವರ ನಿವಾಸಕ್ಕೆ ಆಗಮಿಸಿ ಮಾತುಕತೆ ನಡೆಸಿದರು.

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಹ ಭೇಟಿ ನೀಡಿದ್ದರು. ಈ ಮೂಲಕ ಸರ್ಕಾರ ಸತೀಶ್ ಬೆನ್ನಿಗೆ ನಿಂತಿದೆ. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಸಚಿವರು ಮತ್ತು ಇತರ ನಾಯಕರು ಬೆಂಗಳೂರಿನ ಕ್ರೆಸೆಂಟ್ ರಸ್ತೆಯಲ್ಲಿರುವ ಸತೀಶ್ ಜಾರಕಿಹೊಳಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿದರು.

ಪುಟ 2ಕ್ಕೆ

## ಪರಪ್ಪನ ಅಗ್ರಹಾರ ಜೈಲ್‌ನ 3 ಸಿಬ್ಬಂದಿ ಸೇರಿ 9 ಮಂದಿ ಬಂಧನ

### ಪ್ರಜ್ವಲ್ ರೇವಣ್ಣಗೆ ಮೊಬೈಲ್ ಪೂರೈಕೆ ಪ್ರಕರಣ




**ಬೆಂಗಳೂರು:** ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದೊಳಗೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮತ್ತಿತರರಿಗೆ ಮೊಬೈಲ್ ಫೋನ್‌ಗಳ ಪೂರೈಕೆ ಪ್ರಕರಣದಲ್ಲಿ ಮೂವರು ಜೈಲು ಸಿಬ್ಬಂದಿ ಸೇರಿದಂತೆ ಒಂಬತ್ತು ಮಂದಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.

ಕೇಂದ್ರ ಕಾರಾಗೃಹ ಭದ್ರತಾ ವಿಭಾಗದ ಬ್ಯಾರಕ್‌ಗಳಲ್ಲಿ ಆಗಸ್ಟ್ 11ರಂದು ನಡೆಸಿದ್ದ ದಿಢೀರ್ ದಾಳಿಯ ವೇಳೆ, ಜೈಲಿನಲ್ಲಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ವಿಚಾರಣಾಧೀನ ಕೈದಿ ಪ್ರತಾಪ್ ರೈ ಬಳಿ ಮೊಬೈಲ್ ಫೋನ್ ಪತ್ತೆಯಾಗಿತ್ತು. ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸರು 9 ಜನರನ್ನು ಬಂಧಿಸಿದ್ದಾರೆ.

ಪರಪ್ಪನ ಅಗ್ರಹಾರ ಕಾರಾಗೃಹ ಸಿಬ್ಬಂದಿ ಪ್ರಕಾಶ್ ಮಹಾವೀರ್,ವಿಜಯ್‌ಕುಮಾರ್ ಹಾಗೂ ಶ್ರೀನಿವಾಸ್ ನಾಯ್ಕ ಮತ್ತು ವಿಚಾರಣಾಧೀನ ಖೈದಿ ಪ್ರತಾಪ್ ರಾಯ್, ಪ್ರಜ್ವಲ್ ರೇವಣ್ಣ, ನವೀನ್ ಕುಮಾರ್, ಸಿದ್ಧಿಕ್, ಮೊಹಮದ್ ತೌಸಿಫ್ ಹಾಗೂ ಮಂಜುನಾಥ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಹಣದ ಆಸೆಗಾಗಿ ಜೈಲಿನೊಳಗಿರುವ ಕೈದಿಗಳಿಗೆ ಒಂದು ಮೊಬೈಲ್‌ಗೆ ಒಂದು ಲಕ್ಷ ರೂ. ಹಾಗೂ ಒಂದು ಸಿಮ್‌ಗೆ ಪುಟ 2ಕ್ಕೆ

## ಕೆಆರ್‌ಎಸ್ ಹೊರಹರಿವು ಎಷ್ಟು ಗೊತ್ತಿಲ್ಲ: ಚಲುವರಾಯಸ್ವಾಮಿ





**ಮಂಡ್ಯ:** ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ಎಷ್ಟು ಪ್ರಮಾಣದ ನೀರು ಹರಿದು ಹೋಗುತ್ತಿದೆ ಎಂಬ ಸ್ಪಷ್ಟ ಮಾಹಿತಿಯೇ ಇಲ್ಲ ಎಂದು ಸಚಿವ ಎನ್. ಚಲುವರಾಯಸ್ವಾಮಿ ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಮಂಡ್ಯದಲ್ಲಿ ಶುಕ್ರವಾರ ಮಾತನಾಡಿದ ಅವರು, ಸೋಮವಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ವಿಚಾರಣೆ ಇರುವುದರಿಂದ ಲೀಗಲ್ ಟೀಮ್ ನೀರು ಬಿಡುವಂತೆ ಸೂಚಿಸಿದೆ. ನ್ಯಾಯಾಲಯದ ಆದೇಶ ಪಾಲಿಸದಿದ್ದರೆ ನ್ಯಾಯಾಂಗ ನಿಂದನೆಯಾಗುತ್ತದೆ ಎಂಬ ಕಾರಣಕ್ಕೆ ನೀರು ಹರಿಸಲಾಗುತ್ತಿದೆ. ಆದೇಶ ಬಂದ ದಿನ ಕೇವಲ 2 ಸಾವಿರ ಕ್ಯೂಸೆಕ್ ನೀರು ಹೋಗುತ್ತಿತ್ತು. ನಾನು ಅಧಿಕಾರಿಗಳಿಗೆ 6 ಸಾವಿರ ಕ್ಯೂಸೆಕ್‌ಗಿಂತ ಕಡಿಮೆ ಬಿಡುವಂತೆ ಸೂಚಿಸಿದ್ದೆ ಎಂದು ಸಚಿವರು ಹೇಳಿದರು.

ಜಲಾಶಯದಿಂದ ಈಗ 8 ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗುತ್ತಿದೆ ಎಂದು ಮಾಧ್ಯಮಗಳು ಗಮನಕ್ಕೆ ತಂದಾಗ, 8 ಸಾವಿರ ಕ್ಯೂಸೆಕ್ ಹೋಗ್ತಿದೆಯಾ? ನನಗೆ ಗೊತ್ತಿಲ್ಲ. ಈಗಲೇ ಚೆಕ್ ಮಾಡುತ್ತೇನೆ ಎಂದು ಹೇಳಿದರು.

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ನಡುವೆ ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದಕ್ಕೆ ರೈತರಿಂದ ಆಕ್ರೋಶ ವ್ಯಕ್ತವಾಗುತ್ತಿದೆ. ರೈತರು ಸರ್ಕಾರದ ವಿರುದ್ಧ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ.

## ಪಾವಗಡದಲ್ಲಿ ನಕ್ಸಲ್ ಚಟುವಟಿಕೆ ದೃಢಪಟ್ಟರೆ ಎಎನ್‌ಎಫ್ ನಿಯೋಜನೆ

**ಬೆಂಗಳೂರು:** ತುಮಕೂರು ಜಿಲ್ಲೆಯ ಪಾವಗಡದಲ್ಲಿ ನಕ್ಸಲ್ ಚಟುವಟಿಕೆ ದೃಢಪಟ್ಟರೆ ಹೆಚ್ಚುವರಿ ಪಡೆ ನಿಯೋಜಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಮಾಧ್ಯಮಗಳ ಜೊತೆ ಶುಕ್ರವಾರ ಮಾತನಾಡಿ ಪಾವಗಡದಲ್ಲಿ ನಕ್ಸಲ್ ಚಟುವಟಿಕೆಗೆ ಸಂಬಂಧಿಸಿದ ಪೋಸ್ಟರ್‌ಗಳು ಕಾಣಿಸಿಗಿಕೊಂಡಿರುವ ವರದಿಗಳಿಗೆ ಪ್ರತಿಕ್ರಿಯಿಸಿದ ಅವರು, ಈ ಬೆಳವಣಿಗೆಯನ್ನು ಗಮನಿಸಿದ್ದೇನೆ. ಅಲ್ಲಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯೊಂದಿಗೆ ಈ ಕುರಿತು ಚರ್ಚಿಸುವುದಾಗಿ ತಿಳಿಸಿದರು.

ಕರ್ನಾಟಕವನ್ನು ನಕ್ಸಲ್ ಮುಕ್ತ ರಾಜ್ಯ ಎಂದು ಘೋಷಿಸಲಾಗಿದ್ದರೂ, ನಕ್ಸಲ್ ನಿಗ್ರಹ ಪಡೆ (ಎಎನ್‌ಎಫ್) ಅನ್ನು ಸಂಪೂರ್ಣವಾಗಿ ವಿಸರ್ಜಿಸಲಾಗಿಲ್ಲ. ಈ ಪಡೆಯ



ಅರ್ಧದಷ್ಟು ಸಿಬ್ಬಂದಿಯನ್ನು ಕೋಮು ಗಲಭೆಗಳನ್ನು ನಿಯಂತ್ರಿಸುವ ಉದ್ದೇಶದಿಂದ ವಿಶೇಷ ಕಾರ್ಯಾಚರಣೆ ಪಡೆಗೆ (ಎಸ್‌ಎಎಫ್) ಪರಿವರ್ತಿಸಲಾಗಿದೆ. ಉಳಿದ ಸಿಬ್ಬಂದಿ ನಕ್ಸಲ್ ನಿಗ್ರಹ ಘಟಕವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಒಂದು ವೇಳೆ ವರದಿಯಂತೆ ಪಾವಗಡದಲ್ಲಿ ನಕ್ಸಲ್ ಚಟುವಟಿಕೆ ದೃಢಪಟ್ಟರೆ ತುಮಕೂರಿಗೆ ನಕ್ಸಲ್ ನಿಗ್ರಹ ಪಡೆಯನ್ನು ರವಾನಿಸಲಾಗುವುದು ಎಂದು ಸಚಿವರು ಹೇಳಿದರು.

## ರಾಜಕೀಯ ನಿವೃತ್ತಿ ಚರ್ಚೆ ಬೇಡ

### ಮಾಜಿ ಸಿಎಂ ಸಿದ್ದರಾಮಯ್ಯಗೆ ರಾಹುಲ್ ಗಾಂಧಿ ಸಲಹೆ

**ನವದೆಹಲಿ:** ಸಾರ್ವಜನಿಕವಾಗಿ ರಾಜಕೀಯ ನಿವೃತ್ತಿ ಕುರಿತು ಪದೇ ಪದೇ ಹೇಳಿಕೆ ನೀಡಬೇಡಿ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲೋಕಸಭೆ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ ಮಹತ್ವದ ಸಲಹೆ ನೀಡಿದ್ದಾರೆ.



ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ್ದ ಸಿದ್ದರಾಮಯ್ಯ ಅವರೊಂದಿಗೆ ರಾಜ್ಯ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚಿಸಿದರು. ಈ ವೇಳೆ ರಾಜಕೀಯ ನಿವೃತ್ತಿ ಬಗ್ಗೆ ಸಾರ್ವಜನಿಕವಾಗಿ ಮಾತನಾಡುವುದರಿಂದ ಪಕ್ಷದ ಕಾರ್ಯಕರ್ತರಲ್ಲಿ ಗೊಂದಲ ಮೂಡುವುದರ ಜೊತೆಗೆ ಸಾರ್ವಜನಿಕ ವಲಯಕ್ಕೂ ತಪ್ಪು ಸಂದೇಶ ರವಾನೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಮುಂದಿನ ದಿನಗಳಲ್ಲಿ ಇಂತಹ ಬಹಿರಂಗ ಹೇಳಿಕೆಗಳನ್ನು ನೀಡದಿರುವುದು ಪುಟ 2ಕ್ಕೆ



## ಕೈ ನಾಯಕರ ವಿರುದ್ಧ ಆರ್.ರಾಜೇಂದ್ರ ಅಸಮಾಧಾನ

### ಕೆ.ಎನ್.ರಾಜಣ್ಣ ವಿರುದ್ಧ ಪಕ್ಷದೊಳಗೆ ವ್ಯವಸ್ಥಿತ ಪಿತೂರಿ ಆರೋಪ

**ತುಮಕೂರು:** ಮಾಜಿ ಸಚಿವ ಕೆ.ಎನ್. ರಾಜಣ್ಣಗೆ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೈತಪ್ಪಿರುವ ವಿಚಾರದಲ್ಲಿ ಅವರ ಪುತ್ರ, ವಿಧಾನ ಪರಿಷತ್ ಸದಸ್ಯ ಆರ್. ರಾಜೇಂದ್ರ, ಕಾಂಗ್ರೆಸ್ ನಾಯಕತ್ವದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ರಾಜೇಂದ್ರ, ನಮ್ಮ ತಂದೆಯ ರಾಜಕೀಯ ಬೆಳವಣಿಗೆಯನ್ನು ಸಹಿಸದೆ ಪಕ್ಷದೊಳಗೆ ವ್ಯವಸ್ಥಿತ ಪಿತೂರಿ ನಡೆಸಲಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ಯಾವುದೇ ಬಲವಾದ ಕಾರಣ ಇಲ್ಲದಿದ್ದರೂ ಕೆ.ಎನ್.ರಾಜಣ್ಣ ಅವರನ್ನು ಈ ಹಿಂದೆ ಸಚಿವ ಸ್ಥಾನದಿಂದ ಕೈಬಿ



ಡಲಾಯಿತು. ನೂತನ ಸಂಪುಟ ರಚನೆ ವೇಳೆ ಸ್ಥಾನ ಸಿಗುವ ಭರವಸೆ ಹುಸಿಯಾಯಿತು. ಕೊನೆಗೆ ಸಿದ್ದರಾಮಯ್ಯ ಅವರು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೊಡಿಸುವುದಾಗಿ ಭರವಸೆ ನೀಡಿ ಪ್ರಯತ್ನವನ್ನೂ ಮಾಡಿದ್ದರು. ಆದರೆ ಕೆಲವರ ಸ್ವಜನಪಕ್ಷಪಾತ ಹಾಗೂ ಕಾಣದ ಕೈಗಳ ವ್ಯವಸ್ಥಿತ ಪಿತೂರಿಯಿಂದ ಆ ಹುದ್ದೆಯೂ ತಪ್ಪಿಹೋಗಿದೆ. ಪುಟ 2ಕ್ಕೆ

### ರಾಜಣ್ಣಗೆ ಕಾಂಗ್ರೆಸ್ ಅತ್ಯಂತ ಕೀಳಾಗಿ ನಡೆಸಿಕೊಳ್ಳುತ್ತಿದೆ

**ತುಮಕೂರು:** ಕಾಂಗ್ರೆಸ್ ಪಕ್ಷದಲ್ಲಿ ಕೆ.ಎನ್.ರಾಜಣ್ಣ ಅವರನ್ನು ಅತ್ಯಂತ ಕೀಳಾಗಿ ನಡೆಸಿಕೊಳ್ಳಲಾಗುತ್ತಿದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಇದರಿಂದ ಭಾರಿ ಹಿನ್ನಡೆಯಾಗಲಿದೆ. ಈ ಹಿಂದೆ ರಾಜಣ್ಣರನ್ನು ಕಡೆಗಣಿಸಿದ ಪರಿಣಾಮ ತುಮಕೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಎದುರಿಸಿದ ನಷ್ಟ ಎಲ್ಲರಿಗೂ ತಿಳಿದಿದೆ. ಈಗಲೂ ಅದೇ ರೀತಿ ಮುಂದುವರಿದರೆ ಪಕ್ಷ ಮತ್ತೆ ಅದೇ ರೀತಿಯ ಪುಟ 2ಕ್ಕೆ

## ಹಿಟ್ & ರನ್‌ಗೆ ಮೂವರು ಬಲಿ

**ಚಾಮರಾಜನಗರ:** ಹನೂರು ತಾಲೂಕಿನ ಹುಲಸುಗುಡ್ಡೆ ಬಳಿ ನಡೆದ ಅಪಘಾತದಲ್ಲಿ ಹಿಟ್ & ರನ್‌ಗೆ ಮೂವರು ಬಲಿಯಾಗಿದ್ದಾರೆ. ರಮೇಶ್, ಸುರೇಶ್ ಹಾಗೂ ಮುನಿಯಪ್ಪ ಮೃತ ದುರ್ದೈವಿಗಳು.

ಹನೂರು ತಾಲೂಕಿನ ಕೊಪ್ಪ ಗ್ರಾಮದ ಮೂವರೂ ಬೈಕ್‌ನಲ್ಲಿ ಹನೂರಿನಿಂದ ಕೊಳ್ಳೇಗಾಲ ಕಡೆಗೆ ತೆರಳುತ್ತಿದ್ದರು. ಬೈಕ್‌ಗೆ ಅಪರಿಚಿತ ವಾಹನ ಡಿಕ್ಕಿಯಾಗಿದೆ. ಸ್ಥಳದಲ್ಲೇ ಸವಾರರಿಬ್ಬರು ಸಾವನ್ನಪ್ಪಿದ್ದು, ಮತ್ತೊಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಸಾವ



ನ್ನಪ್ಪಿದ್ದಾರೆ. ಅಪಘಾತದ ಬಳಿಕ ವಾಹನ ನಿಲ್ಲಿಸದೆ ಚಾಲಕ ಪರಾರಿಯಾಗಿದ್ದಾನೆ. ಡಿಕ್ಕಿ ರಭಸಕ್ಕೆ ಮೃತರ ಕಾಲುಗಳು ಕಟ್ ಆಗಿವೆ. ಹನೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಕಸ್ತೂರಿ ರಂಗನ್ ವರದಿ ಚರ್ಚೆಗೆ ವಿಶೇಷ ಅಧಿವೇಶನ

ಕಸ್ತೂರಿ ರಂಗನ್ ವರದಿಯನ್ನು 3–4 ಬಾರಿ ಕೇಂದ್ರ ಸರ್ಕಾರ ವಾಪಸ್ ಕಳುಹಿಸಿದೆ. ನಮಗೊಂದು ನ್ಯಾಯ, ಕೇರಳಕ್ಕೆ ಒಂದು ನ್ಯಾಯ ನೀಡಲಾಗಿದೆ. ಈ ಬಗ್ಗೆ ಚರ್ಚೆ ನಡೆಸಲು ವಿಶೇಷ ಅಧಿವೇಶನ ಕರೆಯಲಾಗುತ್ತದೆ ಎಂದು ಸಿಎಂ ಡಿ. ಕೆ.ಶಿವಕುಮಾರ್ ಭರವಸೆ ನೀಡಿದರು. ಕಬಿನಿಗೆ ತೆರಳಿದಾಗ ಅಲ್ಲಿನ ವನ್ಯಜೀವಿ ಸಂಪತ್ತು ನೋಡಿ ಬೆರಗಾಗಿ ಹೋದೆ. ಕೆಲವೇ ಹೊತ್ತಿನಲ್ಲಿ 250ಕ್ಕೂ ಹೆಚ್ಚು ಆನೆಗಳನ್ನು ನೋಡಿದೆ. ಅಷ್ಟು ಸಂಪದ್ಭರಿತವಾಗಿ ನಮ್ಮ ನಾಡಿನ ವನ್ಯಜೀವಿ ಸಂಪತ್ತಿದೆ. ಮನುಷ್ಯನಿಗೂ ಹಸಿರಿಗೂ ವಿಶೇಷ ಸಂಬಂಧವಿದೆ ಎಂದರು.

## ಅಕ್ರಮ ಶಸ್ತ್ರಾಸ್ತ್ರ ಒಪ್ಪಿಸಲು ಸೂಚನೆ

### ನ.1ರೊಳಗೆ ಸರ್ಕಾರಕ್ಕೆ ಒಪ್ಪಿಸದಿದ್ದರೆ ಕಠಿಣ ಕ್ರಮ: ಸಿಎಂ ಡಿಕೆಶಿ ಎಚ್ಚರಿಕೆ

**ಬೆಂಗಳೂರು:** ರಾಜ್ಯದಲ್ಲಿ ಪರವಾನಗಿ ಇಲ್ಲದ ಅಕ್ರಮ ಬಂದೂಕು ಶಸ್ತ್ರಾಸ್ತ್ರ ಹೊಂದಿರುವವರು ನವೆಂಬರ್ 1ರೊಳಗೆ ಸರ್ಕಾರಕ್ಕೆ ಒಪ್ಪಿಸಬೇಕು. ಇಲ್ಲದಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗು ವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕು ಮಾರ್ ಎಚ್ಚರಿಕೆ ನೀಡಿದರು.

ನಗರದ ಅರಣ್ಯ ಭವನದಲ್ಲಿ ಶುಕ್ರವಾರ ನಡೆದ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಅವರು ಮಾತನಾಡಿದರು. ಅಕ್ರಮ ಶಸ್ತ್ರಾಸ್ತ್ರಗಳನ್ನು ತಾವಾಗಿಯೇ ಒಪ್ಪಿಸಿದರೆ ಯಾವುದೇ ಪ್ರಕರಣ ದಾಖಲಿಸುವುದಿಲ್ಲ. ಕೆಲವು ಅರಣ್ಯ ಇಲಾಖೆ ಸಿಬ್ಬಂದಿ ಪರವಾನಗಿ ಇಲ್ಲದೇ ಇರುವ ಬಂದೂಕು



ಗಳಿಂದಲೇ ಜೀವ ಕಳೆದುಕೊಂಡಿದ್ದಾರೆ. ನಿಮ್ಮ ರಕ್ಷಣೆಗಾಗಿ ಬಂದೂಕು ಇಟ್ಟುಕೊಳ್ಳುವುದಾದರೆ ಪರವಾನಗಿ ಪಡೆಯಿರಿ ಎಂದು ಸಲಹೆ ನೀಡಿದರು.

ಈ ಹಿಂದೆ ರಾಮಮೂರ್ತಿ ಎನ್ನುವ ಹಿರಿಯ ಅಧಿಕಾರಿ ಅನೇಕರು ಅಕ್ರಮ ನಾಡ ಬಂದೂಕು ಗಳನ್ನು ಹೊಂದಿರುವ ಬಗ್ಗೆ ಹೇಳಿದ್ದರು. ಆಗ ನಾನು ನನ್ನ ಕ್ಷೇತ್ರದಲ್ಲಿ 300ಕ್ಕೂ ಹೆಚ್ಚು ಬಂದೂ ಕುಗಳನ್ನು ಜನರಿಂದ ಸರ್ಕಾರಕ್ಕೆ ಒಪ್ಪಿಸಿದ್ದೆ. ಇನ್ನೂ ಹೆಚ್ಚಿನ ನಾಡ ಬಂದೂ ಕುಗಳು ಇರುವ ಬಗ್ಗೆ ಸರ್ಕಾರಕ್ಕೆ ಮಾಹಿತಿಯಿದೆ



## ನಮ್ಮ ವಹಿವಾಟು 2 ಸಾವಿರ ಕೋಟಿ

### 2 ಕೋಟಿ ರೂ. ದೊಡ್ಡ ಮೊತ್ತವೇ ಅಲ್ಲ: ಸತೀಶ್ ಜಾರಕಿಹೊಳಿ

**ಬೆಂಗಳೂರು:** ನಮ್ಮ ಕಂಪನಿಗಳ ವಾರ್ಷಿಕ ವಹಿವಾಟು 2 ಸಾವಿರ ಕೋಟಿ ರೂ.ಗೂ ಅಧಿಕವಿದೆ. ಈಗ ಸಿಕ್ಕಿದೆ ಎನ್ನಲಾದ 2 ಕೋಟಿ ರೂ. ನಮಗೆ ದೊಡ್ಡ ಮೊತ್ತವೇ ಅಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಇಡಿ ದಾಳಿ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ ಅವರು, ಕೇಂದ್ರ ತನಿಖಾ ಸಂಸ್ಥೆಗಳ ದುರ್ಬಳಕೆ ಹಾಗೂ ದಾಳಿಯ ಹಿಂದಿನ ರಾಜಕೀಯ ಉದ್ದೇಶಗಳ ಕುರಿತು ತೀವ್ರ ಅಸಮಾಧಾನ ಹೊರಹಾಕಿದರು.

ಇಡಿ ವಶಪಡಿಸಿಕೊಂಡಿರವ ಹಣವನ್ನು ಕಾನೂನುಬದ್ಧವಾಗಿ ಕ್ಲೈಮ್ ಮಾಡುತ್ತೇವೆ. ಆಫ್ರಿಕಾದಲ್ಲಿ ಮೈನಿಂಗ್ ಮತ್ತು ಟ್ರೇಡಿಂಗ್ ಕಂಪನಿ ಆರಂಭಿಸಲು ಯೋಜನೆ ರೂಪಿಸಿದ್ದೆವು. ಹೂಡಿಕೆ ಇನ್ನೂ ಆಗಿಲ್ಲ. ಮಾಡುವ ಪ್ರಕ್ರಿಯೆಯಲ್ಲಿದ್ದೇವೆ. ಇದೇ ವಿದೇಶಿ ಹೂಡಿಕೆ ವಿಚಾರ ಮುಂದಿ



ಟ್ಟುಕೊಂಡು ದಾಳಿ ನಡೆಸಲಾಗಿದೆ. ಮಗ ಮತ್ತು ಮಗಳ ಹೆಸರಿನಲ್ಲಿ ಕಂಪನಿ ಮಾಡಿರುವುದು ನಿಜ. ಈ ಸಂಬಂಧ ಆದಾಯ ತೆರಿಗೆ ಇಲಾಖೆಗೆ ಈಗಾಗಲೇ ಎಲ್ಲಾ ದಾಖಲೆ ಒದಗಿಸಿದ್ದೇವೆ. ಇಡಿ ಕೇಳಿದಾಗಲೂ ಅಗತ್ಯ ದಾಖಲೆ ನೀಡುತ್ತೇವೆ ಎಂದು ವಿವರಿಸಿದರು.

ನಾನು ಎಲ್ಲಿಯೂ ಜಾತಿ ವಿಚಾರ ತಂದು ಸಮರ್ಥಿಸಿಕೊಳ್ಳುವುದಿಲ್ಲ. ತಪ್ಪು ಮಾಡಿದರೆ ಜಾತಿ ತರಲು ಸಾಧ್ಯವಿಲ್ಲ. ನಾವು ಪುಟ 2ಕ್ಕೆ

### ಡಿಕೆಶಿ ಎಚ್ಚರಿಕೆ ನೀಡಿದ್ದರು!

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈ ಮೊದಲೇ ಸಚಿವ ಸಂಪುಟ ಸಭೆಯಲ್ಲಿ ನಮ್ಮನ್ನು ಟಾರ್ಗೆಟ್ ಮಾಡಿ ದಾಳಿ ನಡೆಸುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದರು. ದಾಳಿ ನಡೆದ ಬಳಿಕ ರಾತ್ರಿಯೇ ಸಿಎಂ ಭೇಟಿ ನೀಡಿ, ಕಾನೂನು ಹೋರಾಟ ನಡೆಸೋಣ ಎಂದು ಧೈರ್ಯ ತುಂಬಿದ್ದಾರೆ. ಪಕ್ಷದ ಎಲ್ಲ ನಾಯಕರು ಬೆಂಬಲಕ್ಕೆ ನಿಂತಿದ್ದಾರೆ. ಇಂದು ನಾನು ಟಾರ್ಗೆಟ್ ಆಗಿದ್ದೇನೆ, ನಾಳೆ ಬೇರೆಯವರು ಆಗಬಹುದು ಎಂಬುದು ಎಲ್ಲರಿಗೂ ಗೊತ್ತಿದೆ. ಈ ಷಡ್ಯಂತ್ರದ ಹಿಂದಿರುವ ವಿರೋಧಿಗಳನ್ನು ಪತ್ತೆ ಹಚ್ಚುವ ಪ್ರಯತ್ನ ಮಾಡುತ್ತೇನೆ ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು.

## ಗೆಳತಿಗೆ 26 ಲಕ್ಷ ಬೆಲೆ ಚಿನ್ನ ಗಿಫ್ಟ್

### ಕೆಪಿಎಸ್‌ಸಿ ಹಗರಣ: ಗ್ಯಾನೇಂದ್ರ ಲವ್ ಸ್ಟೋರಿ ಬಯಲು

**ಬೆಂಗಳೂರು:** ಕೆಪಿಎಸ್‌ಸಿ ಪಶು ವೈದ್ಯಾಧಿಕಾರಿಗಳ ನೇಮಕಾತಿ ಹಗರಣದ ತನಿಖೆ ವೇಳೆ ಐಎಎಸ್ ಅಧಿಕಾರಿಯ ಲವ್ ಸ್ಟೋರಿ ಬಯಲಾಗಿದೆ. ಅಕ್ರಮ ಗಳಿಕೆ ಹಣವನ್ನು ಐಎಎಸ್ ಅಧಿಕಾರಿ ಗ್ಯಾನೇಂದ್ರ ಗೆಳತಿಗೆ ಗಿಫ್ಟ್ ಕೊಡುವ ರೂಪದಲ್ಲಿ ಚಿನ್ನದ ಮೇಲೆ ಹೂಡಿಕೆ ಮಾಡಿರುವುದು ಪತ್ತೆ ಆಗಿದೆ.

ಅಕ್ರಮದ ಹಣದಲ್ಲಿ ಗ್ಯಾನೇಂದ್ರ ಕುಮಾರ್ ಮೋಜುಮಸ್ತಿ ಮಾಡಿದ್ದ ಅನ್ನೋ ಅನುಮಾನ ಮೂಡಿದೆ. ತನಿಖೆ ವೇಳೆ ಗ್ಯಾನೇಂದ್ರಗೆ ಅಯೋಧ್ಯೆ ಮೂಲದ ಗೆಳತಿ ಇದ್ದು, ಆಕೆಗೆ ಅಕ್ರಮದ ಹಣದಲ್ಲಿ 26 ಲಕ್ಷ ಬೆಲೆಯ ಚಿನ್ನಾಭರಣ ಗಿಫ್ಟ್ ಕೊಟ್ಟಿದ್ದಾನೆ.

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ಅಕ್ರಮ ನೇಮಕಾತಿ ಪ್ರಕರಣದ ತನಿಖೆ ಮತ್ತಷ್ಟು ಚುರು



ಕುಗೊಂಡಿದೆ. ಅಭ್ಯರ್ಥಿಗಳಿಂದ ಪಡೆದಿದ್ದ ಹಣವನ್ನು ಆರೋಪಿಗಳು ಎಲ್ಲಿ ಹೂಡಿಕೆ ಮಾಡಿದ್ದಾರೆ ಎಂಬ ಬಗ್ಗೆ ತನಿಖೆ ನಡೆಯುತ್ತಿದೆ.

ಬೀದರ್ ಲಕ್ಷ್ಮಿ ಸೌಹಾರ್ದ ಕೋ ಆಪರೇಟಿವ್ ಬ್ಯಾಂಕ್‌ಗೆ ಬೇರೆ ಬೇರೆ ಹೆಸರಿನಲ್ಲಿ ಅಭ್ಯರ್ಥಿಗಳಿಂದ ಆರೋಪಿಗಳು ಹಣ ಹಾಕಿಸಿಕೊಳ್ಳುತ್ತಿದ್ದರು. ಬಸವರಾಜ್ ಹೆಸರಿನ ಅಕೌಂಟ್‌ಗೆ ಗ್ಯಾನೇಂದ್ರ ಪುಟ 2ಕ್ಕೆ

### ಸಹೋದರನ ವಿಲ್ಲಾ ಖರೀದಿ

ಐಎಎಸ್ ಅಧಿಕಾರಿ ಗ್ಯಾನೇಂದ್ರ ಅಕ್ರಮದ ಹಣದಲ್ಲಿ ಸಹೋದರ ಕಮಲಾಪತಿ ಹೆಸರಲ್ಲಿ ಬೆಂಗಳೂರಿನಲ್ಲಿ ವಿಲ್ಲಾ ಖರೀದಿ ಮಾಡಿರುವ ಅನುಮಾನವಿದೆ. ಕೆಂಪೇಗೌಡ ವಿಮಾನ ನಿಲ್ದಾಣ ಸಮೀಪ ಕಮಲಾಪತಿ ಹೆಸರಿನಲ್ಲಿ ವಿಲ್ಲಾ ಖರೀದಿಸಿರುವುದು ಸಿಐಡಿ ತನಿಖೆ ವೇಳೆ ಬೆಳಕಿಗೆ ಬಂದಿದೆ. ಅಕ್ರಮ ಹಣದಲ್ಲಿ ವಿಲ್ಲಾ ಖರೀದಿಸಿರೋ ಶಂಕೆ ವ್ಯಕ್ತವಾಗಿದೆ. ಈಗಾಗಲೇ ವಿಲ್ಲಾಗೆ ಭೇಟಿ ನೀಡಿ ಪರಿಶೀಲನೆ ನಡೆಸಿರೋ ಸಿಐಡಿ ತಂಡ ಹಣದ ಮೂಲವನ್ನು ಪತ್ತೆ ಹಚ್ಚುತ್ತಿದ್ದಾರೆ.

# ವಿಜಯಪುರದಲ್ಲಿ ಉಚಿತ ಆರೋಗ್ಯ ಶಿಬಿರ ಆಯೋಜನೆ




ರಾಮನಗರ: ಗ್ರಾಮಗಳನ್ನು ಕೇಂದ್ರೀಕರಿಸಿಕೊಂಡು ಹಲವಾರು ಯೋಜನೆಗಳು, ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ತಾಲ್ಲೂಕಿನ ಕಸಬಾ ವಲಯದ ವಿಜಯಪುರ ಗ್ರಾಮದಲ್ಲಿ ಉಚಿತ ಆರೋಗ್ಯ ಮತ್ತು ನೇತ್ರ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

160ಕ್ಕೂ ಹೆಚ್ಚು ಮಂದಿ ಈ ಶಿಬಿರದ ಉಪಯೋಗ ಪಡೆದುಕೊಂಡರು. ನಾರಾಯಣ ಆಸ್ಪತ್ರೆ ಹಾಗೂ ಐ ದೃಷ್ಟಿ ಕಣ್ಣಿನ ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿ ಈ ಶಿಬರವನ್ನು ನಡೆಸಿಕೊಟ್ಟರು. ಶಿಬಿರವನ್ನು ಗ್ರಾಮದ ಹಿರಿಯರಾದ ಸಿದ್ದರಾಮಯ್ಯ ಮತುತ ನಾರಾಯಣ ಆಸ್ಪತ್ರೆಯ ವೈದ್ಯರಾದ ಜಯಶ್ರೀ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ವೈದ್ಯೆ ಜಯಶ್ರೀ, ಇತ್ತೀಚಿನ ದಿನಗಳಲ್ಲಿ ದೇಹಾರೋಗ್ಯದ ಸಮಸ್ಯೆ ಬಹುತೇಕರನ್ನು ಕಾಡುತ್ತಿದೆ. ಕೆಲವರು ಖಿನ್ನತೆಗೂ ಜಾರುತ್ತಿದ್ದಾರೆ. ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು. ಸ್ವಯಂ ವೈದ್ಯಕೀಯ ಮಾಡಿಕೊಳ್ಳದೆ ವೈದ್ಯರ ಸಲಹೆಯನ್ನು ಪಡೆಯಬೇಕು ಎಂದು ಕರೆ ನೀಡಿದರು. ಇದೇ ವೇಳೆ ಅವರು ಉತ್ತಮ ಆರೋಗ್ಯಕ್ಕೆ ಬೇಕಾದ ಸಲಹೆಗಳನ್ನು ನೀಡಿದರು.ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್‌ನ ತಾಲೂಕು ಯೋಜನಾಧಿಕಾರಿಗಳಾದ ಮುರಳಿಧರ್ ಮಾತನಾಡಿ, ತಮ್ಮ ಸಂಸ್ಥೆಯ ಮೂಲಕ ದೊರೆಯುತ್ತಿರುವ ಆರೋಗ್ಯ ವಿಮಾ ಕಾರ್ಯಕ್ರಮಗಳು ಹಾಗೂ ಅವುಗಳ ಸದ್ಬಳಕೆಯ ಕುರಿತು ಮಾತನಾಡಿದರು. ಆರೋಗ್ಯ ವಿಮೆಗೆ ಸಂಬಂಧಿಸಿದಂತೆ ಸೌಲಭ್ಯ ದೊರೆಯುವ ಅಸ್ಪತ್ರೆಗಳ ಮಾಹಿತಿ ಕೊಟ್ಟರು. ಕಾರ್ಯಕ್ರಮದಲ್ಲಿ ಐ ದೃಷ್ಟಿ ಆಸ್ಪತ್ರೆಯ ತೇಜಸ್ ಹಾಗೂ ಅವರ ತಂಡ, ನಾರಾಯಣ ಆಸ್ಪತ್ರೆಯ ವೈದ್ಯರ ತಂಡ ,ಮೇಲ್ವಿಚಾರಕ ಶ್ರೀನಿವಾಸ್, ಸೇವಾ ಪ್ರತಿನಿಧಿಗಳಾದ ಲತಾ, ಸೌಮ್ಯ, ಆಶಾ ಮತ್ತು ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

# ಮೈಸೂರಲ್ಲೂ ಬ್ಯಾಂಕ್ ನೌಕರರ ಮುಷ್ಕರ




ಮೈಸೂರು: ದೇಶಾದ್ಯಂತ ಬ್ಯಾಂಕ್ ಒಕ್ಕೂಟಗಳ ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್ ಕರೆ ನೀಡಿರುವ ದೇಶವ್ಯಾಪಿ ಮುಷ್ಕರಕ್ಕೆ ಮೈಸೂರಿನಲ್ಲೂ ಬ್ಯಾಂಕ್ ಸಿಬ್ಬಂದಿಗಳು ಬೃಹತ್ ಪ್ರತಿಭಟನೆ ನಡೆಸಿ ಬೆಂಬಲ ಸೂಚಿಸಿದರು.

ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್ ಜಿಲ್ಲಾ ಸಂಘಟನೆಯಿಂದ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು. ಸರಸ್ವತಿಪುರಂನ ಆಡಳಿತ ಕಚೇರಿಯಿಂದ ಪ್ರಾರಂಭಗೊಂಡ ಪ್ರತಿಭಟನಾ ಮೆರವಣಿಗೂ ಸಾಹುಕಾರ್ ಚೆನ್ನಯ್ಯ ಮಾರ್ಗವಾಗಿ ತೆರಳಿ ಮಾರುತಿ ದೇವಾಲಯ ರಸ್ತೆ, ಕಾಮಾಕ್ಷಿ ರಸ್ತೆ, ವಿಶ್ವಮಾನವ ಜೋಡಿ ರಸ್ತೆ ಮೂಲಕ ಕೇಂದ್ರ ಕಚೇರಿ ತಲುಪಿತು. ಯೂಎಫ್ ಬಿಯುನ ಸಂಚಾಲಕ ಪ್ರೇಮ್ ಕುಮಾರ್ ಮಾತನಾಡಿ, ವಾರದಲ್ಲಿ 5 ದಿನಗಳು ಕೆಲಸದ ದಿನವಾಗಿ ಪರಿಗಣಿಸಿ ಉಳಿದ ಎಲ್ಲಾ ಶನಿವಾರ ಮತ್ತು ಭಾನುವಾರ ರಜೆ ಘೋಷಿ ಸಬೇಕು. ( ಈ ಸಂಬಂಧ 2024 ಮಾರ್ಚ್ ನಲ್ಲೇ ಒಪ್ಪಂ ದವಾಗಿದ್ದರೂ ಸರ್ಕಾರ ಅಧಿಸೂಚನೆ ಹೊರಡಿಸಿಲ್ಲ).ಪಿಂಚಣಿ ಸೌಲಭ್ಯಗಳ ಸುಧಾರಣೆ. ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ ಬದಲು ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸುವುದು ಸೇರಿ ಹಲವು ಬೇಡಿಕೆ ಈಡೇರಿಸಬೇಕೆಂದು ಆಗ್ರಹಿಸಿದರು. ಉಪ ಸಂಚಾಲಕ ಕಲ್ಯಾಣ್, ಎಐಬಿಒಎ ಪ್ರಾದೇಶಿಕ ಕಾರ್ಯದರ್ಶಿ ಆನಂದ್ ಉಪಸ್ಥಿತರಿದ್ದರು.

**ಮೊದಲ ಪುಟದಿಂದ**

## ವಹಿವಾಟು 2 ಸಾವಿರ ಕೋಟಿ

ಯಾವುದೇ ತಪ್ಪು ಮಾಡಿಲ್ಲ, ಹೀಗಾಗಿ ಇದನ್ನು ಸಂಪೂರ್ಣವಾಗಿ ಕಾನೂನಾತ್ಮಕವಾಗಿ ಎದುರಿಸುತ್ತೇವೆ ಎಂದು ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದರು. ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಸಚಿವರು, ಕಳೆದ 10 ವರ್ಷಗಳಿಂದ ಕೇವಲ ಕಾಂಗ್ರೆಸ್, ಆಮ್ ಆದ್ಮಿ ಪಾರ್ಟಿ, ಎನ್‌ಸಿಪಿ ಸೇರಿದಂತೆ ವಿರೋಧ ಪಕ್ಷಗಳ ನಾಯಕರನ್ನೇ ಗುರಿಯಾಗಿಸಿ ದಾಳಿ ನಡೆಸಲಾಗುತ್ತಿದೆ. ಬಿಜೆಪಿಯವರ ಮೇಲೆ ಇಂತಹ ದಾಳಿಗಳು ಏಕೆ ನಡೆಯುತ್ತಿಲ್ಲ? ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರನ್ನೇ ಟಾರ್ಗೆಟ್ ಮಾಡಿದ ಇತಿಹಾಸವಿದೆ. ರಾಜಕೀಯವಾಗಿ ನಮ್ಮನ್ನು ಕುಗ್ಗಿಸುವ ಪ್ಲಾನ್ ಇದಾಗಿರಬಹುದು. ಎಂದರು.

## ಗೆಳತಿಗೆ 26 ಲಕ್ಷ ಬೆಲೆ ಚಿನ್ನ ಗಿಫ್ಟ್

ಅಭ್ಯರ್ಥಿಗಳಿಂದ ಹಣ ಹಾಕಿಸಿಕೊಂಡಿದ್ದ. ಬೆಂಗಳೂರಿನ ಡಿಕನ್ಸನ್ ರಸ್ತೆಯ ಪ್ರತಿಷ್ಠಿತ ಜ್ಯುವೆಲ್ಲರಿ ಶಾಪ್‌ಗೆ ಗರ್ಲ್‌ಫ್ರೆಂಡ್ ಕರೆದೊಯ್ದಿದ್ದ ಗ್ಯಾನೇಂದ್ರ 26 ಲಕ್ಷ ಮೌಲ್ಯದ ಚಿನ್ನದ ಆಭರಣವನ್ನು ಕೊಡಿಸಿದ್ದ. ಈ ಬಗ್ಗೆ ರಸೀದಿ ಹಾಗೂ ಸಿಸಿಟಿವಿ ಫುಟೇಜ್ ಸಿಐಡಿಗೆ ಸಿಕ್ಕಿವೆ. ಗ್ಯಾನೇಂದ್ರ ಗೆಳತಿ ಅಯೋಧ್ಯ ಮೂಲದ ಯುವತಿ ಅಂತಾ ಗೊತ್ತಾಗಿದೆ. ಈ ಬಗ್ಗೆ ಆಕೆಗೆ ನೊಟೀಸ್ ಕೊಟ್ಟು ವಿಚಾರಣೆ ಕೂಡ ನಡೆಸಿದೆ. ವಿಚಾರಣೆ ವೇಳೆ ಸಾಲದ ಕಥೆ ಕಟ್ಟಿದ್ದಾಳೆ. ನಾನು ಅವನಿಗೆ 25 ಲಕ್ಷ ಸಾಲ ಕೊಟ್ಟಿದ್ದೆ. ಆದರೆ ಅವರು ಹಣದ ಬದಲು ಗೋಲ್ಡ್ ರಿಟರ್ನ್ ಕೊಟ್ಟಿದ್ದಾರೆ. ಹಗರಣಕ್ಕೂ ನನಗೂ ಯಾವ ಲಿಂಕ್ ಇಲ್ಲ ಎಂದು ಯುವತಿ ಬಾಯ್ಬಿಟ್ಟಿದ್ದಾಳೆ.

## ಸಚಿವರ ಮಧ್ಯ ರಾತ್ರಿ ಭೇಟಿ

ಸತೀಶ್ ಜಾರಕಿಹೊಳಿ ಅವರ ನಿವಾಸದ ಮೇಲೆ ಇಡಿ ದಾಳಿ ನಡೆಸಿ ದೊಡ್ಡ ಪ್ರಮಾಣದ ಹಣವನ್ನು ಸೀಜ್ ಮಾಡಿದೆ. ಅಲ್ಲದೆ, ಕೆಲವೊಂದು ಮಹತ್ವದ ದಾಖಲೆಗಳನ್ನು ಸಂಗ್ರಹ ಮಾಡಿದೆ. ಇಡಿ ದಾಳಿ ಮುಕ್ತಾಯಗೊಂಡ ಬೆನ್ನಲ್ಲೇ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಸೇರಿದಂತೆ ಹಿರಿಯ ಸಚಿವರು, ಶಾಸಕರು ಜಾರಕಿಹೊಳಿ ನಿವಾಸಕ್ಕೆ ತೆರಳಿ ಧೈರ್ಯ ತುಂಬಿದ್ದಾರೆ. ಬಳಿಕ ಸ್ವತಃ ಡಿಕೆ ಶಿವಕುಮಾರ್ ಅವರು ತಡ ರಾತ್ರಿ ಒಂದು ಗಂಟೆ ಸುಮಾರಿಗೆ ಸತೀಶ್ ಮನೆಗೆ ಭೇಟಿ ನೀಡಿದ್ದಾರೆ. ಈ ಸಂದರ್ಭದಲ್ಲಿ ಇಡಿ ದಾಳಿಯ ವಿಚಾರವಾಗಿ ಚರ್ಚೆ ನಡೆಸಿದ್ದಾರೆ.

## ಅಕ್ರಮ ಶಸ್ತ್ರಾಸ್ತ್ರ ಒಪ್ಪಿಸಲು ಸೂಚನೆ

ಎಂದು ಸಿಎಂ ಎಚ್ಚರಿಸಿದರು. ಅರಣ್ಯ ಅಧಿಕಾರಿಗಳು ಅಭಿವೃದ್ಧಿ ಕೆಲಸಗಳ ಪರವಾಗಿ ನಿಲ್ಲಿ. ಅರಣ್ಯ ಇಲಾಖೆಯ ಅಧಿಕಾರಿಗಳು ಕೆಲವೊಂದು ವಿಚಾರದಲ್ಲಿ ಅತಿಯಾಗಿ ವರ್ತಿಸುತ್ತೀರಿ. ಅಭಿವೃದ್ಧಿ ಕೆಲಸಗಳಿಗೆ ಅಡ್ಡ ಬರಬಾ ರದು. ಕೆಲವೊಂದು ವಿನಾಯಿತಿಗಳನ್ನು ನೀಡಬೇಕು ಎಂದು ತಿಳಿಸಿದರು. ಈ ಭೂಮಿ ನಮಗೆ ಸೇರಿದ್ದಲ್ಲ. ಆದರೆ ಭೂಮಿ ಕಾಪಾಡಬೇಕಿರುವುದು ನಮ್ಮ ಕರ್ತವ್ಯ. ಎಷ್ಟೇ ದೊಡ್ಡವರಾದರೂ ಕೊನೆಗೆ ಭೂಮಿಗೆ ಸೇರುತ್ತೇವೆ. ಎಂದರು.

## ಕೀಳಾಗಿ ನಡೆಸಿಕೊಳ್ಳುತ್ತಿದೆ

ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ರಾಜೇಂದ್ರ ಕಾಂಗ್ರೆಸ್ ನಾಯಕರಿಗೆ ಎಚ್ಚರಿಕೆ ನೀಡಿದರು.ಮಾಜಿ ಸಚಿವ ಬಿ.ನಾಗೇಂದ್ರ ಅವರ ತೆರವಾದ ಸ್ಥಾನದ ಕುರಿತು ಮಾತನಾಡಿದ ಅವರು, ನಾಗೇಂದ್ರ ಅವರ ಸಚಿವ ಸ್ಥಾನವನ್ನು ಕೆ.ಎನ್.ರಾಜಣ್ಣ ಅವರಿಗೆ ನೀಡಿ ಎಂದು ನಾವು ಕೇಳುತ್ತಿಲ್ಲ. ಎಸ್‌ಟಿ ಮೀಸಲಾತಿ ಕೋಟಾದ ಸಚಿವ ಸ್ಥಾನವನ್ನು ಸಮುದಾಯದ ಇತರ ಯಾವುದೇ ಅರ್ಹ ಎಸ್‌ಟಿ ನಾಯಕರಿಗೆ ನೀಡಲಿ ಎಂದು ಆಗ್ರಹಿಸಿದರು.

## ಆರ್.ರಾಜೇಂದ್ರ ಅಸಮಾಧಾನ

ಬದಲಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣದ ಅಭ್ಯರ್ಥಿಗೆ ಅಧ್ಯಕ್ಷ ಸ್ಥಾನ ಒಲಿದಿದೆ ಎಂದು ಬೇಸರ ವ್ಯಕ್ತಪಡಿಸಿದರು. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ನಿವಾಸಕ್ಕೆ ತಾವು ನೀಡಿದ ಭೇಟಿಯ ಬಗ್ಗೆ ಪ್ರತಿಕ್ರಿಯಿಸಿ, ಅದು ಕೇವಲ ಸೌಹಾರ್ದಯುತ ಭೇಟಿಯಷ್ಟೇ ಆಗಿತ್ತು. ಆ ಭೇಟಿಗೆ ಯಾವುದೇ ರಾಜಕೀಯ ಬಣ್ಣ ಕಟ್ಟುವ ಅಗತ್ಯವಿಲ್ಲ ಎಂದರು.

## ರಾಜಕೀಯ ನಿವೃತ್ತಿ ಚರ್ಚೆ ಬೇಡ

ಸೂಕ್ತ ಎಂದು ರಾಹುಲ್ ಗಾಂಧಿ ಸಲಹೆ ನೀಡಿದರು. ರಾಹುಲ್ ಗಾಂಧಿ ಸಲಹೆಗೆ ಸಕಾರಾತ್ಮಕವಾಗಿ ಉತ್ತರಿಸಿದ ಸಿದ್ದ ರಾಮಯ್ಯ ಅವರು, ತಮ್ಮ ಹೇಳಿಕೆ ಹಿಂದಿನ ಸ್ಪಷ್ಟ ಉದ್ದೇಶವನ್ನು ವಿವರಿಸಿದ್ದಾರೆ. ನಾನು ಚುನಾವಣಾ ರಾಜಕೀಯದಿಂದ ನಿವೃತ್ತಿ ಯಾಗುವ ಕುರಿತು ಅಷ್ಟೇ ಮಾತನಾಡಿದ್ದೇನೆ. ವಯಸ್ಸಿನ ಕಾರಣಕ್ಕೆ ಮುಂದಿನ ದಿನಗಳಲ್ಲಿ ಚುನಾವಣಾ ಕಣಕ್ಕಿಳಿದು ಸ್ಪರ್ಧಿಸುವುದು ಕಷ್ಟವಾಗಬಹುದು ಎಂದಿದ್ದೇನೆಯೇ ಹೊರತು, ಸಕ್ರಿಯ ರಾಜಕೀಯದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಸಾರ್ವಜನಿಕ ಜೀವನ, ಪಕ್ಷ ಸಂಘಟನೆ ಹಾಗೂ ಕಾಂಗ್ರೆಸ್‌ನ ಎಲ್ಲ ಚಟುವಟಿಕೆಗಳಲ್ಲಿ ಎಂದಿನಂತೆ ಸಕ್ರಿಯವಾಗಿ ತೊಡಗಿಸಿಕೊಳ್ಳುತ್ತೇನೆ ಎಂದು ಸ್ಪಷ್ಟಪಡಿಸಿದ್ದಾರೆ.

# ಕೋಟೆ ಡಿಪೋದ ನಾಲ್ವರಿಗೆ ನೋಟಿಸ್

## ಸಾರಿಗೆ ಸಮಸ್ಯೆಗೆ ಸಿಎಂ ಕಚೇರಿ ಸ್ಪಂದನೆ | ವರದಿ ಕೇಳಿದ ವಿಶೇಷ ಕರ್ತವ್ಯಾಧಿಕಾರಿ

**ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ತಾಲೂಕಿನಲ್ಲಿ ಸಂಚರಿಸುತ್ತಿದ್ದ ಸುರಕ್ಷತೆಯಿಲ್ಲದ ಸಾರಿಗೆ ಬಸ್ಸುಗಳ ಕುರಿತ ವರ್ತಮಾನ ದಿನ ಪತ್ರಿಕೆ ವರದಿಗೆ ಸಿಎಂ ಕಚೇರಿಯಿಂದ ಸ್ಪಂದನೆ ದೊರೆತಿದೆ. ಬಾಗಿಲು, ಕಿಟಕಿಗಳು ಇಲ್ಲದಿರುವುದು, ಕಿತ್ತಿರುವ ಪಾದಚಾರಿ ಮಾರ್ಗ, ಬಸ್ಸಿನ ಒಳಗೆ ಧೂಳು ತುಂಬಿ ಪ್ರಯಾಣಿಕರ ಆರೋ ಗ್ಯದ ಮೇಲೆ ಭೀರುವ ದುಷ್ಪರಿಣಾಮದ ಕುರಿತು ಸೆ.1ರಂದು ಸುರಕ್ಷತೆಯಿಲ್ಲದ ಸಾರಿಗೆ ಬಸ್ಸುಗಳು ಎಂಬ ಶೀರ್ಷಿಕೆಯಡಿ ವರದಿ ಪ್ರಕಟಿಸಿತ್ತು.

ಕೋಟೆ ಘಟಕದ ಅಧಿಕಾರಿಗಳು ಗ್ರಾಮಾಂತರ ಭಾಗಗಳಿಗೆ ಡಕೋಟ ಬಸ್ಸುಗಳನ್ನು ನಿಯೋಜಿಸುತ್ತಿದ್ದು, ಬಸ್ಸುಗಳ ನಿರ್ವಹಣೆಯಿಲ್ಲದೆ ಕಾಡಂಚಿನ ಗ್ರಾಮಗಳಲ್ಲಿ ಸಂಚರಿಸುವ ಬಸ್ಸುಗಳು ಮಾರ್ಗ ಮಧ್ಯೆ ಕೆಟ್ಟುನಿಲ್ಲುತ್ತಿದ್ದವು. ಇದರಿಂದ ಪ್ರಯಾಣಿಕರು, ಚಾಲಕ, ನಿರ್ವಾಹಕರು ತೊಂದರೆ ಅನುಭವಿಸುತ್ತಿದ್ದರು. ಈ ಬಗ್ಗೆ ಪತ್ರಿಕೆ, ಜೀವದ ಜೊತೆ ಚೆಲ್ಲಾಟ: ಜನರ ಆಕ್ರೋಶ ಎಂಬ ತಲೆಬರಹದಡಿ ವಿಸ್ತೃತ ವರದಿ ಪ್ರಕಟಿಸಿತ್ತು.

ವರದಿ ಗಮನಿಸಿದ ಮುಖ್ಯಮಂತ್ರಿ ವಿಶೇಷ ಕರ್ತವ್ಯಾಧಿಕಾರಿ ಡಾ.ಕೆ. ವೈಷ್ಣವಿ ಅವರು, ದೈನಂದಿನ ಸಾರಿಗೆ ಸಂಚಾರಕ್ಕಾಗಿ ಅವಲಂಬಿಸಿರುವ ಕೆ.ಎಸ್.ಆರ್.ಟಿ.ಸಿ ಬಸ್ಸುಗಳು ಸುರಕ್ಷತೆಯಿಲ್ಲದೆ ಪ್ರಯಾಣಿಕರ ಪ್ರಾಣಕ್ಕೆ ಕುತ್ತಾಗಿ ಸಂಚರಿಸಿರುವ ಕುರಿತು ಪತ್ರಿಕೆ ವರದಿ ಪ್ರಕಟಿಸಿದೆ. ಈ ಕುರಿತು ವಾಸ್ತವಾಂಶದ ಬಗ್ಗೆ ಆದ್ಯತೆಯ ಮೇರೆಗೆ ಪರಿಶೀಲಿಸಿ ತಕ್ಷಣವೇ ಅಗತ್ಯ ಕ್ರಮ ಕೈಗೊಂಡು, ಅನುಪಾಲನಾ ವರದಿಯನ್ನು ಅತೀ ಜರೂರಾಗಿ ನೀಡುವಂತೆ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದಿದ್ದರು.




### ಮುಖ್ಯಮಂತ್ರಿ ಕಚೇರಿಗೆ ವರದಿ

ಪತ್ರ ಬೆನ್ನಲ್ಲೇ ಸೆ.2ರಂದು ಜಿಲ್ಲೆಯ ವಿಭಾಗೀಯ ಯಾಂತ್ರಿಕ ಅಭಿಯಂತರರು ಎಚ್.ಡಿ.ಕೋಟೆ ಘಟಕಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಮಾರ್ಗದಿಂದ ಬಂದ ವಾಹನಗಳನ್ನು ಖುದ್ದಾಗಿ ತಪಾಸಣೆ ಮಾಡಲಾಗಿದೆ. ವಾಹನಗಳು ಸುಸ್ಥಿತಿಯಲ್ಲಿವೆ ಎಂದು ಸಿಎಂ ಕಚೇರಿಗೆ ವರದಿ ಸಲ್ಲಿಸಿದ್ದಾರೆ. ಕೆಲ ಬಸ್ಸುಗಳಲ್ಲಿ ಬಾಗಿಲು ಇಲ್ಲದಿರುವುದು, ಪಾದಚಾರಿ ಮಾರ್ಗ ಕಿತ್ತಿರುವುದು, ಧೂಳು ತುಂಬಿರುವುದನ್ನು ಪತ್ರಿಕೆ ಸಾಕ್ಷಾತ್ ವರದಿ ಮಾಡಿತ್ತು. ಆದರೆ, ಮಾರ್ಗದಿಂದ ಬಂದ ಬಸ್ಸುಗಳನ್ನು ತಪಾಸಣೆ ಮಾಡಲಾಗಿದ್ದು, ಸುಸ್ಥಿತಿಯಲ್ಲಿವೆ ಎಂದು ವರದಿ ಸಲ್ಲಿಕೆ ಮಾಡಿರುವುದು ಅನುಮಾನಕ್ಕೆ ಕಾರಣವಾಗಿದೆ. ಪ್ರಯಾಣಿಕರೇ ಬಸ್ಸನ್ನು ಸುಸ್ಥಿತಿಗೆ ತಂದರೆ ಎಂಬ ಪ್ರಶ್ನೆ ಮೂಡಿದೆ.

### ಗುಜರಿ ಸೇರಿದ ಬೆಂಗಳೂರು ಬಸ್ಸು

ಬೆಂಗಳೂರು ಮಹಾನಗರದಲ್ಲಿ ಕಾರ್ಯನಿರ್ವಹಿಸಿದ್ದ ಕೆಎ-57, ಇ-0093 ಬಸ್ಸನ್ನು 1.5 ವರ್ಷಗಳಿಂದ ಗ್ರಾಮಾಂತರ ಭಾಗಕ್ಕೆ ನಿಯೋಜಿಸಲಾಗಿತ್ತು. ಬಹುತೇಕ ಸರಗೂರು ಮಾರ್ಗದಲ್ಲಿ ಸಂಚರಿಸುತ್ತಿದ್ದ ವಾಹನವು ಪ್ರಯಾಣಿಕರ ಜೀವಕ್ಕೆ ಎರವಾಗುವ ಮುನ್ಸೂಚನೆ ನೀಡಿತ್ತು. ಸೆ.5ರಂದು ಈ ಬಸ್ಸಿನ ಫಿಟ್ನೆಸ್ ಮುಗಿದಿದ್ದು, ಗುಜರಿಗೆ ಸೇರಿಸಲು ಅಧಿಕಾರಿಗಳು ನಿಯಮಾನುಸಾರ ಕ್ರಮ ಕೈಗೊಳ್ಳಲು ಮುಂದಾಗಿದ್ದಾರೆ.

ವರ್ತಮಾನ
ವರದಿ
ಪರಿಣಾಮ

### ಹೆಚ್ಚುವರಿ ಬಸ್ಸುಗಳಿದ್ದರೂ ಡಕೋಟ ಬಸ್ಸನ್ನು ಬಿಟ್ಟಿದ್ದೇಕೆ?

ಎಚ್.ಡಿ.ಕೋಟೆ ಘಟಕದಲ್ಲಿ 96 ರೂಟ್‌ಗಳನ್ನು 101 ವಾಹನಗಳಿಂದ ಕಾರ್ಯಾಚರಣೆ ಮಾಡುತ್ತಿದ್ದು, ಐದು ಹೆಚ್ಚುವರಿ ವಾಹನಗಳಿದ್ದರೂ ಸುಸ್ಥಿತಿಯಲ್ಲಿ ಇರದ ಬಸ್ಸುಗಳನ್ನು ಕಾರ್ಯಾಚರಣೆಗೆ ಒದಗಿಸಿದ್ದೀರಿ. ಎಲ್ಲ ನ್ಯೂನ್ಯತೆಗಳಿಗೆ ನಿಮ್ಮನ್ನೇ ಹೊಣೆಗಾರರನ್ನಾಗಿಸಬಾರದೇಕೆ ಎಂದು ಪ್ರಶ್ನಿಸಿ, ನೋಟಿಸ್ ತಲುಪಿದ 7 ದಿನಗಳೊಳಗಾಗಿ ಸ್ಪಷ್ಟೀಕರಣಕೊಡದಿದ್ದಲ್ಲಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಸಹಾಯಕ ಕಾರ್ಯಾಧ್ಯಕ್ಷ ಜ್ಞಾನೇಶ್ ರಾವ್, ಮ್ಯಾನೇಜರ್ ತ್ಯಾಗರಾಜ್, ಬಸ್ಸುಗಳನ್ನು ನಿರ್ವಹಣೆ ಮಾಡದಿರುವ ಬಗ್ಗೆ ಪಾಳಿ ಮುಖ್ಯಸ್ಥರಾದ ಸುರೇಶ್ ಹೈಹೊಳೆ, ರಮೇಶ್ ಈಡಿಗಾರ್ ಗೆ ಕೆಎಸ್‌ಆರ್‌ಟಿಸಿಯ ಮೈಸೂರು ಗ್ರಾಮಾಂತರ ವಿಭಾಗದ ತಾಂತ್ರಿಕ ಶಿಲ್ಪಿ ನೋಟಿಸ್ ನೀಡಿದ್ದಾರೆ.

**ಮೊದಲ ಪುಟದಿಂದ**

## 9 ಮಂದಿ ಬಂಧನ

50 ಸಾವಿರ ರೂ. ಪಡೆದುಕೊಳ್ಳಲಾಗುತ್ತಿತ್ತು ಎಂಬ ಮಾಹಿತಿ ಪೊಲೀಸ್ ತನಿಖೆಯಲ್ಲಿ ತಿಳಿದು ಬಂದಿದೆ.

ಏರ್‌ಟೇಲ್‌ಗೆ ಸೇರಿದ ಎರಡು ಸಿಮ್‌ಗಳ ಮೇಲೆ ನಮೂದಿಸಿದ್ದ ನಂಬರ್ ಆಧಾರದಲ್ಲಿ ಈ ನಂಬರ್‌ಗಳು ಯಾವ ಮೊಬೈಲ್‌ಗಳಲ್ಲಿ ಬಳಕೆಯಾಗಿವೆ ಎಂಬುವುದನ್ನು ಸಿಇಐಆರ್ ಪೋರ್ಟಲ್ ಮೂಲಕ ತಾಂತ್ರಿಕ ಮಾಹಿತಿಯನ್ನು ಸಂಗ್ರಹಿಸಿದ್ದಾರೆ. ಈ ಎರಡು ಮೊಬೈಲ್‌ಗಳು ಕೇಂದ್ರ ಕಾರಾಗೃಹದ ವೀಕ್ಷಕ ಸಿಬ್ಬಂದಿ ಶ್ರೀನಿವಾಸ್ ನಾಯ್ಕ ಬಳಿ ಇರುವುದು ಪತ್ತೆಯಾಗಿದೆ. ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ರಾಹುಲ್ ಎಂಬ ಅಪರಿಚಿತನ ಹೆಸರಿನಲ್ಲಿ ಖರೀದಿ ಮಾಡಿರುವುದು ಗೊತ್ತಾಗಿದೆ. ಅಲ್ಲದೇ ಇದೇ ರೀತಿ ಸುಮಾರು 12 ಮೊಬೈಲ್‌ಗಳನ್ನು ಖರೀದಿ ಮಾಡಿ ತನ್ನ ಬಳಿ ಇಟ್ಟುಕೊಂಡು ಅಕ್ರಮವಾಗಿ ಕೇಂದ್ರ ಕಾರಾಗೃಹದೊಳಗೆ ಸರಬರಾಜು ಮಾಡಿರುವುದು ವಿಚಾರಣೆ ವೇಳೆ ಬಹಿರಂಗಗೊಂಡಿದೆ.

ಮತ್ತೊಂದು ಪ್ರಕರಣದಲ್ಲಿ ಸಿಮ್ ನಂಬರ್ ಆಧಾರದಲ್ಲಿ ಮೊಬೈಲ್ ಕಂಪನಿಯೊಂದಿಗೆ ಸಮಾಲೋಚನೆ ನಡೆಸಿದಾಗ ಆ ಮೊಬೈಲ್ ಆಂಧ್ರ ಪ್ರದೇಶದ ಏಜೆನ್ಸಿಯೊಂದಕ್ಕೆ ಮಾರಾಟವಾಗಿರುವುದು ಗೊತ್ತಾಗಿದೆ. ಮೊಬೈಲ್ ಮಾರಾಟದ ಸಂಪೂರ್ಣ ವಿವರಗಳನ್ನು ಪಡೆದು ಪರಿಶೀಲನೆ ಮಾಡಿದಾಗ ಭರತ್ ಅಲಿಯಾಸ್ ಭುವನ್ ಎಂಬ ವ್ಯಕ್ತಿ ಖರೀದಿ ಮಾಡಿರುವುದು ಗೊತ್ತಾಗಿದೆ. ಕಾರಾಗೃಹದಲ್ಲಿರುವ ಭರತ್ ಅಲಿಯಾಸ್ ಕೆಟಿಎಂ ಭರತ್ ಸೂಚನೆಯಂತೆ ಕೇಂದ್ರ ಕಾರಾಗೃಹದ ಮುಖ್ಯ ವೀಕ್ಷಕ ವಿಜಯ್ ಕುಮಾರ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ಹೇಳಿದ್ದಾನೆ.

ಸಿಸಿಬಿ ಪೊಲೀಸರು ನೀಡಿದ ಇನ್ನೊಂದು ಪ್ರಕರಣದಲ್ಲಿ ಕೇಂದ್ರ ಕಾರಾಗೃಹ ಭದ್ರತಾ ವಿಭಾಗ ಬ್ಯಾರಕ್‌ಗಳಲ್ಲಿ ವಿಚಾರಣಾದಿನ

# ಸಮರ್ಪಕ ವಿದ್ಯುತ್‌ಗೆ ಆಗ್ರಹಿಸಿ ಪ್ರತಿಭಟನೆ




**ಮೈಸೂರು:** ಕೃಷಿ ಹಾಗೂ ಗೃಹಬಳಕೆಗೆ ಸಮರ್ಪಕ ವಿದ್ಯುತ್ ಬಿಡುಗಡೆಗೆ ಆಗ್ರಹಿಸಿ ಹಿನಕಲ್ ನಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕೇಂದ್ರ ಕಚೇರಿಗೆ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರೈತರು ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಸಮರ್ಪಕ ವಿದ್ಯುತ್ ಸರಬರಾಜಿಗೆ ಆಗ್ರಹಿಸಿ ರಾಜ್ಯ ಹಾಗೂ ಕೇಂದ್ರದ ಸರ್ಕಾರ ಹಾಗೂ ಸಚಿವರ ವಿರುದ್ಧ ನಾನಾ ಘೋಷಣೆಗಳನ್ನು ಆಕ್ರೋಶ ಹೊರಹಾಕಿದರು. ಪ್ರತಿಭಟನೆ ನೇತೃತ್ವವಹಿಸಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್ ಮಾತನಾಡಿ, ಬರದ ನೆಪದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಕೃಷಿ ಕ್ಷೇತ್ರವನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಸುಮಾರು 30 ಲಕ್ಷಕ್ಕೂ ಹೆಚ್ಚು ಕೃಷಿ ಪಂಪ್‌ಸೆಟ್‌ಗಳಿದ್ದು, ಕೇವಲ ಮೂರು ಗಂಟೆ ಮಾತ್ರ ವಿದ್ಯುತ್ ಪೂರೈಕೆ ಮಾಡುತ್ತಿದ್ದಾರೆ. ಗ್ರಾಮೀಣ ಭಾಗದ ಗೃಹಬಳಕೆ ವಿದ್ಯುತ್ತನ್ನು ಸಹ ಅನಿಮಿತವಾಗಿ ಕಟ್ ಮಾಡುತ್ತಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ಸಾಕಷ್ಟು ತೊಂದರೆ ಆಗುತ್ತಿದೆ. ಇದರಿಂದ ಗ್ರಾಮೀಣ ಭಾಗದ ಮಕ್ಕಳ ವಿದ್ಯಾಭ್ಯಾಸದಲ್ಲಿ ಹಿನ್ನಡೆ ಉಂಟಾಗುವ ಸಾಧ್ಯತೆ ಇದೆ. ಅದೇ ರೀತಿಯಾಗಿ ರಾತ್ರಿ ವೇಳೆ ತೋಟದ ಮನೆಯಲ್ಲಿ ಇರುವ ಕೃಷಿ ಪಂಪ್‌ಸೆಟ್ ಬಳಕೆದಾರರು ಹಾಗೂ ಗೃಹಬಳಕೆದಾರರು ಭಯದ ವಾತಾವರಣದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು. ಕೈಗಾರಿಕೆ ವಲಯಕ್ಕೆ ಪೂರೈಕೆ ಮಾಡುವ ಮಾದರಿಯಲ್ಲಿ ಕೃಷಿ ವಲಯಕ್ಕೂ ಆದ್ಯತೆ ಆಧಾರದ ಮೇರೆಗೆ ವಿದ್ಯುತ್ ನೀಡಬೇಕು. ಇಂಧನ ಸಚಿವರು ಇದರ ಬಗ್ಗೆ ಗಮನ ಹರಿಸದಿದ್ದರೆ ರೈತರು ಉಗ್ರ ಹೋರಾಟದ ಮಾಡುವುದಾಗಿ ಹೇಳಿದರು. ಪ್ರತಿಭಟನೆಯಲ್ಲಿ ಕೆರೆಹುಂಡಿ ರಾಜಣ್ಣ, ಹನುಮಯ್ಯ, ಹಾಲಿನ ನಾಗರಾಜ್, ವಳಗೆರೆ ಗಣೇಶ್, ಕಸುವಿನಹಳ್ಳಿ ಮಂಜೇಶ್, ಮುದ್ದಹಳ್ಳಿ ಮಧು, ದೇವಿರಮ್ಮನಹಳ್ಳಿ ಪುಟ್ಟಸ್ವಾಮಿ, ಹುಂಡಿ ಮಹೇಶ್, ಚಿದಂಬರ, ಬಸವರಾಜು, ನಾಗರಾಜಪ್ಪ, ಹೊನ್ನೇಗೌಡನಹಳ್ಳಿ ಮಹೇಶ್, ಸಿದ್ದಯ್ಯನಹುಂಡಿ ಸೋಮಣ್ಣ, ಕೀರ್ತಿ, ಮಾದಪ್ಪ ವಳಗೆರೆ, ಮಹೇಶ್, ಶಿವಾನಂದ ಮುಂತಾದ ರೈತರು ಹಾಜರಿದ್ದರು.

**ಕುಡಿಯುವ ನೀರು, ರಸ್ತೆ, ಯುಜಿಡಿ, ಚರಂಡಿ ಅಭಿವೃದ್ಧಿಗೆ ಆದ್ಯತೆ:**

# ಪಿರಿಯಾಪಟ್ಟಣ ಅಭಿವೃದ್ಧಿಗೆ 84 ಕೋಟಿ ರೂ.: ಕೆ.ವೆಂಕಟೇಶ್

ಪಿರಿಯಾಪಟ್ಟಣ: ಪಟ್ಟಣದ ಸಮಗ್ರ ಅಭಿವೃದ್ಧಿಗೆ ವಿವಿಧ ಯೋಜನೆಗಳಡಿ ?84 ಕೋಟಿ ಅನುದಾನ ಮಂಜೂರು ಮಾಡಿಸಲಾಗಿದ್ದು, ಬಾಕಿ ಉಳಿದಿರುವ ಕಾಮಗಾರಿಗಳಿಗೆ ಮಾರ್ಚ್ ಒಳಗಾಗಿ ಟೆಂಡರ್ ಕರೆದು ಪೂರ್ಣಗೊಳಿಸಲು ಯೋಜನೆ ರೂಪಿಸಲಾಗಿದೆ ಎಂದು ಶಾಸಕ ಕೆ. ವೆಂಕಟೇಶ್ ತಿಳಿಸಿದರು.

ಪಟ್ಟಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಡಲ್ಟ್ ಯೋಜನೆಯಡಿ ಪಾದಚಾರಿ ಮಾರ್ಗಗಳಿಗೆ ಇಂಟರ್ಲಾಕ್ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಬಹಳ ವರ್ಷಗಳಿಂದ ಪಟ್ಟಣ ವ್ಯಾಪ್ತಿಯಲ್ಲಿ ಅಭಿವೃದ್ಧಿಗೆ ಕೊರತೆಯಾಗಿದ್ದು, ಹೊರವಲಯದಲ್ಲಿ ಮಾತ್ರ ಬಡಾವಣೆಗಳು ಅಭಿವೃದ್ಧಿಯಾಗಿವೆ. ಹೊಸ ಬಡಾವಣೆ ನಿರ್ಮಿಸುವವರು ಕಾನೂನುಬದ್ಧವಾಗಿ ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಯುಜಿಡಿ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಆದರೆ ಕೆಲವರು ನಿವೇಶನಗಳನ್ನು ನಿರ್ಮಿಸಿ ಮಾರಾಟ ಮಾಡಿ ತೆರಳಿರುವುದರಿಂದ ಮೂಲಸೌಕರ್ಯ ಕಲ್ಪಿಸುವ ಹೊಣೆಗಾರಿಕೆ ಸ್ಥಳೀಯ ಆಡಳಿತದ ಮೇಲೆ ಬಿದ್ದಿದೆ ಎಂದು ಹೇಳಿದರು.



ಪಟ್ಟಣದ ಅಭಿವೃದ್ಧಿಗೆ ?84 ಕೋಟಿ ಅನುದಾನ ಮಂಜೂರಾಗಿದ್ದು, ಅಮೃತ್ ಯೋಜನೆಯಡಿ ಕುಡಿಯುವ ನೀರಿನ ಯೋಜನೆಗೆ ?65 ಕೋಟಿ, ಪಟ್ಟಣ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ?12 ಕೋಟಿ, ಅಲ್ಪಸಂಖ್ಯಾತರ ಪ್ರದೇಶಗಳ ಅಭಿವೃದ್ಧಿಗೆ ?2 ಕೋಟಿ ಹಾಗೂ ನೀರಾವರಿ ಇಲಾಖೆಯಿಂದ ಚರಂಡಿ ಅಭಿವೃದ್ಧಿಗೆ ?5 ಕೋಟಿ ಅನುದಾನ ಒದಗಿಸಲಾಗಿದೆ ಎಂದರು. ಕುಡಿಯುವ ನೀರಿನ ಯೋಜನೆ ಅತ್ಯಂತ ಅಗತ್ಯವಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಪಟ್ಟಣದ ಜನತೆಗೆ ಸಂಪೂರ್ಣ ಕಾವೇರಿ ನೀರು ಪೂರೈಸಲು ಅನುಕೂಲವಾಗಲಿದೆ. ಬಾಕಿ ಉಳಿದಿರುವ ಕಾಮಗಾರಿಗಳಿಗೆ ಮಾರ್ಚ್ ಒಳಗಾಗಿ ಟೆಂಡರ್ ಕರೆದು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಯುಜಿಡಿ ಸಂಪರ್ಕ ಪಡೆಯಿರಿ:

ಪಟ್ಟಣದ ನಾಗರಿಕರು ಮನೆಗಳಿಗೆ ಯುಜಿಡಿ ಸಂಪರ್ಕ ಪಡೆಯಲು ಮುಂದಾಗಬೇಕು. ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ರಸ್ತೆಗಳನ್ನು ಹೊಸ ಸಂಪರ್ಕಕ್ಕಾಗಿ ಮತ್ತೆ ಅಗೆದು ಹಾಳು ಮಾಡುವ ಪರಿಸ್ಥಿತಿ ಬರಬಾರದು. ಯುಜಿಡಿ ಕಾಮಗಾರಿ ಬಾಕಿ ಉಳಿದಿರುವ ಪ್ರದೇಶಗಳಲ್ಲಿ ಅಗತ್ಯವಿರುವ ಕಡೆ ಹೆಚ್ಚುವರಿ ಅನುದಾನ ದೊರೆತ ಕೂಡಲೇ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದರು. ಗ್ರಾಮದ ಸಮೀಪದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪಕ್ಕದಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕವನ್ನು ಸ್ಥಳಾಂತರಿಸಿ, ಹೊಸ ಜಾಗವನ್ನು ಆದಷ್ಟು ಬೇಗ ಗುರುತಿಸುವಂತೆ ಪುರಸಭೆ ಮುಖ್ಯಾಧಿಕಾರಿ ಮಧು ಎಚ್.ಪಿ. ಅವರಿಗೆ ಸೂಚಿಸಲಾಗಿದೆ ಎಂದರು.

ಮಸಣಿಕಮ್ಮ ದೇವಸ್ಥಾನ ಅಭಿವೃದ್ಧಿ:

ಪಟ್ಟಣದ ಶ್ರೀ ಮಸಣಿಕಮ್ಮ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಸಂಬಂಧಿಸಿದಂತೆ ಆಗಮ ಪಂಡಿತರು ಸ್ಥಳ ಪರಿಶೀಲನೆ ನಡೆಸಿದ್ದು, ದೇವರ ಮೂರ್ತಿ ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಸೆ.18 ಮತ್ತು 20ರಂದು ಲೋಕೋಪಯೋಗಿ ಇಲಾಖೆಗೆ ಮಾಹಿತಿ ನೀಡಲಾಗಿದೆ. ಈ ಹಿಂದೆ ?13 ಕೋಟಿ ಅಂದಾಜು ಮಾಡಲಾಗಿದ್ದ ಅಭಿವೃದ್ಧಿ ಯೋಜನೆಯನ್ನು ?9 ಕೋಟಿಗೆ ಪರಿಷ್ಕರಿಸಿ, ಸಾರ್ವಜನಿಕರಿಂದ ವಂತಿಕೆ ಪಡೆಯದೇ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಯೋಜಿಸಲಾಗಿದೆ ಎಂದು ಶಾಸಕ ಕೆ. ವೆಂಕಟೇಶ್ ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ನಿತಿನ್ ವೆಂಕಟೇಶ್, ಕಾಂಗ್ರೆಸ್ ಮುಖಂಡರಾದ ಹೊಲದಪ್ಪ, ಡಿ.ಟಿ. ಸ್ವಾಮಿ, ಅಶೋಕ್ ಗೌಡ, ಬಸವರಾಜು, ಮಂಜುನಾಥ್, ರವಿ, ವಿಷಕಂಠಯ್ಯ,ಭೂತನಹಳ್ಳಿ ರವಿ, ಎಲೆ ಮಂಜು, ಸುರೇಶ್, ಹರೀಶ್, ಪಿ. ಮಹದೇವ್, ರಾಜೇಶ್, ಮಹೇಶ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಹುತಾತ್ಮರ ದಿನಾಚರಣೆ

## ವೀರಪ್ಪನ್ ಗುಂಡಿಗೆ ಬಲಿಯಾದ ಅರಣ್ಯ ರಕ್ಷಕನಿಗೆ ಮನವಿ



ಹನೂರು: ಕಾವೇರಿ ವನ್ಯಜೀವಿ ವಿಭಾಗದ ಗೋಪಿನಾಥಂ ವಲಯದ ದಟ್ಟಾರಣ್ಯದ ನಡುವೆ ಇರುವ ಎರಕೆಯಂ... ಇಲ್ಲಿ ಕುಖ್ಯಾತ ಕಳ್ಳಬೇಟೆಗಾರ ವೀರಪ್ಪನ್ ಗುಂಡಿಗೆ ಬಲಿಯಾದ ಅರಣ್ಯ ರಕ್ಷಕ ದಿ. ಶ್ರೀನಿವಾಸ್ ಅವರ ಹುತಾತ್ಮ ಸ್ಮಾರಕವಿದೆ. ಈ ಸ್ಮಾರಕದ ಬಳಿ ಗುರುವಾರ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ಅತ್ಯಂತ ಭಾವಪೂರ್ಣವಾಗಿ ಆಚರಿಸಲಾಯಿತು.

ಅರಣ್ಯವೇ ಹೆಚ್ಚಿರುವ ಜಿಲ್ಲೆ ಚಾಮರಾಜನಗರ: ಸಿಸಿಎಫ್ ಮಾಲತಿ ಪ್ರಿಯಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಚಾಮರಾಜ ನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶ್ರೀಮತಿ ಮಾಲತಿ ಪ್ರಿಯಾ ಅವರು ಹುತಾತ್ಮರಿಗೆ ನಮನ ಸಲ್ಲಿಸಿ ಮಾತನಾಡಿದರು. ಚಾಮರಾಜನಗರ ಜಿಲ್ಲೆ ಭೌಗೋಳಿಕವಾಗಿ ವಿಶೇಷವಾದದ್ದು. ಇಲ್ಲಿ ಭೌಗೋಳಿಕ ಪ್ರದೇಶಕ್ಕಿಂತ ಅರಣ್ಯ ಪ್ರದೇಶವೇ ಹೆಚ್ಚಿದೆ. ಜಿಲ್ಲೆಯ ಶೇ. 51 ರಷ್ಟು ಭಾಗ ಅರಣ್ಯದಿಂದ ಕೂಡಿದೆ. ಹಾಗಾಗಿ ಇಲ್ಲಿ ಅರಣ್ಯ ಇಲಾಖೆಯ ಜವಾಬ್ದಾರಿ ತುಂಬಾ ದೊಡ್ಡದು.

ವಾಚರ್ ನಿಂದ ಹಿಡಿದು ಫಾರೆಸ್ಟ್ ಗಾರ್ಡ್, ಆರ್‌ಎಫ್‌ಒ, ಎಸಿಎಫ್, ಡಿಸಿಎಫ್, ಎಪಿಸಿಸಿಎಫ್ ವರೆಗೆ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರ ಕಠಿಣ ಪರಿಶ್ರಮ, ಸಮರ್ಪಣಾ ಭಾವದಿಂದಲೇ ಇಂದು ಕರ್ನಾಟಕವು ಆನೆಗಳ ಸಂಖ್ಯೆಯಲ್ಲಿ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ. ಹುಲಿಗಳ ಸಂಖ್ಯೆಯಲ್ಲಿ ದ್ವಿತೀಯ, ಚಿರತೆಗಳ ಸಂಖ್ಯೆಯಲ್ಲಿ ತೃತೀಯ ಸ್ಥಾನದಲ್ಲಿದೆ. ಇದು ನಮಗೆಲ್ಲರಿಗೂ ಹೆಮ್ಮೆಯ ವಿಷಯ. ಇಲ್ಲಿರುವ ಎಲ್ಲಾ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿಯ ಸೇವೆಗೆ ನಾನು ಹೃದಯಪೂರ್ವಕವಾಗಿ ವಂದಿಸುತ್ತೇನೆ, ಶಿರಸಾಷ್ಟಾಂಗ ನಮನ ಸಲ್ಲಿಸುತ್ತೇನೆ" ಎಂದು ಭಾವುಕರಾಗಿ ನುಡಿದರು.

ಕಾರ್ಯಕ್ರಮದಲ್ಲಿ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಬಿಸ್ವಜಿತ್ ಮಿಶ್ರಾ ಅವರು ಭಾಗವಹಿಸಿ, ದೇಶಕ್ಕಾಗಿ, ಕಾಡಿಗಾಗಿ ಪ್ರಾಣತ್ಯಾಗ ಮಾಡಿದ ಹುತಾತ್ಮರ ತ್ಯಾಗ-ಬಲಿದಾನವನ್ನು ಸ್ಮರಿಸಿದರು. ಬಳಿಕ ಹುತಾತ್ಮರ ಸ್ಮಾರಕಕ್ಕೆ ವಿಧಿ-ವಿಧಾನಗಳ ಮೂಲಕ ಪೂಜೆ ಸಲ್ಲಿಸಿ, ಪೊಲೀಸ್ ಮತ್ತು ಅರಣ್ಯ ಇಲಾಖೆಯಿಂದ ಕವಾಯತು ನಡೆಸಿ, ಪುಷ್ಪಗುಚ್ಛ ಅರ್ಪಿಸಿ, ರಾಷ್ಟ್ರಗೀತೆ ಹಾಡಿ, ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಡಿಸಿಎಫ್ ವಾಸುದೇವ್, ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಪ್ರಭಾರ ಎಸಿಎಫ್ ವಿರಾಜ್ ಶ್ರೀಕಾಂತ್ ಹೊಸೂರು, ಮ.ಬೆಟ್ಟ ಪೊಲೀಸ್ ಠಾಣೆಯ ಜಯರಾಂ, ವಲಯ ಅರಣ್ಯಾಧಿಕಾರಿ ಗಳಾದ ಗುರುಮೂರ್ತಿ, ಪುಟ್ಟರಾಜು, ಜಿತೇಂದ್ರ, ರಮೇಶ್, ರಾಜಶೇಖರ್ ಮೂರ್ತಿ ಸೇರಿದಂತೆ ನೂರಾರು ಅರಣ್ಯ ಸಿಬ್ಬಂದಿ, ಗೋಪಿನಾಥಂ ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.

> **ಅರಣ್ಯವನ್ನು ಕಾಪಾಡುವುದು ಕೇವಲ ಅರಣ್ಯ ಇಲಾಖೆಯೊಬ್ಬರಿಂದಲೇ ಸಾಧ್ಯವಿಲ್ಲ. ನಮ್ಮ ಸಿಬ್ಬಂದಿ ಜೊತೆಗೆ ರೈತ ಬಾಂಧವರು ಮತ್ತು ಸಾರ್ವಜನಿಕರು ಕೈಜೋಡಿಸಬೇಕು. ನಾವೆಲ್ಲರೂ ಸೇರಿ ಅರಣ್ಯ ಕಾಪಾಡುವ ಕೆಲಸ ಮಾಡೋಣ.**
>
> **ಮಾಲತಿ ಪ್ರಿಯಾ** ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ ವೃತ್ತ

# ಬಂಡೀಪುರ: ಅರಣ್ಯ ಹುತಾತ್ಮರ ದಿನಾಚರಣೆ



ಗುಂಡ್ಲುಪೇಟೆ: ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಅರಣ್ಯ ಇಲಾಖೆಯ ಹುತಾತ್ಮ ಸಿಬ್ಬಂದಿಗಳ ಸ್ಮರಣಾರ್ಥ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ಬಂಡೀಪುರದಲ್ಲಿ ಭಾವಪೂರ್ಣವಾಗಿ ಆಚರಿಸಲಾಯಿತು.

ಭಾರತ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಇಲಾಖೆಯ ನಿರ್ದೇಶನದಂತೆ ಸೆಪ್ಟೆಂಬರ್ 11ರಂದು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನವನ್ನು ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಬಂಡೀಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅರಣ್ಯ ಸಂಪತ್ತು ಹಾಗೂ ವನ್ಯಜೀವಿಗಳ ರಕ್ಷಣೆಗೆ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಪ್ರಾಣ ಕಳೆದುಕೊಂಡ ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ತ್ಯಾಗವನ್ನು ಸ್ಮರಿಸಲಾಯಿತು.

ಕಳೆದ ಹಲವು ದಶಕಗಳಿಂದ ಅರಣ್ಯ ಸಂಪತ್ತು, ವನ್ಯಜೀವಿ ಹಾಗೂ ಪರಿಸರ ಸಂರಕ್ಷಣೆಯಲ್ಲಿ ಅರಣ್ಯ ಸಿಬ್ಬಂದಿ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕಳ್ಳಸಾಗಾಣಿಕೆದಾರರು, ಮರಗಳ್ಳರು, ದಂತಚೋರರು ಹಾಗೂ ಬೇಟೆಗಾರರ ವಿರುದ್ಧ ಹೋರಾಡುವುದರ ಜೊತೆಗೆ ಕಾಡ್ಗಿಚ್ಚಿನಂತಹ ಅಪಾಯಗಳ ನಡುವೆಯೂ ಅರಣ್ಯವನ್ನು ರಕ್ಷಿಸುತ್ತಿರುವ ಸಿಬ್ಬಂದಿಯ ಸೇವೆ ಶ್ಲಾಘನೀಯ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

### ಬಿಷ್ಣೋಯಿಗಳ ಬಲಿದಾನ ಸ್ಮರಣೀಯ

ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶೆ ನೂರುನ್ನಿಸಾ, 1730ರ ಸೆಪ್ಟೆಂಬರ್ 11ರಂದು ಜೋಧ್‌ಪುರದ ಮಹಾರಾಜ ಅಭಯ ಸಿಂಗ್ ಅವರ ಸೈನಿಕರು ಅರಮನೆ ನಿರ್ಮಾಣಕ್ಕೆ ಖೇಜ್ರಿ ಮರಗಳನ್ನು ಕಡಿದುಹಾಕಲು ಮುಂದಾದಾಗ ಅದನ್ನು ವಿರೋಧಿಸಿದ ಬಿಷ್ಣೋಯಿ ಸಮುದಾಯದ 363 ಮಂದಿ ಪ್ರಾಣತ್ಯಾಗ ಮಾಡಿದ ಘಟನೆಯನ್ನು ಸ್ಮರಿಸಿದರು. ಮರಗಳ ಸಂರಕ್ಷಣೆಗಾಗಿ ಬಿಷ್ಣೋಯಿಗಳು ಮಾಡಿದ ಈ ಅಪೂರ್ವ ತ್ಯಾಗವನ್ನು ಸ್ಮರಿಸುವ ಸಲುವಾಗಿ ಸೆಪ್ಟೆಂಬರ್ 11ನ್ನು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದರು.

### 'ವನ್ಯಜೀವಿ ಬೇಟೆ ಸಹಿಸುವ ಪ್ರಶ್ನೆಯೇ ಇಲ್ಲ'

ವನ್ಯಜೀವಿಗಳನ್ನು ಬೇಟೆಯಾಡುವುದು ಅತ್ಯಂತ ಗಂಭೀರ ಅಪರಾಧವಾಗಿದ್ದು, ಇಂತಹ ಪ್ರಕರಣಗಳಲ್ಲಿ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಸಮರ್ಪಕ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ನೂರುನ್ನಿಸಾ ಹೇಳಿದರು. "ಹಿಂದೆ ವೀರಪ್ಪನ್ ಆನೆಗಳನ್ನು ಕೊಲ್ಲುತ್ತಿದ್ದ; ಇದೀಗ ಹುಲಿಗಳನ್ನೂ ಬೇಟೆಯಾಡುವ ಘಟನೆ ಗಳು ನಡೆಯುತ್ತಿವೆ. ಮೋಜಿಗಾಗಿ ಬೇಟೆಯಾಡುವವರ ವಿರುದ್ಧ ಕಾನೂನು ಕಠಿಣವಾಗಿ ಜಾರಿಯಾಗಬೇಕು. ಅರಣ್ಯ ಇಲಾಖೆಗೆ ನ್ಯಾಯಾಂಗ ಇಲಾಖೆಯ ಸಹಕಾರ ಸದಾ ಇರುತ್ತದೆ" ಎಂದರು.

### ಅರಣ್ಯ ಒತ್ತುವರಿ, ರೆಸಾರ್ಟ್‌ಗಳ ಬಗ್ಗೆ ಎಚ್ಚರಿಕೆ

ಆಹಾರ ಮತ್ತು ನೀರಿನ ಹುಡುಕಾಟದಲ್ಲಿ ಕಾಡುಪ್ರಾಣಿಗಳು ಜಮೀನು ಹಾಗೂ ಗ್ರಾಮಗಳತ್ತ ಬರುತ್ತಿರುವ ಘಟನೆಗಳು ಹೆಚ್ಚಾಗುತ್ತಿವೆ. ಅರಣ್ಯ ಪ್ರದೇಶದಲ್ಲಿ ಅತಿಯಾದ ಮಾನವ ಚಟುವಟಿಕೆ ಹಾಗೂ ರೆಸಾರ್ಟ್‌ಗಳ ನಿರ್ಮಾಣದಿಂದ ವನ್ಯಜೀವಿಗಳ ಆವಾಸಸ್ಥಾನಕ್ಕೆ ಧಕ್ಕೆಯಾಗುತ್ತಿದೆ. ಹೀಗಾಗಿ ಅರಣ್ಯವನ್ನು ಯಾವುದೇ ಕಾರಣಕ್ಕೂ ನಾಶಪಡಿಸದೆ ಸಂರಕ್ಷಿಸುವುದು ಎಲ್ಲರ ಜವಾಬ್ದಾರಿ ಎಂದು ನೂರುನ್ನಿಸಾ ತಿಳಿಸಿದರು. ಕಾಡ್ಗಿಚ್ಚಿನಿಂದ ವನ್ಯಜೀವಿಗಳು ಹಾಗೂ ಅರಣ್ಯ ಸಂಪತ್ತಿಗೆ ಆಗುತ್ತಿರುವ ಹಾನಿಯನ್ನು ತಡೆಗಟ್ಟಲು ಪರಿಣಾಮಕಾರಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಅರಣ್ಯ ಸಂರಕ್ಷಣೆಯಲ್ಲಿ ಪ್ರಾಣ ಕಳೆದುಕೊಂಡ ಸಿಬ್ಬಂದಿಯ ಕುಟುಂಬಗಳಿಗೆ ಸೂಕ್ತ ನೆರವು ಹಾಗೂ ಉದ್ಯೋಗ ಕಲ್ಪಿಸುವ ಮೂಲಕ ಅವರ ಕುಟುಂಬಕ್ಕೆ ಭದ್ರತೆ ಒದಗಿಸಬೇಕು ಎಂದೂ ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶ ದೀಪು, ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಗಿರೀಶ್, ಎಸಿಎಫ್ ಶುಭಂ ಸಿಂಗ್ ತನ್ವರ್, ಪರಮೇಶ್, ಸರ್ಕಲ್ ಇನ್ಸ್‌ಪೆಕ್ಟರ್ ಜಯಕುಮಾರ್, ವಲಯ ಅರಣ್ಯಾಧಿಕಾರಿಗಳು, ಉಪ ವಲಯ ಅರಣ್ಯಾಧಿಕಾರಿಗಳು ಹಾಗೂ ಅರಣ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

### ಹುತಾತ್ಮ ಸ್ಮಾರಕಕ್ಕೆ ಪುಷ್ಪನಮನ

**ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಅಂಗವಾಗಿ ಅರಣ್ಯ ಹುತಾತ್ಮರ ಸ್ಮಾರಕಕ್ಕೆ ನ್ಯಾಯಾಧೀಶರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು. ಹುತಾತ್ಮ ಅರಣ್ಯ ಸಿಬ್ಬಂದಿಯ ಕುಟುಂಬಸ್ಥರಿಗೆ ಗೌರವಧನ ನೀಡುವ ಮೂಲಕ ಅವರ ತ್ಯಾಗವನ್ನು ಸ್ಮರಿಸಲಾಯಿತು.**




# ಸೆ.19ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್

### ಜಿಲ್ಲಾ ನ್ಯಾಯಾಧೀಶರಾದ ಜಿ. ಪ್ರಭಾವತಿ



ಚಾಮರಾಜನಗರ, ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ನಿರ್ದೇಶನದಂತೆ ಚಾಮರಾಜನಗರ ಜಿಲ್ಲಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್ ಪ್ರಕ್ರಿಯೆಯನ್ನು ಸೆ. 19 ರಂದು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಜಿ. ಪ್ರಭಾವತಿ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯದಲ್ಲಿರುವ ಎ.ಡಿ.ಆರ್. ಕಟ್ಟಡದ ಸಭಾಂಗಣದಲ್ಲಿಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದ್ದಲ್ಲಿ, ಮುಂಚಿತವಾಗಿ ಚಾಮರಾಜನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಯಳಂದೂರು, ಕೊಳ್ಳೇಗಾಲ ಹಾಗೂ ಗುಂಡ್ಲುಪೇಟೆಗಳಲ್ಲಿ ಆನ್‌ಲೈನ್, ವೀಡಿಯೊ ಕಾನ್ಫರೆನ್ಸ್, ಇ-ಮೇಲ್, ಎಸ್.ಎಂ.ಎಸ್., ವಾಟ್ಸ್‌ಆಪ್ ಮೂಲಕ ಅಥವಾ ಖುದ್ದಾಗಿ ಹಾಜರಾಗುವ ಮೂಲಕ ಸಂಪರ್ಕಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು ಎಂದು ನ್ಯಾಯಾಧೀಶರು ತಿಳಿಸಿದರು.

ಲೋಕ್ ಅದಾಲತ್ ನಿಮಿತ್ತ ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜೀ ಯೋಗ್ಯ ಪ್ರಕರಣಗಳನ್ನು ಶೀಘ್ರ ಪರಿಣಾಮಕಾರಿ ತೀರ್ಮಾನಕ್ಕೆ ಎ.ಡಿ.ಆರ್. ಕಟ್ಟಡದಲ್ಲಿ ಪೂರ್ವಭಾವಿ ಸಮಾಲೋಚನಾ ಕೇಂದ್ರ ತೆರೆಯಲಾಗಿದೆ. ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಿಗೆ ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದರು.

ಲೋಕ್ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕ ವೇತನ, ಗ್ರಾಹಕರ ವೇದಿಕೆ, ರಿಯಲ್ ಎಸ್ಟೇಟ್, ಸಾಲ ವಸೂಲಾತಿ, ಚೆಕ್ ಅಮಾನ್ಯ ಪ್ರಕರಣಗಳು, ಮೋಟಾರ್ ಅಪಘಾತ ಪರಿಹಾರ, ವಿದ್ಯುತ್ ಮತ್ತು ನೀರಿನ ಶುಲ್ಕ, ಭೂ ಸ್ವಾಧೀನ, ವೇತನ ಭತ್ಯೆ ಹಾಗೂ ಪಿಂಚಣಿ, ಸಾರ್ವಜನಿಕ ಉಪಯುಕ್ತತೆ ಸೇವೆಗಳು, ರಾಜಿ ಯೋಗ್ಯ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಹಾಗೂ ಇತರೆ ಪ್ರಕರಣಗಳು, ಕುಟುಂಬ ನ್ಯಾಯಾಲಯದ ಪ್ರಕರಣಗಳನ್ನು (ವಿವಾಹ ವಿಚ್ಛೇದನವನ್ನು ಹೊರತುಪಡಿಸಿ) ಜನತಾ ನ್ಯಾಯಾಲಯಗಳಲ್ಲಿ ಇತ್ಯರ್ಥಪಡಿಸಲಾಗುವುದು ಎಂದು ಅವರು ತಿಳಿಸಿದರು.

ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜಿಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ನೀಡಲಾಗುವುದು. ಉಭಯ ಪಕ್ಷಕಾರರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಭಾಂದವ್ಯ ಉಳಿದು ವಿವಾದವು ಅಂತಿಮಗೊಳ್ಳುತ್ತದೆ. ನ್ಯಾಯಾಲಯಗಳಲ್ಲಿ ದಾಖಲಾಗದೇ ಇರುವ ಪ್ರಕರಣಗಳೂ ಸಹ ವ್ಯಾಜ್ಯ ಪೂರ್ವ ಪ್ರಕರಣಗಳೆಂದು ಪರಿಗಣಿಸಿ, ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದರು.

ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಗಳಿಗೆ ಪಾವತಿಸಲಾದ ಶುಲ್ಕವನ್ನು ಸಂಪೂರ್ಣವಾಗಿ ಮರು ಪಾವತಿಸಲಾಗುವುದು. ರಾಜಿ ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಪ್ರಕರಣ ಇತ್ಯರ್ಥಪಡಿಸಿಕೊಳ್ಳಲು ಇದೊಂದು ವಿಶೇಷ ಅವಕಾಶವಾಗಿದೆ ಎಂದು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ 15100, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ 1800-425-90900, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಚಾಮರಾಜನಗರ 08226-226022, ತಾಲೂಕು ಕಾನೂನು ಸೇವಾ ಸಮಿತಿಗಳಾದ ಯಳಂದೂರು 08226-224029, ಕೊಳ್ಳೇಗಾಲ 08224-256788, ಗುಂಡ್ಲುಪೇಟೆ

# ಲೋಡ್ ಶೆಡ್ಡಿಂಗ್ ಖಂಡಿಸಿ ಪ್ರತಿಭಟನೆ



ಗುಂಡ್ಲುಪೇಟೆ: ತಾಲ್ಲೂಕಿನಲ್ಲಿ ನಿರಂತರವಾಗಿ ವಿದ್ಯುತ್ ಕಡಿತ ಮಾಡುತ್ತಿರುವುದನ್ನು ಖಂಡಿಸಿ ಹಾಗೂ ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿ ರೈತಸಂಘದ ವತಿಯಿಂದ ಕೆಇಬಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಪಂಪ್ ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರಸ್ತುತ ಪಂಪ್ ಸೆಟ್‌ಗಳಿಗೆ ಕೇವಲ ನಾಲ್ಕು ಗಂಟೆಗಳ ಕಾಲ ವಿದ್ಯುತ್ ನೀಡಲಾಗುತ್ತಿದ್ದು, ನೀರಿನ ಕೊರತೆಯಿಂದ ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತಸಂಘದ ಅಧ್ಯಕ್ಷ ದಿಲೀಪ್ ಹಂಗಳ ಮಾತನಾಡಿ, ರೈತರ ಬೆಳೆಗಳಿಗೆ ನೀರುಣಿಸಲು ಸಮರ್ಪಕ ವಿದ್ಯುತ್ ಅಗತ್ಯವಿದೆ. ಆದರೆ ಪಂಪ್‌ಸೆಟ್‌ಗಳಿಗೆ ಕಡಿಮೆ ಅವಧಿಗೆ ವಿದ್ಯುತ್ ನೀಡುತ್ತಿರುವುದರಿಂದ ಬೆಳೆಗಳನ್ನು ಉಳಿಸಿಕೊಳ್ಳುವುದು ಕಷ್ಟವಾಗುತ್ತಿದೆ. ಮನೆಗಳಿಗೂ ಸಮರ್ಪಕ ವಿದ್ಯುತ್ ಪೂರೈಕೆಯಾಗುತ್ತಿಲ್ಲ. ರಾತ್ರಿ ವೇಳೆಯಲ್ಲಿ ವಿದ್ಯುತ್ ಕಡಿತ ಮಾಡುವುದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ದೂರಿದರು. ರೈತರ ಹಾಗೂ ಸಾರ್ವಜನಿಕರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ವಿದ್ಯುತ್ ಕಡಿತವನ್ನು ನಿಯಂತ್ರಿಸಿ, ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಪ್ರತಿಭಟನೆ ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದರು. ನಂತರ ರೈತಸಂಘದ ಮುಖಂಡರು ಕೆಇಬಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಪ್ರತಿಭಟನೆ ಕೈಬಿಟ್ಟರು. ಪ್ರತಿಭಟನೆಯಲ್ಲಿ ಲೋಕೇಶ್ ಬೊಮ್ಮನಹಳ್ಳಿ, ಮಾಧು ಹಂಗಳ, ನಾಗರಾಜು ಮಲ್ಲಯ್ಯನಪುರ, ಕುಮಾರ್ ಭೀಮನಬೀಡು, ಮಹದೇವಪ್ಪ, ಸಂತೋಷ್, ಬಸವೇಶ್ವರ, ಶಿವಣ್ಣ, ಕುಮಾರ್, ಪ್ರಭು, ನಾಗರಾಜು, ಮನು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಖೋ-ಖೋ ಪಂದ್ಯದಲ್ಲಿ ಜಯ



ಹನೂರು: ತಾಲೂಕು ಮಟ್ಟದ 14 ವರ್ಷದೊಳಗಿನ ಬಾಲಕರ ಖೋ-ಖೋ ಸ್ಪರ್ಧೆಯಲ್ಲಿ ಗೌತಮ್ ಇಂಗ್ಲಿಷ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳ ತಂಡ ಅಮೋಘ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ.

ತಂಡದ ಪ್ರಮುಖ ಆಟಗಾರರಾದ ಅನಸ್ ಖಾನ್, ಭರಣಿ ಮತ್ತು ವಿಷ್ಣುವರ್ಧನ್ ಅವರ ಚುರುಕಿನ ಆಟ, ಚಾಣಾಕ್ಷ ದಾಳಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ಅವರ ಉತ್ತಮ ಆಟದ ಫಲವಾಗಿ ತಂಡ ಜಯಗಳಿಸಿದೆ. ಜಯಗಳಿಸಿದ ವಿದ್ಯಾರ್ಥಿಗಳನ್ನು ಶಾಲೆಯ ಕಾರ್ಯದರ್ಶಿ ರವೀಂದ್ರ, ಮುಖ್ಯ ಶಿಕ್ಷಕ ನಿಂಗರಾಜು ಹಾಗೂ ಎಲ್ಲಾ ಶಿಕ್ಷಕ ವೃಂದದವರು ಅಭಿನಂದಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು. ಹಾಗೂ ಎಲ್ಲಾ ಶಿಕ್ಷಕ ವೃಂದದವರು ಅಭಿನಂದಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

# ಕಾಮಗಾರಿಗೆ ಶಾಸಕರಿಂದ ಗುದ್ದಲಿಪೂಜೆ



ಗುಂಡ್ಲುಪೇಟೆ: ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಟಿಎಸ್‌ಪಿ ಯೋಜನೆಯಡಿ ಸಿಸಿ ರಸ್ತೆ, ಚರಂಡಿ ಹಾಗೂ ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಸೇರಿದಂತೆ ಒಟ್ಟು ?1.45 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಅವರು ಗುದ್ದಲಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ತಾಲ್ಲೂಕಿನ ಬಾಚಹಳ್ಳಿ ಗ್ರಾಮದಲ್ಲಿ 25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು. ಕೊಡಸೋಗೆ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಲಾಯಿತು.

ಸೋಮನಪುರ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಹಾಗೂ ?15 ಲಕ್ಷ ವೆಚ್ಚದಲ್ಲಿ ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು.

ಮೂಡಗೂರು ಗ್ರಾಮದಲ್ಲಿ ?25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಹಾಗೂ ತೆರಕಣಾಂಬಿ ಗ್ರಾಮದಲ್ಲಿ ?45 ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಶಾಸಕರು ಗುದ್ದಲಿಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ಉಮಾಪತಿ, ಗುತ್ತಿಗೆದಾರ ಬಸವಣ್ಣ, ಮಾಜಿ ಎಪಿಎಂಸಿ ಅಧ್ಯಕ್ಷ ಪ್ರಭು, ಕೃಷಿಕ ಸಮಾಜದ ಅಧ್ಯಕ್ಷ ದೇಪಾಪುರ ಸಿದ್ದಪ್ಪ, ನಾಗಪ್ಪ, ವಡ್ಡಗೆರೆ ಮುಖಂಡರಾದ ಬಾಚಹಳ್ಳಿ ಮುದ್ದಪ್ಪ, ಶೇಖರಪ್ಪ, ಮಧು ಸೇರಿದಂತೆ ಇನ್ನು ಇತರರು ಉಪಸ್ಥಿತರಿದ್ದರು.

# ಚಾಮರಾಜನಗರ: ತಂಪೆರೆದ ಮಳೆ



ಚಾಮರಾಜನಗರ: ಮಳೆ ಇಲ್ಲದೆ ಬಿಸಿಲಿನ ತಾಪದಿಂದ ಕಂಗೆಟ್ಟಿದ ಜನತೆಗೆ ನಗರದಲ್ಲಿ ಗುರುವಾರ ಸಂಜೆ ಸುರಿದ ಮಳೆ ಜನತೆಯಲ್ಲಿ ಹರುಷ ತಂದಿದೆ.

ಕಳೆದ ವಾರದಿಂದ ಬಿಸಿಲಿನ ತೀವ್ರತೆಯಿಂದ ಕಾದ ಬಾಣಲಿಯಂತಾಗಿದ್ದ ಧರೆಗೆ ಮಳೆರಾಯ ತಂಪನ್ನೆರೆಯಿತು. ಮಳೆ ಇಲ್ಲದೆ ಬಿಸಿಲ ಧಗೆ ಮಿತಿ ಮೀರಿತ್ತು. ಉಷ್ಣಾಂಶ ಹೆಚ್ಚಾಗಿ ಹಗಲಲ್ಲಿ ಹೊರಗಡೆ ಓಡಾಡಲಾಗದಷ್ಟು ಬಿಸಿಲ ಬೇಗೆಯಿಂದ ಜನರು ತತ್ತರಿಸಿ ಹೋಗಿದ್ದರು. ಇದೀಗ ಬಹುದಿನಗಳ ಬಳಿಕ ಸುರಿದ ಮಳೆಯಿಂದಾಗಿ ಜನರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ. ಏಕಾಏಕಿ ಸುರಿದ ಮಳೆಯಿಂದ ನೆನೆಯದಂತೆ ತಪ್ಪಿಸಿಕೊಳ್ಳಲು ಜನ ಪರದಾಡಿದರು. ದ್ವಿಚಕ್ರ ವಾಹನಗಳ ಸವಾರರು ಮಳೆಯಲ್ಲಿ ಸಂಚರಿಸಿದರು. ರಸ್ತೆಯ ತಗ್ಗು ಮತ್ತು ಗುಂಡಿಗಳಲ್ಲಿ ನೀರು ಹರಿಯಿತು. ಬಿಸಿಲಿಗೆ ಕಾದಿದ್ದ ಧರೆಯು ಮಳೆ ಸಿಂಚನದಿಂದ ತಂಪೆರೆಯಿತು.

### ಯೋಜನೆ ಸದುಪಯೋಗಕ್ಕೆ ಮೋನಾ ರೋತ್ ಮನವಿ

# ಜಿಪಂ ಸಿಇಒಯಿಂದ ವಿಬಿ-ಜಿ ರಾಮ್ ಜಿ ಕಾಮಗಾರಿ ಪರಿಶೀಲನೆ



ಚಾಮರಾಜನಗರ, ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಗೆ ಮುಕ್ತ ಅವಕಾಶ ಕಲ್ಪಿಸುವ ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ತಿಳಿಸಿದರು.

ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊಡ್ಡರಾಯಪೇಟೆ ಗ್ರಾಮಕ್ಕೆ ಭೇಟಿ ನೀಡಿ ಅಲ್ಲಿನ ಹಿರಿಯ ಪ್ರಾಥಮಿಕ ಶಾಲೆಯ ಶೌಚಾಲಯ ಮತ್ತು ಅಡುಗೆ ಕೋಣೆ ಕಾಮಗಾರಿ ಸ್ಥಳದಲ್ಲಿ ಹಾಜರಾತಿ ಪರಿಶೀಲಿಸಿ, ಬಳಿಕ ಕಾರ್ಮಿಕರೊಂದಿಗೆ ಸಮಾಲೋಚನೆ ನಡೆಸಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ವಾಸಿಸುವ ಕೂಲಿ ಕಾರ್ಮಿಕರು ಉದ್ಯೋಗಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯುವಲ್ಲಿ ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜ್ ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಯೋಜನೆಯು ಮಹತ್ವದ ಪಾತ್ರವಹಿಸುತ್ತದೆ. ಗ್ರಾಮೀಣ ಜನರ ಆರ್ಥಿಕ ಸ್ವಾವಲಂಬನೆ ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಿದೆ. ಸಮುದಾಯದ ಸಹಯೋಗದೊಂದಿಗೆ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಗೆ ಮುಕ್ತ ಅವಕಾಶ ಕಲ್ಪಿಸುವ ಈ ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಬಳಿಕ ದೇವಹಳ್ಳಿ, ಬದನಗುಪ್ಪೆ, ಹರದನಹಳ್ಳಿ ಮತ್ತು ವೆಂಕಟಯ್ಯನಛತ್ರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಹೆಚ್ಚಿನ ಕೂಲಿಕಾರರಿಗೆ ಎನ್.ಎಂ.ಆರ್ ಸೃಜನೆ ಮಾಡಿ ಸಕಾಲಕ್ಕೆ ಕೂಲಿ ಪಾವತಿ ಮಾಡುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ವಿಬಿ-ಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ನೊಂದಾಯಿತ ಕುಟುಂಬಕ್ಕೆ 125 ದಿನಗಳ ಉದ್ಯೋಗ ಪಡೆಯಲು ಅವಕಾಶವಿದ್ದು, ಗ್ರಾಮದ ಜನರು ಉದ್ಯೋಗ ಪಡೆದು ಸ್ವಾವಲಂಬಿಯಾಗಬೇಕು. ಯೋಜನೆಯಡಿ ದಿನದ ಕೂಲಿ ಮೊತ್ತ 382 ರೂ. ಗಳಾಗಿದ್ದು ಪುರುಷ ಮತ್ತು ಮಹಿಳೆಯರಿಗೆ ಸಮಾನ ವೇತನ ನೀಡಲಾಗುತ್ತದೆ ಎಂದು ಸಿಇಒ ಅವರು ಮಾಹಿತಿ ನೀಡಿದರು. ಸೆಪ್ಟೆಂಬರ್ 15 ರವರೆಗೆ ಜಾಬ್ ಕಾರ್ಡ್ ಮೇಳ ನಡೆಯಲಿದ್ದು, ಉದ್ಯೋಗ ಚೀಟಿ ಹೊಂದಿಲ್ಲದ ಕುಟುಂಬಗಳನ್ನು ಗುರುತಿಸಿ ನಮೂನೆ-1 ರಲ್ಲಿ ಬೇಡಿಕೆ ಪಡೆದು ರೋಜ್ ಗಾರ್ ಗ್ಯಾರಂಟಿ ಕಾರ್ಡ್ ವಿತರಿಸಲು ಹಾಗೂ ನಮೂನೆ 6ರಲ್ಲಿ ಉದ್ಯೋಗ ಬೇಡಿಕೆ ಸಂಗ್ರಹಿಸಿ ಆದ್ಯತೆ ಮೇರೆಗೆ ಗ್ರಾಮೀಣ ಜನರಿಗೆ ಉದ್ಯೋಗ ನೀಡಲು ಕ್ರಮವಹಿಸಲಾಗುತ್ತಿದೆ ಎಂದು ಹೇಳಿದರು. ಸಹಾಯಕ ನಿರ್ದೇಶಕರಾದ ಪ್ರಕಾಶ್ ಕುಮಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗೀತಾ, ಮಮತಾ, ಮಹದೇವಸ್ವಾಮಿ, ಮಹೇಶ್ವರಿ, ಶೃತಿ, ತಾಂತ್ರಿಕ ಸಂಯೋಜಕರಾದ ಮಧು, ತಾಲ್ಲೂಕು ಸಂಯೋಜಕರಾದ ಯತೀಶ್, ತಾಲ್ಲೂಕು ಎಂ.ಐ.ಎಸ್ ಸಂಯೋಜಕರಾದ ದೀಪಕ್, ವಸತಿ ನೋಡಲ್ ಅಧಿಕಾರಿ ರವಿ, ತಾಂತ್ರಿಕ ಸಹಾಯಕ ಇಂಜಿನಿಯರ್ ಮನೋಜ್ ಸಾಗರ್, ಮನೋಜ್, ಲಿಂಗಪ್ಪ ಇತರರು ಈ ಸಂದರ್ಭದಲ್ಲಿ ಇದ್ದರು.

# ಪೂಜಾರಿ ಕೃಷ್ಣೇಗೌಡ ನಿಧನ



ಕೆ.ಆರ್.ನಗರ: ತಾಲೂಕಿನ ಕಾಳಮ್ಮನ ಕೊಪ್ಪಲು ಗ್ರಾಮದ ಪೂಜಾರಿ ಕೃಷ್ಣೇಗೌಡ (72)ಅವರು ನಿಧನರಾಗಿದ್ದಾರೆ.

ಮೃತರು ಪುತ್ರ ಸ್ವಾಮಿಗೌಡ ಹಾಗೂ ಪುತ್ರಿ ದೇವಮ್ಮ ಸೇರಿದಂತೆ ಅಪಾರ ಬಂಧು ಬಳಗವನ್ನು ಆಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಶುಕ್ರವಾರ ಸ್ವಗ್ರಾಮದಲ್ಲಿ ನೆರವೇರಿತು.

# ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಜಾಗೃತರಾಗಿ



ಗುಂಡ್ಲುಪೇಟೆ: ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಜಾಗೃತರಾಗಬೇಕು ಎಂದು ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರಾದ ದೀಪು ಎಂ.ಟಿ. ಹೇಳಿದರು.

ತಾಲೂಕಿನ ಅಣ್ಣೂರು ಕೇರಿ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ, ಪಂಚಾಯತ್ ರಾಜ್ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆಯ ಸಹಯೋಗದಲ್ಲಿ ನಡೆದ ಬಾಲ್ಯ ವಿವಾಹ ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹದಿಂದ ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಭವಿಷ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಇದನ್ನು ಸಂಪೂರ್ಣವಾಗಿ ತಡೆಯಲು ಪೋಷಕರು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಜಾಗೃತರಾಗಬೇಕು. ಸ್ವಾತಂತ್ರ್ಯ ಬಂದು ಹಲವು ವರ್ಷಗಳಾಗಿವೆ. ಉತ್ತಮ ಸಮಾಜ ನಿರ್ಮಾಣಕ್ಕಾಗಿ ಸರ್ಕಾರ ಹಲವು ಕಾನೂನುಗಳನ್ನು ಜಾರಿಗೆ ತಂದಿದೆ. ಶೈಕ್ಷಣಿಕವಾಗಿ, ಆರ್ಥಿಕವಾಗಿ ಮುಂದುವರೆದಿದ್ದರೂ ಕೂಡ ಇಂತಹ ಅನಿಷ್ಟ ಪದ್ಧತಿಗಳು ಇನ್ನೂ ಸಂಪೂರ್ಣವಾಗಿ ನಿಂತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು. ಸಿಡಿಪಿಒ ಹೇಮಾವತಿ ಮಾತನಾಡಿ, ಇತ್ತೀಚಿಗೆ ಗ್ರಾಮೀಣ ಪ್ರದೇಶಗಳಲ್ಲಿ ಬಾಲ್ಯ ವಿವಾಹಕ್ಕೆ ಸಿದ್ಧತೆ ನಡೆಸುತ್ತಿರುವ ಪ್ರಕರಣಗಳು ಹಾಗೂ ಪೋಕ್ಸೋ ಪ್ರಕರಣಗಳು ಕಂಡುಬರುತ್ತಿವೆ. ಮಕ್ಕಳಿಗೆ ಬಾಲ್ಯ ವಿವಾಹ ಮತ್ತು ಅದರ ದುಷ್ಪರಿಣಾಮಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು. ಮಕ್ಕಳಲ್ಲಿ ಅರಿವು ಹೆಚ್ಚಿದಷ್ಟೂ ಇಂತಹ ತಪ್ಪುಗಳು ಕಡಿಮೆಯಾಗುತ್ತವೆ ಎಂದರು. ಮಕ್ಕಳ ವಿವಾಹಕ್ಕೆ ಸರ್ಕಾರ ನಿಗದಿಪಡಿಸಿರುವ ವಯೋಮಿತಿಯನ್ನು ಎಲ್ಲರೂ ಕಡ್ಡಾಯವಾಗಿ ಪಾಲಿಸಬೇಕು. ಬಾಲ್ಯ ವಿವಾಹದಂತಹ ಘಟನೆಗಳ ಬಗ್ಗೆ ಮಾಹಿತಿ ಸಿಕ್ಕ ತಕ್ಷಣ ಸಂಬಂಧಪಟ್ಟ ಇಲಾಖೆಗೆ ತಿಳಿಸಿ, ಅದನ್ನು ತಡೆಯಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಾಲೆ ಮುಖ್ಯ ಶಿಕ್ಷಕ ಚನ್ನಬಸಪ್ಪ, ಶಿಕ್ಷಕರು, ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

# ತಡೆ ತೆರವು ಪ್ರಯತ್ನ ಮಾಡದ ಕೈ

## ಎಸ್ಸಿ, ಎಸ್ಟಿ ಮೀಸಲಾತಿ ಹೆಚ್ಚಳ | ಕಾಂಗ್ರೆಸ್ ವಿರುದ್ಧ ಎನ್.ಮಹೇಶ್ ಆರೋಪ



ಚಾಮರಾಜನಗರ: ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಪ್ರಬಲವಾಗಬೇಕು ಹಾಗೂ ಗೆಲ್ಲಬೇಕು ಎಂದರೆ ಎಸ್ಸಿ ಮೋರ್ಚಾ ಪ್ರಬಲವಾಗಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಜಿಲ್ಲಾ ಎಸ್ಸಿ ಮೋರ್ಚಾದ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಬೂತ್ ಮಟ್ಟಕ್ಕೂ ಸಂಘಟನಾ ಜಾಲ ವಿಸ್ತಾರ ಆಗಬೇಕಿದೆ ಎಂದರು. ಜಿಲ್ಲೆಯ ಒಟ್ಟು ಜನಸಂಖ್ಯೆ 10,20,791 ಇದ್ದು, ಇದರಲ್ಲಿ ಪರಿಶಿಷ್ಟ ಜಾತಿ ಜನಸಂಖ್ಯೆ 2.59 ಲಕ್ಷ ಹಾಗೂ ಪರಿಶಿಷ್ಟ ಪಂಗಡದ ಜನಸಂಖ್ಯೆ 1.20 ಲಕ್ಷ ಇದೆ. ಎರಡು ಸಮುದಾಯಗಳು ಸೇರಿದರೆ 3.79 ಲಕ್ಷದ ಜನಸಂಖ್ಯೆಯಿದ್ದು, ಶೇ. 37 ರಷ್ಟು ಜನಸಂಖ್ಯೆ ಇದ್ದೇವೆ. ಇವರನ್ನು ಸಂಘಟಿಸಿ ಬಿಜೆಪಿ ಪಕ್ಷದ ಸಾಧನೆಗಳು ಹಾಗೂ ಕಾಂಗ್ರೆಸ್ ಪಕ್ಷದ ದುರಾಡಳಿತವನ್ನು ತಿಳಿಸಬೇಕು. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸರ್ಕಾರ ಇದ್ದಾಗ ಹೈಕೋರ್ಟ್ ಸೂಚನೆಯ ಮೇಲೆ ನ್ಯಾ. ನಾಗಮೋಹನ್ ದಾಸ್ ವರದಿಯನ್ನು ಆಧರಿಸಿ ಜನಸಂಖ್ಯೆಗೆ ಅನುಗುಣವಾಗಿ ಎಸ್ಸಿಗೆ ಇದ್ದ ಶೇ. 15 ರಷ್ಟು ಮೀಸಲಾತಿಯನ್ನು ಶೇ. 17 ಕ್ಕೆ ಏರಿಕೆ ಮಾಡಿದರು ಹಾಗೂ ಎಸ್ಟಿಗೆ ಇದ್ದ ಶೇ. 3 ಮೀಸಲಾತಿಯನ್ನು ಶೇ. 7 ಕ್ಕೆ ಹೆಚ್ಚಳ ಮಾಡಿದರು. ಈ ವಿಷಯವನ್ನು ಎಸ್ಸಿ ಮೋರ್ಚಾದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಗೆ ತಲುಪಿಸಬೇಕು ಎಂದು ತಿಳಿಸಿದರು.

### ಕಾರ್ಯಕ್ರಮಗಳು ಹಾಗೂ ಉಪಸ್ಥಿತರಿದ್ದ ಗಣ್ಯರು

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಎಸ್ಸಿ ಮೋರ್ಚಾದ ಜಿಲ್ಲಾಧ್ಯಕ್ಷ ನವೀನ್ ಮೌರ್ಯ ಮಾತನಾಡಿ, ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲ ಮಂಡಳಿಗಳಿಗೂ ಭೇಟಿ ನೀಡಿ ಎಲ್ಲ ಬೂತ್ಗಳಲ್ಲಿ ವಿನೂತನ ಕಾರ್ಯಕ್ರಮಗಳನ್ನು ಮಾಡಲಾಗುವುದು. ಪಕ್ಷದ ಹಿರಿಯರ ಸಲಹೆ-ಸೂಚನೆಗಳನ್ನು ಸ್ವೀಕರಿಸಿ ಮುಂದಿನ ದಿನಗಳಲ್ಲಿ ಪಕ್ಷವನ್ನು ಸದೃಢಗೊಳಿಸಲು ಶ್ರಮಿಸಲಾಗುವುದು ಎಂದರು.

ಓಬಿಸಿ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನೂರೊಂದುಶೆಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ಎಸ್ಸಿ ಪ್ರಭಾರಿ ಮೂಡಹಳ್ಳಿ ಮೂರ್ತಿ, ಅಮಚವಾಡಿ ಚಂದ್ರಶೇಖರ್, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಕೆರೆಹಳ್ಳಿ ಮಹದೇವಸ್ವಾಮಿ ಹಾಗೂ ಮುಖಂಡ ಕೋಡಿಉಗನೆ ಮಂಜ ಅವರು ಸಭೆಯಲ್ಲಿ ಮಾತನಾಡಿದರು. ಇದೇ ವೇಳೆ ಎಸ್ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಮಸಮುದ್ರ ಶಿವಣ್ಣ, ಪರಮೇಶ್ ಇತರರು ಭಾಗವಹಿಸಿದ್ದರು.

### ಮೀಸಲಾತಿ ಕಡಿತದಿಂದ ಸಮುದಾಯಕ್ಕೆ ಅನ್ಯಾಯ

ಜಿಲ್ಲೆಯಲ್ಲಿ 983 ಬೂತ್ಗಳಿದ್ದು, ಇದರಲ್ಲಿ ಎಸ್ಸಿ, ಎಸ್ಟಿ ಮತದಾರರು ಎಲ್ಲ ಕಡೆ ಇದ್ದಾರೆ. ಇದು ನಮ್ಮ ಶಕ್ತಿ ಎಂಬುದು ಎಸ್ಸಿ, ಎಸ್ಟಿ ಮೋರ್ಚಾದವರಿಗೆ ಗೊತ್ತಾಗಲಿಲ್ಲ ಎಂದರೆ ಅದನ್ನು ಸಮುದಾಯಕ್ಕೆ ತಿಳಿಸುವವರು ಯಾರು ಎಂದು ಪ್ರಶ್ನಿಸಿದರು. ಸಂವಿಧಾನದಲ್ಲಿ ಎಸ್ಸಿ, ಎಸ್ಟಿಗಳಿಗೆ ಮೀಸಲಾತಿ ಕೊಡುವಂತೆ ಸೂಚನೆ ಇದ್ದು, ಆ ಪ್ರಕಾರ ಬಸವರಾಜ ಬೊಮ್ಮಾಯಿ ಅವರು ಹೆಚ್ಚು ಮಾಡಿ ಕೊಟ್ಟಿದ್ದರು. ಆದರೆ ಈಗ ಕಾಂಗ್ರೆಸ್ ಸರ್ಕಾರ ಬಂದು ಎಸ್ಸಿ ಸಮುದಾಯಕ್ಕೆ ಇದ್ದ ಶೇ. 17 ರಷ್ಟು ಮೀಸಲಾತಿಯನ್ನು 15ಕ್ಕೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಇದ್ದ ಶೇ. 7 ರಷ್ಟು ಮೀಸಲಾತಿಯನ್ನು ಶೇ. 3ಕ್ಕೆ ಇಳಿಸಿ, ಹೈಕೋರ್ಟ್ ಸೂಚನೆ ಮೇಲೆ ಮಾಡಿದ್ದೇವೆ ಎಂದು ಹೇಳುತ್ತಿದ್ದಾರೆ. ತಡೆಯಾಜ್ಞೆ ತೆರವುಗೊಳಿಸಲು ಕಾಂಗ್ರೆಸ್ ಯಾವುದೇ ಪ್ರಯತ್ನ ಮಾಡಲಿಲ್ಲ. ಇದರಿಂದ ಎರಡು ಸಮುದಾಯಗಳಿಗೆ ತುಂಬಾ ಅನ್ಯಾಯ ಉಂಟಾಗಿದ್ದು, ಸಾಕಷ್ಟು ಹುದ್ದೆಗಳನ್ನು ಕಳೆದುಕೊಳ್ಳುತ್ತಿವೆ. ರಾಜ್ಯ ಸರ್ಕಾರದಲ್ಲಿ 72 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದ್ದು, ಇದರಲ್ಲಿ ಎರಡು ಸಮುದಾಯಗಳಿಗೂ 5 ಸಾವಿರ ಹುದ್ದೆಗಳು ಕಡಿಮೆಯಾಗುತ್ತವೆ ಎಂದು ಎನ್. ಮಹೇಶ್ ಅಸಮಾಧಾನ ವ್ಯಕ್ತಪಡಿಸಿದರು.

### ಕಾಂಗ್ರೆಸ್ಸಿಂದ ಪರಿಶಿಷ್ಟರಿಗೆ ಮೊದಲಿನಿಂದಲೂ ಅನ್ಯಾಯ

ಸಭೆಯಲ್ಲಿ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ. ರಾಮಚಂದ್ರ ಮಾತನಾಡಿ, ದೇಶದಲ್ಲಿ ಕಳೆದ 13 ವರ್ಷಗಳಿಂದಲೂ ಸುದೀರ್ಘವಾಗಿ ಅಧಿಕಾರ ನಡೆಸಿಕೊಂಡು ಬಂದಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಅನೇಕ ಅನುಕೂಲ ಕಲ್ಪಿಸಿಕೊಟ್ಟಿದ್ದಾರೆ. ಆ ವಿಚಾರವನ್ನು ಜನತೆಗೆ ತಿಳಿಸಬೇಕು. ಕಾಂಗ್ರೆಸ್ ಸರ್ಕಾರವು ಪರಿಶಿಷ್ಟ ಸಮುದಾಯಗಳಿಗೆ ಮೊದಲಿನಿಂದಲೂ ಅನ್ಯಾಯ ಮಾಡಿಕೊಂಡು ಬಂದಿದೆ ಎಂದು ಆರೋಪಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತ್
ಉಪನಿರ್ದೇಶಕರ ಕಚೇರಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಪಂಚಾಯತ್ ಭವನ, 2ನೇ ಮಹಡಿ, ಬಿ.ಎಂ ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ-562159
ದೂರವಾಣಿ ಸಂಖ್ಯೆ: 27273036/27272741 e-mail: ddwcdrnd@gmail.com

ಸಂ: ಉನಿಬೆಂ.ದ/ಮಮಅಇ/ಟೆಂಡರ್/2026-27 ದಿನಾಂಕ: 11.09.2026

**ಅಲ್ಪಾವಧಿ ಟೆಂಡರ್ ಪ್ರಕಟಣೆ**

2026-27ನೇ ಸಾಲಿನ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲಾ ಕಛೇರಿಗೆ ಅವಶ್ಯಕವಿರುವ ಈ ಕೆಳಕಂಡ ಸೇವೆಗಳನ್ನು ಒದಗಿಸಲು ನೋಂದಾಯಿಸಲಾದ ಸಂಸ್ಥೆಗಳಿಂದ ಟೆಂಡರ್ ನಿಬಂಧನೆಗೊಳಪಟ್ಟು ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 2000" ಹಾಗೂ ತತ್ಸಮಾನ ಕಾಯ್ದೆಗಳಿಗನುಗುಣವಾಗಿ ಅರ್ಹ ಸಂಸ್ಥೆಗಳು/ಏಜೆನ್ಸಿಗಳಿಂದ ಎರಡು ಲಕೋಟೆ (ತಾಂತ್ರಿಕ & ಆರ್ಥಿಕ) ಪದ್ಧತಿಯಲ್ಲಿ ಇ-ಟೆಂಡರ್ ಆಹ್ವಾನಿಸಲಾಗಿದೆ. ಇ-ಟೆಂಡರ್‌ಗೆ ಸಂಬಂಧಪಟ್ಟ ಮಾಹಿತಿಯನ್ನು ಇಚ್ಛೆಯುಳ್ಳವರು http://kppp.karnataka.gov.in ವೆಬ್‌ಸೈಟ್‌ನಲ್ಲಿ ಪರಿಶೀಲಿಸುವುದು ಹಾಗೂ ಅರ್ಜಿಗಳನ್ನು ಅಪ್‌ಲೋಡ್ ಮಾಡಬಹುದಾಗಿರುತ್ತದೆ.

1) 2026-27ನೇ ಸಾಲಿಗೆ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯಡಿ **ಡೇಟಾ ಎಂಟ್ರಿ ಆಪರೇಟರ್, ಮೆಸೆಂಜರ್, ಕ್ಲರ್ಕ್/ಡೇಟಾ ಎಂಟ್ರಿ ಆಪರೇಟರ್, ಕಾರು ವಾಹನ ಹಾಗೂ ಗ್ರೂಪ್ 'ಡಿ' ಸೇವೆಯನ್ನು ಹೊರಗುತ್ತಿಗೆ** ಸೇವೆಗಾಗಿ ಕರೆಯಲಾದ ಟೆಂಡರ್ ದಸ್ತಾವೇಜು ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಲು ಪ್ರಾರಂಭ **ದಿನಾಂಕ: 11.09.2026** ಟೆಂಡರ್ ದಾಖಲೆಗಳನ್ನು ಸಲ್ಲಿಸುವ ಕೊನೆ **ದಿನಾಂಕ : 29.09.2026.**

2) 2026-27ನೇ ಸಾಲಿಗೆ ಕಛೇರಿಗೆ ಆಡಳಿತಾತ್ಮಕ ದೃಷ್ಟಿಯಿಂದ **ವಾಹನ ಹೊರಗುತ್ತಿಗೆ ಸೇವೆಯನ್ನು ಪಡೆಯಲು** ಕರೆಯಲಾದ ಟೆಂಡರ್ ದಸ್ತಾವೇಜು ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಲು ಪ್ರಾರಂಭ **ದಿನಾಂಕ: 11.09.2026.** ಟೆಂಡರ್ ದಾಖಲೆಗಳನ್ನು ಸಲ್ಲಿಸುವ ಕೊನೆಯ **ದಿನಾಂಕ: 29.09.2026.**

ಹೆಚ್ಚಿನ ಮಾಹಿತಿಯನ್ನು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆ ಇಲ್ಲಿ ಪಡೆಯಬಹುದಾಗಿದೆ.

**ಸಹಿ/- ಉಪ ನಿರ್ದೇಶಕರು**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಬೆಂಗಳೂರು ದಕ್ಷಿಣ ಜಿಲ್ಲೆ.

DIPR/BSD/314/SA/2026-27

#### ಅತಿವೇಗದ ಚಾಲನೆ ಪ್ರಶ್ನಿಸಿದ್ದಕ್ಕೆ ಕೊಲೆ ಯತ್ನ

## ಇಬ್ಬರ ವಿರುದ್ಧ ಎಫ್‌ಐಆರ್

ಗುಂಡ್ಲುಪೇಟೆ : ಪಟ್ಟಣದ ತೋಟದ ಬೀದಿ ವೃತ್ತದ ಬಳಿ ಅತಿವೇಗ ಮತ್ತು ಅಜಾಗರೂಕತೆಯಿಂದ ಕಾರು ಚಲಾಯಿಸಿದ್ದನ್ನು ಪ್ರಶ್ನಿಸಿದ್ದಕ್ಕೆ ವಕೀಲರೊಬ್ಬರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು ಅಲ್ಲದೆ ಬೈಕ್ ನಲ್ಲಿ ಬಂದು ಲಾಂಗ್ ನಿಂದ ಕೊಲೆ ಮಾಡಲು ಯತ್ನಿಸಿದ್ದಾರೆಂದು ಇಬ್ಬರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಟ್ಟಣದ ತೋಟದ ಬೀದಿಯ ನಿವಾಸಿ ದೂರುದಾರ ವಕೀಲ ಡಿ.ರವಿ ಸೆ.8 ರ 11 ಗಂಟೆ ಸಮಯದಲ್ಲಿ ಸ್ನೇಹಿತರಾದ ದರ್ಶನ್,ಶಂಕರ್,ನಾಗೇಂದ್ರರ ಮಾತನಾಡುತ್ತಿದ್ದಾಗ ಆರೋಪಿ ಸುರೇಶ್ ಡಸ್ಟರ್ ಕಾರಲ್ಲಿ ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದಾಗ ಅಪಘಾತವಾಗಬಹುದು ಎಂದು ವಕೀಲ ಡಿ.ರವಿ ಮತ್ತು ಸ್ನೇಹಿತರು ನಿಧಾನವಾಗಿ ಚಲಾಯಿಸುವಂತೆ ಹೇಳಿದ್ದಾರೆ.

ಬುದ್ದಿ ಮಾತು ಹೇಳಿದಕ್ಕೆ ಕೋಪಗೊಂಡ ಆರೋಪಿ ಸುರೇಶ್ ಅವಾಚ್ಯ ಶಬ್ದಗಳಿಂದ ಬೈದರು ಆ ಸಮಯದಲ್ಲಿ ಆರೋಪಿ ಮದ್ಯಪಾನ ಮಾಡಿದ ಸ್ಥಿತಿಯಲ್ಲಿ ಮನೆಗೆ ಹೋಗಿದ್ದಾನೆ ಎಂದು ದೂರಿನಲ್ಲಿದೆ.

10ನಿಮಿಷದ ನಂತರ ಆರೋಪಿ ಸುರೇಶ್ ಮತ್ತು ಮತ್ತೊಬ್ಬ ಮಣಿ ಬೈಕ್ ನಲ್ಲಿ ಅದೇ ಸ್ಥಳಕ್ಕೆ ಬಂದು ಏಕಾಏಕಿ ಕೈಯಲ್ಲಿದ್ದ ಲಾಂಗ್ ನಿಂದ ದೂರುದಾರರ ಮೇಲೆ ಕೊಲೆ ಮಾಡುವ ಉದ್ದೇಶದಿಂದ ಬೀಸಿ ಹಲ್ಲೆಗೆ ಯತ್ನಿಸಿದ್ದಾರೆ ಎನ್ನಲಾಗಿದೆ, ದೂರುದಾರರು ಗಾಬರಿಯಿಂದ ಪಕ್ಕಕ್ಕೆ ಸರಿದು ಓಡಿ ತಪ್ಪಿಸಿಕೊಂಡಿದ್ದಾರೆ.ನಂತರ ಸ್ಥಳದಲ್ಲಿದ್ದ ಸ್ಥಳದಲ್ಲಿದ್ದ ಕೆಲವರು ಸುರೇಶ್ ಹಾಗೂ ಮಣಿಗೆ ಸಮಾಧಾನ ಮಾಡಿದ್ದಾರೆ.ನಂತರ ಆರೋಪಿಗಳಿಬ್ಬರು ಬೈಕ್ ತೆಗೆದುಕೊಂಡು ಹೋಗಲು ಯತ್ನಿಸುವಾಗ ಆಯತಪ್ಪಿ ಕೆಳಗೆ ಬಿದ್ದಿದ್ದಾರೆ.ನಂತರ 2-3 ಮೀಟರ್ ದೂರದಲ್ಲೇ ಮತ್ತೆ ಬಿದ್ದು ಬಳಿಕ ಮನೆಗೆ ತೆರಳಿದರು. ದೂರುದಾರರು ತಕ್ಷಣ 112 ಗೆ ಕರೆ ಮಾಡಿದಾಗ ಪೊಲೀಸರು ಸ್ಥಳಕ್ಕೆ ಬಂದು ಬೈಕ್ ಮತ್ತು ಲಾಂಗ್ ವಶಕ್ಕೆ ಪಡೆದಿದ್ದಾರೆ.ಈ ಸಂಬಂಧ ಸುರೇಶ್ ಹಾಗೂ ಮಣಿ ಮೇಲೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,ತನಿಖೆ ಮುಂದುವರೆದಿದೆ.

# ಶತದಿನದ ಸಂಭ್ರಮ: ಚಾಮರಾಜೇಶ್ವರಸ್ವಾಮಿಗೆ ವಿಶೇಷಪೂಜೆ



**ಚಾಮರಾಜನಗರ:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ ಶತದಿನ ಪೂರೈಸಿದ ಹಿನ್ನಲೆಯಲ್ಲಿ ಅವರ ಅಭಿಮಾನಿ ಬಳಗದ ವತಿಯಿಂದ ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದಲ್ಲಿ ವಿಶೇಷಪೂಜೆ ಸಲ್ಲಿಸಿ ಸಾರ್ವಜನಿಕರಿಗೆ ಸಿಹಿ ವಿತರಿಸಲಾಯಿತು.

ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಪುಟ್ಟಸ್ವಾಮಿಗೌಡ ನೇತೃತ್ವದಲ್ಲಿ ಚಾಮರಾಜೇಶ್ವರ ದೇವಸ್ಥಾನದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೆಸರಿನಲ್ಲಿ ಅರ್ಚನೆ ಮಾಡಿಸಿ, ವಿಶೇಷಪೂಜೆ ಸಲ್ಲಿಸಲಾಯಿತು. ದೇವಸ್ಥಾನದ ಮುಂಭಾಗದಲ್ಲಿ ಡಿ.ಕೆ.ಶಿವಕುಮಾರ್ ಭಾವಚಿತ್ರ ಹಿಡಿದು ಜೈಕಾರದ ಘೋಷಣೆ ಕೂಗಿ ಸಂಭ್ರಮಿಸಿದರು. ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಬಳಗದ ಅಧ್ಯಕ್ಷ ಪುಟ್ಟಸ್ವಾಮಿಗೌಡ ಮಾತನಾಡಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ರಾಜ್ಯಸರ್ಕಾರ 100 ದಿನಗಳನ್ನು ಯಶಸ್ವಿಯಾಗಿ ಪೂರೈಸಿದ ಅಂಗವಾಗಿ ಅವರ ಅಭಿಮಾನಿ ಬಳಗದ ವತಿಯಿಂದ ಚಾಮರಾಜೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ. ಉಳಿದ ಅವಧಿಯನ್ನು ಸಂಪೂರ್ಣವಾಗಿ ಪೂರೈಸಿ ಮುಂದಿನ ಚುನಾವಣೆಯಲ್ಲಿ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಮತ್ತೆ 5 ವರ್ಷ ಪೂರ್ಣಾವಧಿ ಮುಖ್ಯಮಂತ್ರಿಯಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಲಾಯಿತು ಎಂದರು. ಸಿಎಂ ಡಿ.ಕೆ.ಶಿವಕುಮಾರ್ ಅವರ ಸರ್ಕಾರಕ್ಕೆ ನೂರು ದಿನಗಳ ಪೂರೈಸಿದ ಹಿನ್ನಲೆಯಲ್ಲಿ ಅವರು ರಾಜ್ಯಾದ್ಯಂತ 15 ಲಕ್ಷ ನಿವೇಶನ ನೀಡುವ ಯೋಜನೆ ಘೋಷಣೆ ಮಾಡಿದ್ದು, 100 ದಿನಗಳಲ್ಲಿ ರೈತರು, ಮಹಿಳೆಯರು, ವಿದ್ಯಾರ್ಥಿಗಳು, ಯುವಜನಾಂಗದ ಪರ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದಾರೆ ಎಂದರು. ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಪಣ್ಯದಹುಂಡಿ ರಾಜು, ಅರುಣ್ ಕುಮಾರ್ ಗೌಡ, ಟೌನ್ ಒಕ್ಕಲಿಗರ ಸಂಘದ ಅಧ್ಯಕ್ಷ ಮಹೇಶ್, ಲೋಕೇಶ್, ನಾಗರಾಜು, ರಾಜು, ರಘು, ಗುಂಬಳ್ಳಿ ನಾಗರಾಜು ಇತರರು ಹಾಜರಿದ್ದರು.

# ಬಟ್ಟೆ ಬ್ಯಾಗ್ ಬಳಕೆಗೆ ನಗರಸಭೆ ಪ್ರೋತ್ಸಾಹ

## ನಗರದ 8ಕ್ಕೂ ಹೆಚ್ಚು ಕಡೆ ಬಟ್ಟೆ ಬ್ಯಾಗ್ ವೆಂಡಿಂಗ್ ಮಿಷನ್ ಸ್ಥಾಪನೆ

## ಜನರ ಸಹಕಾರವಿದ್ದರೆ ರಾಮನಗರ ಪ್ಲಾಸ್ಟಿಕ್ ಮುಕ್ತ: ಕೆ.ಶೇಷಾದ್ರಿ

ರಾಮನಗರ: ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ ಬಳಕೆಯನ್ನು ತಡೆಯುವ ಉದ್ದೇಶದಿಂದ ಸ್ಥಳೀಯ ನಗರಸಭೆ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಸುಮಾರು 10 ಸಾವಿರ ಬಟ್ಟೆ ಬ್ಯಾಗ್‌ಗಳನ್ನು ಮನೆಗಳಿಗೆ ತಲುಪಿಸಿ ಪ್ರೋತ್ಸಾಹಿಸಿದೆ. ಎಪಿಎಂಸಿಯಲ್ಲಿ ಬಟ್ಟೆ ಬ್ಯಾಗ್ ವೆಂಡಿಂಗ್ ಯಂತ್ರವನ್ನು ಅಳವಡಿಸಿದೆ. ಇದೀಗ ನಗರದ ಎಂಟು ಪ್ರಮುಖ ಸ್ಥಳಗಳಲ್ಲಿ ಬಟ್ಟೆ ಬ್ಯಾಗ್ ವೆಂಡಿಂಗ್ ಮೆಷಿನ್ ಅಳವಡಿಸುವುದರ ಮೂಲಕ ನಾಗರೀಕರಿಗೆ ಪರಿಸರದ ಪಾಠ ಮಾಡುತ್ತಿದೆ.

### ಪ್ಲಾಸ್ಟಿಕ್‌ಗೆ ಕಡಿವಾಣ ಹಾಕಿ – ಕೆ.ಶೇಷಾದ್ರಿ

ನಗರದ ರಾಯರದೊಡ್ಡಿ ವೃತ್ತದಲ್ಲಿ ಬಟ್ಟೆ ಬ್ಯಾಗ್ ವೆಂಡಿಂಗ್ ಮಿಷನ್ ವಿತರಣಾ ಯಂತ್ರಕ್ಕೆ ಚಾಲನೆ ನೀಡಿದ ವೇಳೆ ಮಾತನಾಡಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಪರಿಸರಕ್ಕೆ ಮಾರಕವಾಗಿರುವ ಏಕಬಳಕೆಯ ಪ್ಲಾಸ್ಟಿಕ್‌ಗೆ ಕಡಿವಾಣ ಹಾಕಲು ಎಲ್ಲರೂ ಕೈಜೋಡಿಸುವ, ಜೊತೆಗೆ ಬಟ್ಟೆ ಬ್ಯಾಗ್ ಗಳನ್ನು ಬಳಸುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಪ್ಲಾಸ್ಟಿಕ್ ಕವರ್, ಪ್ಲಾಸ್ಟಿಕ್ ಕ್ಯಾರಿಬ್ಯಾಗ್ ಪರಿಸರ ಮತ್ತು ಜೀವ ಸಂಕುಲಕ್ಕೆ ಮಾರಕವಾಗಿರುವ ಪ್ಲಾಸ್ಟಿಕ್ ಬಳಕೆಯನ್ನು ಸ್ವಯಂಪ್ರೇರಿತರಾಗಿ ತ್ಯಜಿಸಬೇಕು. ಜನರು ತರಕಾರಿ, ದಿನಸಿ ಪದಾರ್ಥಗಳನ್ನು ಪ್ಲಾಸ್ಟಿಕ್ ಕವರ್ ಬಳಕೆಯ ಬದಲಾಗಿ ಬಟ್ಟೆ ಬ್ಯಾಗ್‌ಗಳನ್ನು ಬಳಸುವಂತೆ ತಿಳಿಸಿದರು.

### 10 ರೂಗೆ ಒಂದು ಬಟ್ಟೆ ಬ್ಯಾಗ್!

ನಗರದ ವಿವಿಧೆಡೆ ಇಂದು ನಾಗರೀಕರಿಗೆ ಬಟ್ಟೆ ಬ್ಯಾಗ್ ಸುಲಭವಾಗಿ ಸಿಗುವಂತೆ ಮಾಡಲು ಎಟಿಎಂ ಮೆಷಿನ್ ಮಾದರಿಯಲ್ಲಿ ಬಟ್ಟೆ ಬ್ಯಾಗ್ ವೆಂಡಿಂಗ್ ಯಂತ್ರವನ್ನು ಸ್ಥಾಪನೆ ಮಾಡಲಾಗಿದೆ. 10 ರೂ. ನಾಣ್ಯ ಅಥವಾ ಯುಪಿಐ ಮೂಲಕ ಹಣ ಪಾವತಿಸಿದರೆ ಒಂದು ಬಟ್ಟೆ ಬ್ಯಾಗ್ ದೊರಕುವಂತೆ ಯಂತ್ರ ಕಾರ್ಯ ನಿರ್ವಹಣೆ ಮಾಡುತ್ತದೆ. ಸ್ವಚ್ಛ ಹಾಗೂ ಪ್ಲಾಸ್ಟಿಕ್ ಮುಕ್ತ ನಗರಕ್ಕೆ ನಗರಸಭೆ ಕಟಿಬದ್ಧವಾಗಿದ್ದು, ಸಾರ್ವಜನಿಕರು ಈ ನಿಟ್ಟಿನಲ್ಲಿ ನಗರಸಭೆಯೊಂದಿಗೆ ಕೈಜೋಡಿಸುವ ಕೆಲಸ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತ ಡಾ.ಜಯಣ್ಣ, ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಸ್ಥಾಯಿ ಸಮಿತಿ ಅಧ್ಯಕ್ಷ ಮಹಮ್ಮದ್ ಆರೀಫ್, ಸದಸ್ಯರಾದ ಬಿ.ಸಿ.ಪಾರ್ವತಮ್ಮ, ಪವಿತ್ರ ಲಕ್ಷ್ಮೀಕಾಂತ್, ವಿಜಯಕುಮಾರಿ, ಮಹಾಲಕ್ಷ್ಮೀ ಗೂಳಿಗೌಡ, ಮಂಜುಳಾ ವೆಂಕಟೇಶ್,ಜಯಲಕ್ಷ್ಮಮ್ಮ, ಸೋಮಶೇಖರ್ (ಮಣಿ), ಮಂಜುನಾಥ್, ಮುತ್ತುರಾಜ್, ನರಸಿಂಹ, ನಾಗಮ್ಮ , ಸಮದ್, ಅಕ್ಲೀಂ, ಅಜ್ಮತ್, ಮುನಾಜೀಲ್ ಅಗಾ ಮುಖಂಡರಾದ ಲಕ್ಷ್ಮೀಪತಿ, ಪ್ರವೀಣ್, ಶಿವಕುಮಾರಸ್ವಾಮಿ, ಮಾವಿನಸಸಿ ವೆಂಕಟೇಶ್, ಪುಟ್ಟಣ್ಣ, ನಗರಸಭೆ ಅಧಿಕಾರಿಗಳ ವಿಶ್ವನಾಥ್, ನಟರಾಜೇಗೌಡ ಸೇರಿದಂತೆ ಹಲವರು ಇದ್ದರು.



### ಪ್ಲಾಸ್ಟಿಕ್ ಹಾವಳ ತಡೆಯಲು ಸಾರ್ವಜನಿಕರ ಸಹಕಾರ ಮುಖ್ಯ

ಪ್ಲಾಸ್ಟಿಕ್ ಹಾವಳಿ ತಡೆಯಲು ನಗರಸಭೆಯ ಮೂಲಕ ಎಷ್ಟೇ ಕಠಿಣ ಕ್ರಮಗಳನ್ನು ಕೈಗೊಂಡರು ಪ್ಲಾಸ್ಟಿಕ್ ಬಳಕೆ ತಡೆಗಟ್ಟಲು ಸಾಧ್ಯವಾಗುತ್ತಿಲ್ಲ. ನಾಗರೀಕರಲ್ಲಿ ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಬೇಕಿದೆ. ಪ್ಲಾಸ್ಟಿಕ್ ವಸ್ತುಗಳ ಬಳಕೆಯಿಂದಾಗಿ ವಾತಾವರಣ ಕಲುಷಿತಗೊಳ್ಳುತ್ತಿದೆ. ಪ್ರತಿಯೊಬ್ಬರೂ ಈ ವಿಷಕಾರಿ ಪ್ಲಾಸ್ಟಿಕ್ ನಿಯಂತ್ರಣಕ್ಕೆ ಕಡಿವಾಣ ಹಾಕಬೇಕು. ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನಿರ್ಮಿಸುವತ್ತ ಎಲ್ಲರೂ ಕೈಜೋಡಿಸಬೇಕಿದೆ. ನಗರದ ವರ್ತಕರು ಹಾಗೂ ನಾಗರೀಕರು ಬಟ್ಟೆ ಬ್ಯಾಗ್ ಬಳಸುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

### ನಗರದಲ್ಲಿ ಎಲ್ಲೆಲ್ಲಿ ಯಂತ್ರ ಸ್ಥಾಪನೆ

10 ರೂ ನಾಣ್ಯ ಅಥವಾ ಯುಪಿಐ ಮೂಲಕ ಪಾವತಿಸಿದರೆ ಸುಮಾರು 10 ಕೇಜಿ ತೂಕ ಹೊರಬಲ್ಲ, 10ಕ್ಕೂ ಹೆಚ್ಚು ಬಾರಿ ಪದೇ ಪದೇ ಉಪಯೋಗಿಸಬಲ್ಲ ಬಟ್ಟೆ ಬ್ಯಾಗ್‌ಗಳನ್ನು ಯಂತ್ರದ ಮೂಲಕ ಪಡೆಯಬಹುದು. ಇಂತಹ ಯಂತ್ರಗಳನ್ನು ನಗರದ ರಾಯರದೊಡ್ಡಿ ವೃತ್ತ, ಕೆಂಪೇಗೌಡ ಸರ್ಕಲ್, ಮಾಗಡಿ ರಸ್ತೆ, ಐಜೂರು ಸರ್ಕಲ್, ಹಳೆ ಬಸ್ ನಿಲ್ದಾಣ, ಅಂಬೇಡ್ಕರ್ ಭವನ, ಅರ್ಕೇಶ್ವರ ಬಡಾವಣೆ ಹಾಗೂ ಜನತಾ ಕಾಲೋನಿ ಸೇರಿದಂತೆ ಎಂಟು ಕಡೆಗಳಲ್ಲಿ ಬಟ್ಟೆ ಬ್ಯಾಗ್ ವೆಂಡಿಂಗ್ ಯಂತ್ರಗಳ ಸ್ಥಾಪಿಸಲಾಗಿದೆ. ಜನರು ಈ ಯಂತ್ರಗಳ ಉಪಯೋಗ ಪಡೆಯಬೇಕು, ರಾಮನಗರವನ್ನು ಪ್ಲಾಸ್ಟಿಕ್ ಮುಕ್ತ ಮಾಡಬೇಕು ಎಂಬುದು ನಗರಸಭೆಯ ಉದ್ದೇಶ.

ಕರ್ನಾಟಕ ಸರ್ಕಾರ
ನಗರಸಭಾ ಕಾರ್ಯಾಲಯ, ಕೊಳ್ಳೇಗಾಲ. ಚಾಮರಾಜನಗರ ಜಿಲ್ಲೆ
Phone No:08224-252016 Help line No: 08224-252626
Website: www.kollegalacity.gov.in E-mail: cmckollegal@yahoo.co.in
ಸಂಖ್ಯೆ:ಕೆಸಿಎಂಸಿ/ಶೇ.24.10/ನ.ನಿ/ಸಿಆರ್01/2026-27 ದಿನಾಂಕ:10.09.2026

**ಟೆಂಡರ್ ಪ್ರಕಟಣೆ (ಕೆ.ಜಿ-1)**

2023-24ನೇ ಸಾಲಿನ ನಗರಸಭಾ ಅನುಮೋದಿತ ಕ್ರಿಯಾ ಯೋಜನೆಯಂತೆ ಶೇ.24.10ರ ಸಮುದಾಯ ಕಾರ್ಯಕ್ರಮದಡಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೆ.ಜಿ-1 ದಸ್ತಾವೇಜಿನ ರೀತ್ಯಾ ತಯಾರಕರುಗಳಿಂದ/ಸರಬರಾಜುದಾರರಿಂದ ಟೆಂಡರನ್ನು ಆಹ್ವಾನಿಸಿದ್ದು, ಭಾಗವಹಿಸಲು ಇಚ್ಛಿಸುವವರು ದಸ್ತಾವೇಜು ಪಡೆಯಬಹುದಾಗಿದೆ.

| ಕ್ರ.ಸಂ | ಯೋಜನೆ ವಿವರ | ಅಂದಾಜು ಮೊತ್ತ | ಇ.ಎಂ.ಡಿ ಮೊತ್ತ |
|---|---|---|---|
| 1 | ಕೊಳ್ಳೇಗಾಲ ಪಟ್ಟಣದ ವ್ಯಾಪ್ತಿಯಲ್ಲಿನ ವಾರ್ಡ್ ನಂ 30ರ ಬಸ್ತೀಪುರದ ಪರಿಶಿಷ್ಟ ಜಾತಿಯ ಸಮುದಾಯ ಭವನಕ್ಕೆ ಅಗತ್ಯವಿರುವ ಪೀಠೋಪಕರಣಗಳನ್ನು ಖರೀದಿಸಿ ವಿತರಿಸುವುದು | 1.84 | 4600.00 |
| 2 | ಕೊಳ್ಳೇಗಾಲ ಪಟ್ಟಣದ ವ್ಯಾಪ್ತಿಯಲ್ಲಿನ ವಾರ್ಡ್ ನಂ 31ರ ಬಸ್ತೀಪುರ ಪರಿಶಿಷ್ಟ ಪಂಗಡದ ಸಮುದಾಯ ಭವನಕ್ಕೆ ಡೈನಿಂಗ್ ಟೇಬಲ್ ಮತ್ತು ವಿಐಪಿ ಛೇರುಗಳನ್ನು ಖರೀದಿಗಾಗಿ | 1.56 | 3900.00 |
| 3 | ಟೆಂಡರ್‌ನ ಕೆ.ಜಿ. -1 ದಸ್ತಾವೇಜನ್ನು ಪಡೆಯಲು | ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವುದು | |
| 4 | ಟೆಂಡರ್ ದಸ್ತಾವೇಜಿನ ಶುಲ್ಕ (ಮರುಪಾವತಿಸುವುದಿಲ್ಲ) ಡಿ.ಡಿಯನ್ನು ಪೌರಾಯುಕ್ತರು ನಗರಸಭೆ, ಕೊಳ್ಳೇಗಾಲ ರವರ ಹೆಸರಿನಲ್ಲಿ ಖರೀದಿಸುವುದು/ಕಛೇರಿಯಲ್ಲಿ ಪಾವತಿಸಿ ರಶೀದಿ ಪಡೆಯುವುದು. | ರೂ.500.00 | |
| 5 | ಟೆಂಡರ್ ದಸ್ತಾವೇಜು ಪಡೆಯಲು ಅರ್ಜಿ ಶುಲ್ಕ ಪಾವತಿಸುವ ದಿ: | ದಿ:18.09.2026ರ ವರಗೆ. (ಕಛೇರಿ ಅವಧಿ) | |
| 6 | ದಸ್ತಾವೇಜು ನೀಡುವ ಕೊನೆಯ ದಿನಾಂಕ ಮತ್ತು ಸಮಯ | ದಿ:19.09.2026 ರ ಸಾಯಂಕಾಲ 4.00 ಗಂಟೆ | |
| 7 | ಟೆಂಡರ್‌ನ್ನು ಹಾಕಲು ಕೊನೆಯ ದಿನಾಂಕ ಮತ್ತು ಸಮಯ | ದಿ:29.09.2026ರ ಸಾಯಂಕಾಲ 4.00 ಗಂಟೆ | |
| 8 | ಟೆಂಡರ್ ತೆರೆಯುವ ಸ್ಥಳ, ಸಮಯ, ದಿನಾಂಕ | ದಿ:30.09.2026 ರಂದು ಮಧ್ಯಾಹ್ನ 3.00 ಗಂಟೆ | |

ವಿಶೇಷ ಸೂಚನೆ:- ಹೆಚ್ಚಿನ ಮಾಹಿತಿಯನ್ನು ಹಾಗೂ ಷರತ್ತು & ನಿಬಂಧನೆಗಳನ್ನು ಕಛೇರಿಯ ವೇಳೆಯಲ್ಲಿ ಸಂಬಂಧಪಟ್ಟ ಶಾಖೆಯಲ್ಲಿ ಪಡೆಯಬಹುದು.

**ಸಹಿ/-ಪೌರಾಯುಕ್ತರು, ನಗರಸಭೆ, ಕೊಳ್ಳೇಗಾಲ**

ಸಂ:ವಾಸಾಸಂಇ/ಚಾನಗರ/346/2026-27

## ಸಾರ್ವಜನಿಕರು ಗಣೇಶೋತ್ಸವದಲ್ಲಿ ಪಾಲಿಸಬೇಕಾದ ಸುರಕ್ಷತಾ ಕ್ರಮಗಳು

**ಮಡಿಕೇರಿ:** ಗಣಪತಿ ಪೆಂಡಾಲ್‌ಗೆ ಕಡ್ಡಾಯವಾಗಿ ತಾತ್ಕಾಲಿಕ ಮೀಟರ್‌ನ್ನು ಪಡೆಯತಕ್ಕದ್ದು. ಯಾವುದೇ ಮನೆ/ ಮಳಿಗೆ ಮೀಟರ್‌ಗಳಿಂದ ವಿದ್ಯುತ್ ತೆಗೆದುಕೊಳ್ಳುವಂತಿಲ್ಲ ಹಾಗೂ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರಿಂದ ವಿದ್ಯುತ್ ಸಂಪರ್ಕ ಪಡೆಯುವುದು. ಯಾವುದೇ ವಿದ್ಯುತ್ ಕಂಬಗಳಿಂದ ಅನಧೀಕೃತವಾಗಿ ವಿದ್ಯುತ್ ಲೈನ್ ತೆಗೆದುಕೊಳ್ಳುವಂತಿಲ್ಲ. ಇದು ಕಾನೂನು ಬಾಹಿರವಾಗಿದ್ದು, ಶಿಕ್ಷಾರ್ಹ ಅಪರಾಧವಾಗಿದೆ.

ಯಾವುದೇ ರೀತಿ ವಿದ್ಯುತ್ ಅವಘಡಗಳು ಸಂಭವಿಸಿದ್ದಲ್ಲಿ ತಾವುಗಳೇ ನೇರ ಹೊಣೆಗಾರರಾಗಿರುತ್ತೀರಿ. ಆದ್ದರಿಂದ, ಎಚ್ಚರಿಕೆಯಿಂದ ವಿದ್ಯುತ್ ಬಳಸುವಂತೆ ಸೂಚಿಸಲಾಗಿದೆ.

ಹಬ್ಬಕ್ಕೆ ತೋರಣ, ಪೆಂಡಾಲ್, ಸೀರಿಯಲ್ ಲೈಟ್‌ಗಳನ್ನು ಅಳವಡಿಸುವ ಮುನ್ನ ವಿದ್ಯುತ್ ತಂತಿಗಳ ಬಗ್ಗೆ ಗಮನವಿರಲಿ, ಸೀರಿಯಲ್ ಲೈಟ್ ತಂತಿಗಳು ಸಮರ್ಪಕವಾಗಿ ಇನ್ಸುಲೇಟ್ ಆಗಿವೆಯೇ ಎಂದು ಪರೀಕ್ಷಿಸಿಕೊಳ್ಳಿ, ಸೀರಿಯಲ್ ಲೈಟ್ ಹಾಗೂ ದೀಪಗಳನ್ನು ಹಾಕುವಾಗ ವಿದ್ಯುತ್ ಕಂಬದಿಂದ ನೇರ ಸಂಪರ್ಕ ಪಡೆಯಬಾರದು. ವಿದ್ಯುತ್ ತಂತಿ, ವಿದ್ಯುತ್ ಕಂಬ ಅಥವಾ ಪರಿವರ್ತಕ ಕೇಂದ್ರಗಳಿಗೆ ಚಪ್ಪರ, ಶಾಮಿಯಾನ ಕಟ್ಟಬಾರದು. ಗಣೇಶ ಮೂರ್ತಿಯ ಮೆರವಣಿಗೆ ವೇಳೆ ರಸ್ತೆ ಬದಿಯ ವಿದ್ಯುತ್ ಮಾರ್ಗಗಳ ಬಗ್ಗೆ ಎಚ್ಚರವಿರಬೇಕು ಹಾಗೂ ಎತ್ತರದ ಕಮಾನುಗಳನ್ನು ನಿರ್ಮಿಸದೇ, ವಿದ್ಯುತ್ ತಂತಿಗಳನ್ನು ಮೇಲಕ್ಕೆ ಎತ್ತುವ ಪ್ರಯತ್ನ ಮಾಡಬಾರದು.

ಮೆರವಣಿಗೆ ಮಾರ್ಗವನ್ನು ಮುಂಚಿತವಾಗಿ ಚಾ.ವಿ.ಸ.ನಿ.ನಿ.(ಸೆಸ್ಕ್)ಯ ಆಯಾಯ ಉಪವಿಭಾಗದ ಅಧಿಕಾರಿಗಳ ಗಮನಕ್ಕೆ ತಂದರೆ, ಅವರು ಅಗತ್ಯ ನೆರವು ಒದಗಿಸುತ್ತಾರೆ. ವಿದ್ಯುತ್ ಪರಿಕರಗಳು ಇರುವ ಸ್ಥಳಗಳಲ್ಲಿ 'ಅಪಾಯ ವಲಯ' ಎಂದು ಸೂಚಿಸಬೇಕು ಎಂದು ಚಾವಿಸನಿನಿ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ರಾಮಚಂದ್ರ ಅವರು ಕೋರಿದ್ದಾರೆ.

## ಸೆ.12 ರಂದು ಕೊಡ್ಲಿಪೇಟೆಯಲ್ಲಿ ಪ್ರಜಾಸೇವಾ ಆಂದೋಲನಾ ಸಭೆ

**ಮಡಿಕೇರಿ:** ಸೋಮವಾರಪೇಟೆ ತಾಲ್ಲೂಕು ಮಟ್ಟದ ಪ್ರಜಾಸೇವಾ ಆಂದೋಲನಾ ಸಭೆಯು ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ ಅವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್, 12 ರಂದು ಬೆಳಗ್ಗೆ 10.30 ಗಂಟೆಗೆ ಸೋಮವಾರಪೇಟೆ ತಾಲ್ಲೂಕು ಕೊಡ್ಲಿಪೇಟೆಯ ಕಿರಿಕೊಡ್ಲಿ ಮಠದ ಶ್ರೀಮತಿ ಭದ್ರಮ್ಮ ಮಹಂತಪ್ಪ ಕಲ್ಯಾಣ ಮಂಟಪ್ಪದಲ್ಲಿ ನಡೆಯಲಿದೆ.

ಸೋಮವಾರಪೇಟೆ ತಾಲ್ಲೂಕಿನ ಸಾರ್ವಜನಿಕರು ಪ್ರಜಾಸೇವಾ ಆಂದೋಲನದಲ್ಲಿ ಪಾಲ್ಗೊಂಡು ತಮ್ಮ ಕುಂದುಕೊರತೆ ಸಂಬಂಧ ಮನವಿ ಸಲ್ಲಿಸಿ ಪರಿಹಾರ ಪಡೆಯಬಹುದಾಗಿದೆ ಎಂದು ಸೋಮವಾರಪೇಟೆ ತಾಲ್ಲೂಕು ತಹಶೀಲ್ದಾರ್‌ರಾದ ಕೆ.ಕೆ. ಕೃಷ್ಣಮೂರ್ತಿ ಅವರು ಕೋರಿದ್ದಾರೆ.

ಸೆ.13 ರಂದು ಮಾಜಿ ಸೈನಿಕರ ಸಂಘದ ವಾರ್ಷಿಕ ಮಹಾಸಭೆ

ಮಡಿಕೇರಿ ಸೆ.11(ಕರ್ನಾಟಕ ವಾರ್ತೆ):-ಮಾಜಿ ಸೈನಿಕರ ಸಂಘದ 2025-26 ನೇ ಸಾಲಿನ ವಾರ್ಷಿಕ ಮಹಾಸಭೆಯು ಸೆಪ್ಟೆಂಬರ್, 13 ರಂದು ಬೆಳಗ್ಗೆ 10 ಗಂಟೆಗೆ ನಗರದ ರೋಟರಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಮಾಜಿ ಸೈನಿಕರ ಸಂಘದ ಅಧ್ಯಕ್ಷರು ಮತ್ತು ಕಾರ್ಯಕಾರಿ ಮಂಡಳಿ ತಿಳಿಸಿದೆ.

## ಸೆ.14 ರಂದು ಇತಿಹಾಸ ಪ್ರಸಿದ್ಧ ಶ್ರೀಕ್ಷೇತ್ರ ಹೊನ್ನಮ್ಮನ ಕೆರೆಗೆ ಬಾಗಿನ ಅರ್ಪಣೆ

**ಮಡಿಕೇರಿ:** ಸೋಮವಾರಪೇಟೆ ತಾಲ್ಲೂಕು ದೊಡ್ಡಮಳ್ತೆ ಗ್ರಾಮದ ಶ್ರೀ ಸಿದ್ದೇಶ್ವರ ಸ್ವಾಮಿ ದೇವಾಲಯ ಅಭಿವೃದ್ಧಿ ಸಮಿತಿ ವತಿಯಿಂದ ಶ್ರೀ ಸ್ವರ್ಣಗೌರಿ ಮಹೋತ್ಸವದ ಅಂಗವಾಗಿ ಇತಿಹಾಸ ಪ್ರಸಿದ್ಧ ಶ್ರೀ ಕ್ಷೇತ್ರ ಹೊನ್ನಮ್ಮನ ಕೆರೆ ಹೊನ್ನಮ್ಮ ತಾಯಿಗೆ ಬಾಗಿನ ಅರ್ಪಣೆ ಕಾರ್ಯಕ್ರಮವು ಸೆಪ್ಟೆಂಬರ್, 14 ರಂದು ಬೆಳಗ್ಗೆ 9 ಗಂಟೆಗೆ ನಡೆಯಲಿದೆ.

ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ, ವಿಧಾನ ಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಮಾಜಿ ಸಚಿವರಾದ ಬಿ.ಎ.ಜೀವಿಜಯ, ಎಂ.ಪಿ.ಅಪ್ಪಚ್ಚು ರಂಜನ್, ಅರಕಲಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಮಂಜು, ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್, ತಹಶೀಲ್ದಾರ್ ಕೆ.ಕೆ. ಕೃಷ್ಣಮೂರ್ತಿ, ಜಿ.ಪಂ.ಮಾಜಿ ಅಧ್ಯಕ್ಷರಾದ ಕೆ.ಪಿ.ಚಂದ್ರಕಲಾ, ಗ್ರಾ.ಪಂ. ಅಧ್ಯಕ್ಷರಾದ ಎಚ್.ಎಂ.ಗೋಪಾಲಕೃಷ್ಣ, ಗೌಡಳ್ಳಿ ಪ್ರಾ.ಕೃ.ಪ.ಸ.ಸಂ. ಅಧ್ಯಕ್ಷರಾದ ಭರತ್ ಕುಮಾರ್, ಮಾಜಿ ಅಧ್ಯಕ್ಷರಾದ ಎಚ್.ಆರ್.ಸುರೇಶ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಹರಪಳ್ಳಿ ರವೀಂದ್ರ, ಹಾಸನ ಶೇಖರ್ ಪೈಂಟ್ಸ್‌ನ ಶೇಖರ್, ಇತರರು ಪಾಲ್ಗೊಳ್ಳಲಿದ್ದಾರೆ.

# ಅರಣ್ಯ ಮತ್ತು ಪರಿಸರ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಿ: ಜಿಲ್ಲಾಧಿಕಾರಿ ಸೋಮಶೇಖರ್



**ಮಡಿಕೇರಿ:** ವರ್ಷದಿಂದ ವರ್ಷಕ್ಕೆ ಮಳೆ ಪ್ರಮಾಣ ಕಡಿಮೆಯಾಗುತ್ತಿದ್ದು, ಕಳೆದ 30 ವರ್ಷಗಳಲ್ಲಿ ಗಮನಿಸಿದಾಗ ಈ ಬಾರಿ ಜಿಲ್ಲೆಯಲ್ಲಿ ಮಳೆ ಪ್ರಮಾಣ ತುಂಬಾ ಕಡಿಮೆಯಾಗಿದೆ. ಆದ್ದರಿಂದ ಅರಣ್ಯ ಮತ್ತು ಪರಿಸರ ಸಂರಕ್ಷಣೆಗೆ ಎಲ್ಲೆಡೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಕರೆ ನೀಡಿದ್ದಾರೆ.

ಕರ್ನಾಟಕ ಅರಣ್ಯ ಇಲಾಖೆ, ಕೊಡಗು ವೃತ್ತ ಮಡಿಕೇರಿ ವತಿಯಿಂದ ನಗರದ ಅರಣ್ಯ ಭವನದ ಆವರಣದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಹಿನ್ನೆಲೆ ನಾಡಿನ ಅರಣ್ಯ ಮತ್ತು ವನ್ಯಜೀವಿ ಸಂಪತ್ತು ಸಂರಕ್ಷಿಸುವ ಸಂದರ್ಭದಲ್ಲಿ ಪ್ರಾಣ ತ್ಯಾಗ ಮಾಡಿದ ಅರಣ್ಯ ಹುತಾತ್ಮರ ಸ್ಮಾರಕಕ್ಕೆ ಪುಷ್ಪಗುಚ್ಛ ಇರಿಸಿ, ಗೌರವ ನಮನ ಸಲ್ಲಿಸಿ ಅವರು ಮಾತನಾಡಿದರು.

ಮಲೆನಾಡು ಭಾಗದಲ್ಲಿ ಸೆಪ್ಟೆಂಬರ್ ತಿಂಗಳಲ್ಲೂ ಸಹ ಮಳೆಯಾಗುತ್ತಿತ್ತು. ಆದರೆ ಈಗ ಮಳೆ ಇಲ್ಲದಂತಾಗಿ, ಬೇಸಿಗೆ ವಾತಾವರಣ ಕಾಣುತ್ತಿದೆ. ಆದ್ದರಿಂದ ಪರಿಸರ ಮತ್ತು ಅರಣ್ಯ ಸಂರಕ್ಷಣೆಗೆ ಹಿಂದಿಗಿಂತ ಇಂದು ಹೆಚ್ಚಿನ ಒತ್ತು ನೀಡುವುದು ಅತ್ಯಗತ್ಯ ಎಂದು ಜಿಲ್ಲಾಧಿಕಾರಿ ಅವರು ಪ್ರತಿಪಾದಿಸಿದರು.

ನದಿ, ತೊರೆ, ಹಳ್ಳ-ಕೊಳ್ಳ, ಬಾವಿ ಹಾಗೂ ಬೋರ್‌ವೆಲ್‌ಗಳು ಸಹ ನೀರು ಕ್ಷೀಣಿಸುತ್ತಿದೆ. ಮಳೆ- ಬೆಳೆ ಇಲ್ಲದೆ ಇಂದಿನ ಪರಿಸ್ಥಿತಿ ನೋಡಿದರೆ ಆತಂಕವಾಗುತ್ತಿದೆ ಎಂದರು.

ಭೂಮಿಯ ಮೇಲಿನ ಪರಿಸರ, ಹವಾಮಾನ ಬದಲಾವಣೆಯನ್ನು ಗಮನಿಸಿದಾಗ ಮುಂದಿನ ದಿನಗಳಲ್ಲಿ ಊಹಿಸಿಕೊಳ್ಳುವುದು, ಕಷ್ಟ ಸಾಧ್ಯವಾಗಿದೆ ಎಂದು ಜಿಲ್ಲಾಧಿಕಾರಿ ಅವರು ಹೇಳಿದರು.

'ಪರಿಸರ ಮತ್ತು ಹವಾಮಾನ ವೈಪರೀತ್ಯಕ್ಕೆ ಕಾರಣಗಳೇನು ಎಂಬ ಬಗ್ಗೆ ಪ್ರತಿಯೊಬ್ಬರೂ ಅವಲೋಕನ ಮಾಡಬೇಕು. ಒಂದು ಕಡೆ ಜಗತ್ತು ಒಂದು ಹಳ್ಳಿಯಾಗಿ, ತಾಂತ್ರಿಕವಾಗಿ ವೇಗವಾಗಿ ಓಡುತ್ತಿದೆ. ಆದರೆ ಹವಾಮಾನ ವೈಪರೀತ್ಯದಿಂದ ಮಳೆ-ಬೆಳೆ ಕಡಿಮೆಯಾದರೆ ಬದುಕು ಹೇಗೆ ಎಂಬ ಬಗ್ಗೆ ಚಿಂತಿಸಬೇಕಿದೆ. ಆದ್ದರಿಂದ ಕಾಡನ್ನು ಉಳಿಸುವುದರ ಜೊತೆಗೆ ಎಲ್ಲೆಡೆ ಗಿಡ ಮರಗಳನ್ನು ಬೆಳೆಸಬೇಕು ಎಂದು ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಸಲಹೆ ಮಾಡಿದರು.'

**ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ**

'ನಾವು ಅರಣ್ಯದೊಳಗೆ ಸಫಾರಿಗೆ ಹೋಗಿ ವನ್ಯಪ್ರಾಣಿ ವೀಕ್ಷಿಸಲು ಬಯಸುತ್ತೇವೆ, ಆದರೆ ಅದೇ ವನ್ಯ ಪ್ರಾಣಿಗಳು ಊರಿಗೆ ಬಂದಾಗ ಪಟಾಕಿ ಸಿಡಿಸಿ ಓಡಿಸುತ್ತೇವೆ.

ಈ ನಾಗರಿಕ ಮನೋಭಾವ ಬದಲಾಗಬೇಕು ಎಂದು ಜಿಲ್ಲಾಧಿಕಾರಿ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.'

ಅರಣ್ಯದಲ್ಲಿ ಪ್ರಾಣಿಗಳಿಗೂ ಸಹ ಬದುಕುವ ಹಕ್ಕು ಇದೆ. ಆದ್ದರಿಂದ ಅರಣ್ಯವನ್ನು ಅತಿಕ್ರಮಣ ಮಾಡದೆ ಪರಿಸರಕ್ಕೆ ಪೂರಕವಾಗಿ ಅರಣ್ಯ ಹಾಗೂ ಪರಿಸರ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಕಾಡನ್ನು ಸಂರಕ್ಷಿಸುವಲ್ಲಿ ಇಲಾಖೆಯಲ್ಲಿ ದುಡಿಯುತ್ತಿರುವ ವಾಚರ್, ಗಾರ್ಡ್‌ಗಳು ಸೇರಿದಂತೆ ಎಲ್ಲಾ ಹಂತದ ಸಿಬ್ಬಂದಿಗಳ ಕಾರ್ಯ ಅತ್ಯಂತ ಶ್ಲಾಘನೀಯ ಎಂದರು.

ಕೊಡಗು ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸೋನಲ್ ವೃಷ್ಣಿ ಅವರು ಮಾತನಾಡಿ ಅರಣ್ಯ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಆ ನಿಟ್ಟಿನಲ್ಲಿ ಅರಣ್ಯ ಸಂರಕ್ಷಣೆಗೆ ಎಲ್ಲರೂ ಸಹ ಕೈಜೋಡಿಸಬೇಕು ಎಂದು ಕೋರಿದರು.

ಪಶ್ಚಿಮ ಘಟ್ಟ ಪ್ರದೇಶದಲ್ಲಿ ಹೆಚ್ಚಿನ ಆನೆಗಳು ಹಾಗೂ ಹುಲಿಗಳು, ಜೊತೆಗೆ ಜಿಂಕೆ, ಕಡವೆ, ಹೀಗೆ ವನ್ಯ ಪ್ರಾಣಿಗಳು ವಾಸಿಸುತ್ತಿದ್ದು, ಕಾಡನ್ನು ಸಂರಕ್ಷಿಸಿದರೆ ವನ್ಯ ಪ್ರಾಣಿಗಳು ಸಹ ಬದುಕಲು ಸಾಧ್ಯ. ಆ ನಿಟ್ಟನಲ್ಲಿ ಪರಿಸರ, ಜನಜೀವನ ಎಲ್ಲವೂ ಸಹ ಸಮತೋಲನ ಕಾಣಬಹುದು ಎಂದರು.

ಅರಣ್ಯ ಸಂರಕ್ಷಣೆಯಲ್ಲಿ ಸ್ಥಳೀಯರ ಜೊತೆ ಬೆರೆತು ಕರ್ತವ್ಯ ನಿರ್ವಹಿಸಲು ಶ್ರಮಿಸಲಾಗುತ್ತಿದೆ. ಆದರೂ ಸಹ ಹಲವು ಎಡರು ತೊಡರುಗಳನ್ನು ಎದುರಿಸಿ ಕಾಡು ಸಂರಕ್ಷಣೆಯತ್ತ ಹೆಚ್ಚಿನ ಗಮನಹರಿಸಲಾಗಿದೆ ಎಂದು ಕೊಡಗು ವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಅವರು ವಿವರಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ವಿ.ಅಭಿಷೇಕ್ ಅವರು 1966 ರಿಂದ ಇಲ್ಲಿಯವರೆಗೆ ಅರಣ್ಯ ಸಂರಕ್ಷಣೆ ಕರ್ತವ್ಯ ಸಂದರ್ಭದಲ್ಲಿ ಹುತಾತ್ಮರಾದ ಅರಣ್ಯ ರಕ್ಷಕ 65 ಮಂದಿ ಹೆಸರನ್ನು ಓದಿದರು.

## ಸೆ. 15 ರಂದು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ

**ಮಂಡ್ಯ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಮತ್ತು ನ್ಯಾಯ ಮತ್ತು ಮಾವನ ಹಕ್ಕುಗಳ ಇಲಾಖೆ ಇವರ ಸಹಯೋಗದೊಂದಿಗೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಯುವ ಸಂಪತ್ತು ಸಭೆ ಚಾಲನೆ ಕಾರ್ಯಕ್ರಮವನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 10.30 ಗಂಟೆಗೆ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮಾನ್ಯ ಕೃಷಿ ಸಚಿವರಾದ ಪಿ. ಎಂ. ನರೇಂದ್ರಸ್ವಾಮಿ ರವರು,ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ರವರು ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ,ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್ ಆತ್ಮಾನಂದ,ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ,ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್,ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಬಿ.ಎಸ್. ಶಿವಣ್ಣ, ವಿಧಾನ ಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ,ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ,ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ವಿಜಯಲಕ್ಷ್ಮಿ ರಘುನಂದನ್, ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ ರವರು ಆಗಮಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಆನಂದ್ ಎಂ, ಮಂಡ್ಯ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಟಿ ಎಸ್ ಸತ್ಯಾನಂದ್ ರವರು ಆಗಮಿಸಲಿದ್ದಾರೆ. ಮುಖ್ಯ ಭಾಷಣಕಾರರಾಗಿ ಮಂಡ್ಯ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಮಂಜು ರವರು ಆಗಮಿಸಲಿದ್ದಾರೆ

# ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಿ: ಜಿಲ್ಲಾಧಿಕಾರಿ

**ಮಡಿಕೇರಿ:** ಜಿಲ್ಲೆಯ ಪ್ರವಾಸಿ ತಾಣಗಳನ್ನು ಪರಿಸರ ಸ್ನೇಹಿಯಾಗಿ ಮತ್ತಷ್ಟು ಜನಪ್ರಿಯಗೊಳಿಸುವುದು, ಸ್ಥಳೀಯ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದು ಹಾಗೂ ಪ್ರವಾಸಿಗರಿಗೆ ಉತ್ತಮ ಅನುಭವ ಕಲ್ಪಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳು ಮತ್ತು ಸಂಘ, ಸಂಸ್ಥೆಯವರು ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರವಾಸೋದ್ಯಮ ದಿನಾಚರಣೆ ಪ್ರಯುಕ್ತ ಶುಕ್ರವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತಾಡಿದರು.

ಜಿಲ್ಲೆಯಲ್ಲಿ ಪ್ರವಾಸೋದ್ಯಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಹೋಂಸ್ಟೇ ಅಸೋಸಿಯೇಷನ್, ಚೇಂಬರ್ ಆಫ್ ಕಾಮರ್ಸ್, ಟೂರ್ ಅಂಡ್ ಟ್ರಾವಲ್ಸ್, ರೋಟರಿ ಸಂಸ್ಥೆ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಸಹಕಾರ ಅಗತ್ಯ ಎಂದರು.

ಸಭೆಯಲ್ಲಿ ಜಿಲ್ಲೆಯ ಪ್ರವಾಸೋದ್ಯಮದ ವೈವಿಧ್ಯತೆ, ಸ್ಥಳೀಯ ಸಂಸ್ಕೃತಿ, ಪರಂಪರೆ, ಆಹಾರ, ಕಲೆ ಹಾಗೂ ಪ್ರಕೃತಿ ಸೌಂದರ್ಯವನ್ನು ಪ್ರವಾಸಿಗರಿಗೆ ಪರಿಚಯಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸುವ ಕುರಿತು ಚರ್ಚಿಸಲಾಯಿತು.

ಈ ಸಂದರ್ಭ ಮಾತನಾಡಿದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಎಚ್.ಶಶಿಧರ್ ಅವರು, ಪ್ರವಾಸೋದ್ಯಮ ದಿನಾಚರಣೆಯ ಪ್ರಯುಕ್ತ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ ಎಂದರು.

ಸಾಂಪ್ರದಾಯಿಕ ಹಾಗೂ ಸಾಂಸ್ಕೃತಿಕ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡುವ ನಿಟ್ಟಿನಲ್ಲಿ ಕೊಡಗಿನ ಸಾಂಪ್ರದಾಯಿಕ



ಆಹಾರ ಮೇಳ, ಕಾಫಿ, ಜೇನು, ಸಾಂಬಾರ ಪದಾರ್ಥಗಳು ಸೇರಿದಂತೆ ಸ್ಥಳೀಯ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಧಾರ್ಮಿಕ ಕೇಂದ್ರಗಳಾದ ತಲಕಾವೇರಿ, ಭಾಗಮಂಡಲ, ಓಂಕಾರೇಶ್ವರ ದೇವಸ್ಥಾನ, ಪ್ರವಾಸಿ ತಾಣಗಳಾದ, ರಾಜಾಸೀಟು, ನಿಸರ್ಗಧಾಮ ಸೇರಿದಂತೆ ಪ್ರಮುಖ ಪ್ರವಾಸಿ ತಾಣಗಳಲ್ಲಿ ಹೆರಿಟೇಜ್ ವಾಕ್ (ಪಾರಂಪರಿಕ ನಡಿಗೆ) ಕಾರ್ಯಕ್ರಮ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಉಪನಿರ್ದೇಶಕರು ತಿಳಿಸಿದರು.

ಪರಿಸರ ಸಂರಕ್ಷಣೆ ಮತ್ತು ತ್ಯಾಜ್ಯ ನಿರ್ವಹಣೆ ಕುರಿತು ಜಾಗೃತಿ ಮೂಡಿಸಲು ಪ್ರಮುಖ ಪ್ರವಾಸಿ ತಾಣಗಳಲ್ಲಿ 'ಸ್ವಚ್ಛ ಕೊಡಗು-ಸುಂದರ ಕೊಡಗು' ಅಭಿಯಾನ, ಶುಚಿತ್ವ ಕಾರ್ಯಕ್ರಮ ಹಾಗೂ ಪ್ಲಾಸ್ಟಿಕ್ ಮುಕ್ತ ಪ್ರತಿಜ್ಞೆ, ಪ್ರವಾಸಿಗರಿಗೆ ಮತ್ತು ಹೋಂಸ್ಟೇ-ರೆಸಾರ್ಟ್ ಮಾಲೀಕರಿಗೆ ಘನತ್ಯಾಜ್ಯ ವಿಲೇವಾರಿ ಮರುಬಳಕೆ ಕುರಿತು ಕಾರ್ಯಾಗಾರ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಪರಿಸರ ಕಾಳಜಿ ಕುರಿತ ಪ್ರಬಂಧ, ಚಿತ್ರಕಲೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗುವುದು, ಸಸಿ ನೆಡುವಿಕೆ ಹಾಗೂ ಜಲಮೂಲಗಳ ಸಂರಕ್ಷಣೆ ಹಾಗೂ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಡ್ರಗ್ಸ್ ಫ್ರೀ ಕುರಿತು ಜಾಗೃತಿ ಮೂಡಿಸಲು ವಾಕಥಾನ್, ಮ್ಯಾರಥಾನ್ ಮತ್ತು ಸೈಕಲ್ ಜಾಥಾ ಕಾರ್ಯಕ್ರಮಗಳನ್ನೂ ಹಮ್ಮಿಕೊಳ್ಳಲಾಗುತ್ತದೆ ಎಂದರು.

ವಿದ್ಯಾರ್ಥಿಗಳು, ಸ್ಟಾರ್ಟ್ ಅಪ್‌ಗಳು ಹಾಗೂ ಪ್ರವಾಸೋದ್ಯಮ ಕ್ಷೇತ್ರದ ಉದ್ಯಮಿಗಳು ಕೊಡಗಿನ ಸ್ವಚ್ಛ, ಸುರಕ್ಷಿತ ಮತ್ತು ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕಾಗಿ ಡಿಜಿಟಲ್ ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ನವೀನ ಕಲ್ಪನೆಗಳನ್ನು ಪ್ರಸ್ತುತಪಡಿಸುವ 'ಡಿಜಿಟಲ್ ಪ್ರವಾಸೋದ್ಯಮ ನವೋದ್ಯಮ ಸ್ಪರ್ಧೆ' ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಶಶಿಧರ್ ಅವರು ತಿಳಿಸಿದರು.

ಪ್ರವಾಸಿ ಮಾರ್ಗದರ್ಶಕರು, ಟ್ಯಾಕ್ಸಿ ಚಾಲಕರು, ಕಲಾವಿದರು ಹಾಗೂ ಸಣ್ಣ ಉದ್ಯಮಿಗಳಿಗೆ ಆನ್‌ಲೈನ್ ಪಟ್ಟಿ, ಡಿಜಿಟಲ್ ಪಾವತಿ, ಸಾಮಾಜಿಕ ಜಾಲತಾಣ ಬಳಕೆ ಮತ್ತು ಮೂಲಭೂತ ಕೃತಕ ಬುದ್ಧಿಮತ್ತೆ ಆಧಾರಿತ ಮಾರ್ಕೆಟಿಂಗ್ ಕುರಿತು ಡಿಜಿಟಲ್ ಕೌಶಲ್ಯ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಯುವಕರಿಗಾಗಿ ಕೊಡಗಿನ ಪ್ರಕೃತಿ, ಸಂಸ್ಕೃತಿ ಮತ್ತು ಪ್ರವಾಸಿ ತಾಣಗಳನ್ನು ಜವಾಬ್ದಾರಿಯುತವಾಗಿ ಪರಿಚಯಿಸುವ ಛಾಯಾಚಿತ್ರ, ಕಿರುಚಿತ್ರ ಹಾಗೂ ಪೋಸ್ಟರ್ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತದೆ. ನೈತಿಕ ಕೃತಕ ಬುದ್ಧಿಮತ್ತೆ ಬಳಕೆಯ ಸೃಜನಾತ್ಮಕ ಕೃತಿಗಳಿಗೂ ಅವಕಾಶ ಕಲ್ಪಿಸಲಾಗುತ್ತದೆ ಎಂದು ಅವರು ತಿಳಿಸಿದರು.

ಇದರೊಂದಿಗೆ ಸುಸ್ಥಿರ ಮತ್ತು ಜವಾಬ್ದಾರಿಯುತ ಪ್ರವಾಸೋದ್ಯಮ ಕುರಿತು ಸ್ಥಳೀಯ ಹೋಟೆಲ್, ಹೋಂಸ್ಟೇ, ಟೂರ್ ಆಪರೇಟರ್‌ಗಳೊಂದಿಗೆ ವಿಚಾರ ಸಂಕಿರಣ ಹಾಗೂ ಸಂವಾದ, ಪ್ರವಾಸೋದ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳ ಸನ್ಮಾನ, ಕೊಡಗಿನ ಪ್ರವಾಸಿ ತಾಣಗಳ ಕುರಿತ ಸಾಕ್ಷ್ಯಚಿತ್ರ ಪ್ರದರ್ಶನ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಡಿಜಿಟಲ್ ಪ್ರಚಾರ ಕೈಗೊಳ್ಳಲು ಉದ್ದೇಶಿಸಲಾಗಿದೆ. ಸ್ಥಳೀಯ ಶಾಲಾ ಮಕ್ಕಳಿಗೆ ಕೊಡಗಿನ ಪ್ರಮುಖ ಪ್ರವಾಸಿ ತಾಣಗಳಿಗೆ ಶೈಕ್ಷಣಿಕ ಭೇಟಿ ಏರ್ಪಡಿಸುವ ಮೂಲಕ ಜಿಲ್ಲೆಯ ಪ್ರಕೃತಿ, ಸಂಸ್ಕೃತಿ ಹಾಗೂ ಪ್ರವಾಸೋದ್ಯಮದ ಕುರಿತು ಅರಿವು ಮೂಡಿಸಲು ಸಹ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕೊಡಗು ಚೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷ ಬಿ.ಆರ್.ನಾಗೇಂದ್ರ ಪ್ರಸಾದ್, ಹೋಂಸ್ಟೇ ಅಸೋಸಿಯೇಷನ್ ಅಧ್ಯಕ್ಷರಾದ ಮೋಂತಿ ಗಣೇಶ್, ಟೂರ್ ಅಂಡ್ ಟ್ರಾವೆಲ್ ಅಸೋಸಿಯೇಷನ್ ವಂಸತ, ಹೋಂಸ್ಟೇ ಅಸೋಸಿಯೇಷನ್‌ನ ಪ್ರಮುಖರಾದ ನವೀನ್ ಅಂಬೆಕಲ್, ರೋಟರಿಯ ಮನೋಹರ್ ಕಾಮತ್, ಹೋಟೆಲ್ ಮತ್ತು ರೆಸಾರ್ಟ್ ಸಂಘದ ಸಲಹೆಗಾರರಾದ ಜಿ.ಚಿದ್ವಿಲಾಸ್, ವಿವಿಧ ಇಲಾಖೆಗಳ ಅಧಿಕಾರಿಗಳು, ಪ್ರವಾಸೋದ್ಯಮ ಇಲಾಖೆಯ ಜಿಲ್ಲಾ ಪ್ರವಾಸೋದ್ಯಮ ಸಮಾಲೋಚಕರಾದ ಜತೀನ್ ಬೋಪಣ್ಣ, ಇಲಾಖಾ ಸಿಬ್ಬಂದಿಗಳು ಇದ್ದರು.

# ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ಮಡಿಕೇರಿ:** ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿನಲ್ಲಿ ವಿವಿಧ ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ಸಾಲ ಯೋಜನೆ: ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದ ನಿರುದ್ಯೋಗಿಗಳು ಕೃಷಿ ಅವಲಂಬಿತ ಚಟುವಟಿಕೆ, ವ್ಯಾಪಾರ, ಕೈಗಾರಿಕೆ, ಸಾರಿಗೆ, ಮತ್ತು ಸೇವಾ ವಲಯದಲ್ಲಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಗರಿಷ್ಠ ರೂ.2 ಲಕ್ಷ ವರೆಗೆ ಆರ್ಥಿಕ ನೆರವು, ರೂ.1 ಲಕ್ಷಗಳವರೆಗಿನ ಸಾಲದಲ್ಲಿ ಶೇ.20 ರಷ್ಟು ಗರಿಷ್ಠ ರೂ.20 ಸಾವಿರಗಳ ಸಹಾಯಧನ ಹಾಗೂ ರೂ.1.01 ಲಕ್ಷದಿಂದ ರೂ.2 ಲಕ್ಷದವರೆಗೆ ಶೇ.15 ರಷ್ಟು ಕನಿಷ್ಠ ರೂ.20 ಸಾವಿರಗಳಿಂದ ಗರಿಷ್ಠ ರೂ.30 ಸಾವಿರ ಸಹಾಯಧನ(ಸಬ್ಸಿಡಿ) ಉಳಿಕೆ ಮೊತ್ತ ಶೇ.4 ರ ಬಡ್ಡಿದರದಲ್ಲಿ ನಿಗಮದಿಂದ ನೇರವಾಗಿ ಸಾಲ ಸೌಲಭ್ಯ ಪಡೆಯ ಬಯಸುವವರು ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪ ಜಾತಿಗಳಿಗೆ ಸೇರಿದ ಸೇರಿದವರಾಗಿರಬೇಕು.

ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98 ಸಾವಿರಗಳು ಪಟ್ಟಣ ಪ್ರದೇಶದವರಿಗೆ ರೂ.1.20 ಲಕ್ಷಗಳ ಒಳಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಿಗೆ 98 ಸಾವಿರ ಮತ್ತು ಪಟ್ಟಣ ಪ್ರದೇಶದವರಿಗೆ 1.20 ಲಕ್ಷ ರೂ. ಗಳ ಮಿತಿಯೊಳಗಿರಬೇಕು.

ಅರಿವು-ಶೈಕ್ಷಣಿಕ ಸಾಲ ಯೋಜನೆ: ಈ ಯೋಜನೆಯಡಿ ಸಿಇಟಿ ಮತ್ತು ನೀಟ್ ಮತ್ತಿತರ ಮೂಲಕ ಆಯ್ಕೆಯಾಗಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪ ಜಾತಿಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳಾದ ಎಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಮುಂತಾದ 28 ಕೋರ್ಸ್‌ಗಳ ವ್ಯಾಸಂಗಕ್ಕೆ ವಾರ್ಷಿಕ 1 ಲಕ್ಷ ರೂ.ಗಳಂತೆ ಕೋರ್ಸ್ನ ಅವಧಿಗೆ ಗರಿಷ್ಠ 4 ಲಕ್ಷ ರೂ.ಗಳಿಂದ ರೂ 5 ಲಕ್ಷ ರೂ.ಗಳಿಗೆ ವಾರ್ಷಿಕ ಶೇ.2ರ ಬಡ್ಡಿದರಲ್ಲಿ ಸಾಲ ಬಿಡುಗಡೆ ಮಾಡಲಾಗುವುದು. ಅಭ್ಯರ್ಥಿ ಮತ್ತು ಅವರ ಕುಟುಂಬದವರ ವಾರ್ಷಿಕ ವರಮಾನವು ರೂ.3.50 ಲಕ್ಷಗಳ ಮಿತಿಯಲ್ಲಿರಬೇಕು. ಮತ್ತು ವಯೋಮಿತಿ




30 ವರ್ಷದೊಳಗಿರಬೇಕು

ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ: ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಮಾಡಲು ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ. ಪೋಸ್ಟ್ ಡಾಕ್ಟಲ್ ಮತ್ತು ಮಾಸ್ಟರ್ ಡಿಗ್ರಿ (ಎಂಜಿನಿಯರಿಂಗ್ ಮತ್ತು ಟೆಕ್ನಾಲಜಿ, ಮ್ಯಾನೇಜ್ ಮೆಂಟ್ ಮತ್ತು ಕಾಮರ್ಸ್, ಸೈನ್ಸ್ ಮತ್ತು ಟೆಕ್ನಾಲಜಿ, ಅಗ್ರಿಕಲ್ಚರ್ ಮತ್ತು ಅಲೈಡ್ ಸೈನ್ಸಸ್/ಟೆಕ್ನಾಲಜಿ, ಮೆಡಿಸಿನ್, ಹ್ಯುಮ್ಯಾನಿಟೀಸ್ ಮತ್ತು ಸೋಸಿಯಲ್ ಸೈನ್ಸಸ್) ವ್ಯಾಸಂಗಕ್ಕೆ ಪ್ರವೇಶ ಪಡೆದ ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದವರಾಗಿರಬೇಕು.

ಕುಟುಂಬದ ವಾರ್ಷಿಕ ಆದಾಯ ಗರಿಷ್ಠ 15 ಲಕ್ಷ ರೂ.ಗಳ ಮಿತಿಯಲ್ಲಿರಬೇಕು. ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಶೇ.60ಕ್ಕಿಂತಲೂ ಹೆಚ್ಚಿನ ಅಂಕ ಪಡೆದಿರಬೇಕು. QS World Ranking 1000 ರೊಳಗೆ ಬರುವ ವಿಶ್ವ ವಿದ್ಯಾನಿಲಯಗಳಲ್ಲಿ ಪ್ರವೇಶ ಪಡೆದಿರಬೇಕು. ವಾರ್ಷಿಕ ಗರಿಷ್ಠ 25 ಲಕ್ಷ ರೂ.ಗಳು ಹಾಗೂ ಪೂರ್ಣ ಕೋರ್ಸ್‌ನ ಅವಧಿಗೆ 50 ಲಕ್ಷ ರೂ.ಗಳ ಸಾಲವನ್ನು ಬಡ್ಡಿರಹಿತವಾಗಿ ಒದಗಿಸಲಾಗುವುದು. ಸಾಲದ ಭದ್ರತೆಗೆ ನಿಗಮಕ್ಕೆ ಅರ್ಜಿದಾರ/ಜಾಮೀನುದಾರ/ಪೋಷಕರ ಸ್ಥಿರಾಸ್ತಿಯನ್ನು ನಿಗಮಕ್ಕೆ ಆಧಾರ ಮಾಡಬೇಕು. ಅರ್ಜಿಯ ಜೊತೆಯಲ್ಲಿ ವಿದೇಶಿ ವಿಶ್ವ ವಿದ್ಯಾಲಯದ ಪ್ರವೇಶ ಪತ್ರ ವಿದ್ಯಾರ್ಥಿಯ ವೀಸಾ ಪಾಸ್ ಪೋರ್ಟ್ ಮತ್ತು ಏರ್ ಟಿಕೇಟ್ ಪ್ರತಿ ಒದಗಿಸಬೇಕು. ಸ್ನಾತಕೋತ್ತರ ಕೋರ್ಸ್‌ಗಳಿಗೆ ವಯೋಮಿತಿ 32, ಪಿಎಚ್‌ಡಿ ಕೋರ್ಸ್‌ಗಳಿಗೆ 35 ವರ್ಷಗಳ ವಯೋಮಿತಿಯೊಳಗೆ ಇರಬೇಕು.

ಈ ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2024-25 ಮತ್ತು 2025-26ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಈ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ನಿಗಮದ ವೆಬ್‌ಸೈಟ್ www.kssd.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು. ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಜಿಲ್ಲೆಯಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿಗಳಲ್ಲಿ ದೂರವಾಣಿ ಸಂಖ್ಯೆ: 08272-221656 ಮೂಲಕ ಸಂಪರ್ಕಿಸಬಹುದು. ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ಅಕ್ಟೋಬರ್, 01 ಕೊನೆಯ ದಿನವಾಗಿದೆ ಎಂದು ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಶಿಕ್ಷಣದಿಂದ ಪ್ರಜ್ಞಾವಂತ ಸಮಾಜ ನಿರ್ಮಾಣ ಸಾಧ್ಯ

**ಮಂಡ್ಯ:** ಮಕ್ಕಳಿಗೆ ಉತ್ತಮ ಸಂಸ್ಕಾರ, ಜ್ಞಾನ ಹಾಗೂ ಪ್ರಜ್ಞಾವಂತಿಕೆ ಬೆಳೆಸುವಲ್ಲಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ನಾಡಿನ ಜನರನ್ನು ಪ್ರಜ್ಞಾವಂತರನ್ನಾಗಿ ರೂಪಿಸುವಲ್ಲಿ ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರದ ಜವಾಬ್ದಾರಿ ಅತ್ಯಂತ ಮಹತ್ವದ್ದಾಗಿದೆ ಎಂದು ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ತಿಳಿಸಿದರು.

ಮಂಡ್ಯದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶಿಕ್ಷಣ ಇಲಾಖೆ, ಅಧಿಕಾರಿಗಳು, ಶಿಕ್ಷಕರು ಹಾಗೂ ಪೋಷಕರ ಸಮನ್ವಯದ ಪ್ರಯತ್ನದಿಂದ ಮಂಡ್ಯ ಜಿಲ್ಲೆ ರಾಜ್ಯದಲ್ಲಿ ಐದನೇ ಸ್ಥಾನ ಗಳಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಈ ಸಾಧನೆಗಾಗಿ ಶಾಲಾ ಶಿಕ್ಷಣ ಇಲಾಖೆ, ಅಧಿಕಾರಿಗಳು, ಶಿಕ್ಷಕರು ಹಾಗೂ ಪೋಷಕರನ್ನು ಅಭಿನಂದಿಸುವುದಾಗಿ ಹೇಳಿದರು.

ಮುಂದಿನ ದಿನಗಳಲ್ಲಿ ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಇನ್ನಷ್ಟು ಶ್ರಮ ವಹಿಸಿ ಕಾರ್ಯನಿರ್ವಹಿಸುವ ಮೂಲಕ ಮಂಡ್ಯ ಜಿಲ್ಲೆಯನ್ನು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯದಲ್ಲೇ ಪ್ರಥಮ ಸ್ಥಾನಕ್ಕೆ ಕೊಂಡೊಯ್ಯಬೇಕು. ಜಿಲ್ಲೆ ಉತ್ತಮ ಫಲಿತಾಂಶದೊಂದಿಗೆ ಮೊದಲ ಸ್ಥಾನ ಗಳಿಸಿದರೆ ಸರ್ಕಾರದ ವತಿಯಿಂದ ಗೌರವಿಸಲಾಗುವುದು ಎಂದು ಭರವಸೆ ನೀಡಿದರು.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿಯೂ ಮಂಡ್ಯ ಜಿಲ್ಲೆ 11ನೇ ಸ್ಥಾನ ಪಡೆದಿದ್ದು, ಇದು ಉತ್ತಮ ಸಾಧನೆಯಾಗಿದೆ. ಫಲಿತಾಂಶವನ್ನು ಮತ್ತಷ್ಟು ಸುಧಾರಿಸಿ ಮುಂದಿನ ದಿನಗಳಲ್ಲಿ ಪ್ರಥಮ ಸ್ಥಾನ ಗಳಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯವರು ಹಾಗೂ ಶಿಕ್ಷಕರು ಕಾರ್ಯತತ್ಪರರಾಗಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಚುನಾವಣಾ ಆಯೋಗಕ್ಕೆ ಸಂಬಂಧಿಸಿದ ಕಾರ್ಯಗಳು ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಲ್ಲಿ ಶಿಕ್ಷಕರು ಜವಾಬ್ದಾರಿಯಿಂದ ಭಾಗವಹಿಸಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಜಿಲ್ಲೆಯ ಅಭಿವೃದ್ಧಿ ಹಾಗೂ ಜನಪರ ಕಾರ್ಯಗಳಿಗೆ ಮುಂದಿನ ದಿನಗಳಲ್ಲಿಯೂ ಶಿಕ್ಷಕರ ಸಹಕಾರ ಮತ್ತು ಹೆಚ್ಚಿನ ಶ್ರಮ ಅಗತ್ಯವಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರದ ಅವಧಿಯಲ್ಲಿ ಇನ್ನೂ ಉಳಿದಿರುವ ಒಂದೂವರೆ ವರ್ಷದಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಲವು ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು ಎಂದು ಸಚಿವರು ತಿಳಿಸಿದರು.



ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಮಾತನಾಡಿ ರಾಜ್ಯದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಶಿಕ್ಷಕರ ನೇಮಕಾತಿಗೆ ಆದ್ಯತೆ ನೀಡಲಾಗಿದೆ. ಮಂಡ್ಯ ಜಿಲ್ಲೆಯಲ್ಲಿ ಸುಮಾರು 1,800 ಶಿಕ್ಷಕರ ನೇಮಕಾತಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಮಂಡ್ಯ ತಾಲೂಕಿನಲ್ಲಿ ಈಗಾಗಲೇ 60 ಶಾಲೆಗಳನ್ನು ದುರಸ್ತಿ ಮಾಡಲಾಗಿದ್ದು, ಮುಂದಿನ ಹಂತದಲ್ಲಿ 40 ಶಾಲೆಗಳ ದುರಸ್ತಿಗೆ ಅನುದಾನ ಒದಗಿಸಲಾಗಿದೆ. ಶೀಘ್ರದಲ್ಲೇ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು.

ಶಿಕ್ಷಕರ ಬೇಡಿಕೆಗಳಿಗೆ ಸರ್ಕಾರ ಬದ್ಧವಾಗಿದ್ದು, ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಶಿಕ್ಷಕರು ಪಾರದರ್ಶಕವಾಗಿ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು. ಶಾಲೆಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸುವುದರ ಜೊತೆಗೆ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಕೆ. ವಿವೇಕಾನಂದ ಮಾತನಾಡಿ, ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕರಾಗಿ ಹಾಗೂ ರಾಷ್ಟ್ರಪತಿಯಾಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ತಾಯಿ-ತಂದೆಯರ ನಂತರ ಶಿಕ್ಷಕರು ಮಕ್ಕಳ ಬದುಕಿಗೆ ಉತ್ತಮ ದಾರಿ ತೋರಿಸುವ ಪ್ರಮುಖ ವ್ಯಕ್ತಿಗಳಾಗಿದ್ದಾರೆ ಎಂದು ತಿಳಿಸಿದರು.ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಮಾಜದಲ್ಲಿ ಶಿಕ್ಷಕರಿಗೆ ವಿಶೇಷ ಸ್ಥಾನವಿದ್ದು, ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಬೇಕು ಎಂದು ಮನವಿ ಮಾಡಿದರು.

# ದೃಷ್ಟಿಹೀನರಲ್ಲ ;ದೂರದೃಷ್ಟಿಯುಳ್ಳವರು!



। ಶಿವಬಸಪ್ಪ ಗು ಜಂಗಾಲಿ
ಲೇಖಕರು ಹಾಗೂ ಸಾಹಿತಿ

ಮನುಷ್ಯನಿಗೆ ಕಣ್ಣುಗಳು ಪ್ರಕೃತಿಯ ಅಮೂಲ್ಯ ಕೊಡುಗೆ. ಕಣ್ಣುಗಳ ಮೂಲಕ ನಾವು ಬಣ್ಣಗಳನ್ನು ನೋಡುತ್ತೇವೆ, ಮುಖಗಳನ್ನು ಗುರುತಿಸುತ್ತೇವೆ, ದಾರಿಗಳನ್ನು ಕಂಡುಕೊಳ್ಳುತ್ತೇವೆ, ಪ್ರಕೃತಿಯ ಸೌಂದರ್ಯವನ್ನು ಆಸ್ವಾದಿಸುತ್ತೇವೆ. ಹೀಗಾಗಿ ಕಣ್ಣುಗಳಿಲ್ಲದ ಬದುಕನ್ನು ಕೆಲವರು ಅಪೂರ್ಣ ಬದುಕು ಎಂದು ಭಾವಿಸುತ್ತಾರೆ. ಆದರೆ ಕಣ್ಣುಗಳಿಂದ ಕಾಣುವುದು ಮಾತ್ರ ಬದುಕಿನ ಸಂಪೂರ್ಣ ಅರ್ಥವಲ್ಲ. ಕಣ್ಣುಗಳು ಜಗತ್ತನ್ನು ತೋರಿಸಬಹುದು; ಆದರೆ ಬದುಕಿನ ನಿಜವಾದ ಅರ್ಥವನ್ನು ತಿಳಿಸುವುದು ಜ್ಞಾನ, ಅನುಭವ, ಆತ್ಮವಿಶ್ವಾಸ ಮತ್ತು ಮನಸ್ಸಿನ ದೃಷ್ಟಿ. ಈ ಸತ್ಯವನ್ನು ತಮ್ಮ ಬದುಕಿನ ಪ್ರತಿಯೊಂದು ಹೆಜ್ಜೆಯಲ್ಲೂ ಸಾಬೀತುಪಡಿಸುತ್ತಿರುವವರು ದೃಷ್ಟಿಹೀನರು.

ದೃಷ್ಟಿ ಇಲ್ಲದಿರುವುದು ಒಂದು ದೈಹಿಕ ಸವಾಲು; ಆದರೆ ಅದು ಜ್ಞಾನಕ್ಕೆ, ಪ್ರತಿಭೆಗೆ, ಕನಸಿಗೆ ಅಥವಾ ಸಾಧನೆಗೆ ಗಡಿಯಲ್ಲ. ಕಣ್ಣುಗಳು ಬೆಳಕನ್ನು ಸ್ವೀಕರಿಸದಿದ್ದರೂ ಮನಸ್ಸು ಜ್ಞಾನದ ಬೆಳಕಿನಿಂದ ಪ್ರಕಾಶಿಸಬಹುದು. ಹೊರಗಿನ ಪ್ರಪಂಚವನ್ನು ಕಣ್ಣಿನಿಂದ ನೋಡಲು ಸಾಧ್ಯವಾಗದ ವ್ಯಕ್ತಿ, ತನ್ನೊಳಗಿನ ಸಾಮರ್ಥ್ಯವನ್ನು ಅರಿತುಕೊಂಡಾಗ ಅದ್ಭುತ ಸಾಧನೆ ಮಾಡಬಲ್ಲನು. ಆದ್ದರಿಂದ ಅವರನ್ನು ಕೇವಲ ?ದೃಷ್ಟಿಹೀನರು? ಎಂದು ಗುರುತಿಸುವುದಕ್ಕಿಂತ, ಅವರಲ್ಲಿರುವ ಆತ್ಮಸ್ಥೈರ್ಯ ಮತ್ತು ದೂರದೃಷ್ಟಿಯನ್ನು ಗುರುತಿಸುವುದು ಮುಖ್ಯ.

ನಾವು ಕಣ್ಣುಗಳಿರುವವರಾಗಿದ್ದರೂ ಅನೇಕ ಬಾರಿ ಬದುಕಿನ ಸರಿಯಾದ ದಾರಿಯನ್ನು ಕಾಣುವುದಿಲ್ಲ.




ನಮ್ಮ ಮುಂದೆ ಇರುವ ಅವಕಾಶ ಕಾಣುವುದಿಲ್ಲ; ಪಕ್ಕದಲ್ಲಿರುವವರ ನೋವು ಕಾಣುವುದಿಲ್ಲ; ಮನೆಯವರ ಪ್ರೀತಿಯ ಮೌಲ್ಯ ಕಾಣುವುದಿಲ್ಲ. ಕಣ್ಣುಗಳು ತೆರೆದಿದ್ದರೂ ಮನಸ್ಸು ಮುಚ್ಚಿಕೊಂಡಿದ್ದರೆ ಅಂತಹ ದೃಷ್ಟಿಗೆ ಅರ್ಥವೇನು? ಮತ್ತೊಂದೆಡೆ, ದೃಷ್ಟಿಹೀನ ವ್ಯಕ್ತಿ ಶಬ್ದವನ್ನು ಆಲಿಸಿ, ಸ್ಪರ್ಶವನ್ನು ಗುರುತಿಸಿ, ಪರಿಸರವನ್ನು ಗ್ರಹಿಸಿ, ಪ್ರತಿಯೊಂದು ಹೆಜ್ಜೆಯನ್ನೂ ಎಚ್ಚರಿಕೆಯಿಂದ ಇಡುತ್ತಾನೆ. ಇದು ಕೇವಲ ಬದುಕುವ ಕಲೆ ಅಲ್ಲ; ಇದು ಅಂತರಂಗದ ಜಾಗೃತಿಯ ಪ್ರತೀಕ.

ದೃಷ್ಟಿಹೀನರ ಬದುಕು ನಮಗೆ ಮೊದಲು ಕಲಿಸುವ ಪಾಠ ಸ್ವಾವಲಂಬನೆ. ಕೈಯಲ್ಲಿ ಬಿಳಿ ಕೋಲು ಹಿಡಿದು ದಾರಿಯಲ್ಲಿ ಸಾಗುವ ವ್ಯಕ್ತಿಯನ್ನು ನಾವು ಕೆಲವೊಮ್ಮೆ ಕರುಣೆಯಿಂದ ನೋಡುತ್ತೇವೆ. ಆದರೆ ಆ ಪ್ರತಿಯೊಂದು ಹೆಜ್ಜೆಯ ಹಿಂದೆ ಅಡಗಿರುವ ಧೈರ್ಯವನ್ನು ಅರಿಯುವುದಿಲ್ಲ. ಅವರಿಗೆ ಪ್ರತಿಯೊಂದು ದಾರಿಯೂ ಒಂದು ಸವಾಲಾಗಿರಬಹುದು. ಆದರೂ ಅವರು ನಿಲ್ಲುವುದಿಲ್ಲ. ಜೀವನದಲ್ಲಿ ದಾರಿ ಸಿಗುವುದಿಲ್ಲವೆಂದು ಕುಳಿತುಕೊಳ್ಳುವುದಕ್ಕಿಂತ, ದಾರಿಯನ್ನು ಹುಡುಕುತ್ತಾ ಮುಂದೆ ಸಾಗುವುದೇ ಬದುಕಿನ ನಿಜವಾದ ಗೆಲುವು ಎಂಬುದನ್ನು ಅವರು ತೋರಿಸುತ್ತಾರೆ.

ಜ್ಞಾನವೆಂದರೆ ಕೇವಲ ಕಣ್ಣಿನಿಂದ ಪುಸ್ತಕ ಓದುವುದಲ್ಲ. ಜ್ಞಾನಕ್ಕೆ ಜಿಜ್ಞಾಸೆ, ಪರಿಶ್ರಮ ಮತ್ತು ಅನುಭವ ಅಗತ್ಯ. ಬ್ರೈಲ್ ಲಿಪಿಯ ಮೂಲಕ ಬೆರಳ ತುದಿಗಳಿಂದ ಅಕ್ಷರಗಳನ್ನು ಅರಿತು ಜ್ಞಾನವನ್ನು ಸಂಪಾದಿಸುವವರು, ಶಿಕ್ಷಣದ ನಿಜವಾದ ಮೌಲ್ಯವನ್ನು ನಮಗೆ ತಿಳಿಸುತ್ತಾರೆ. ಇಂದು ತಂತ್ರಜ್ಞಾನವೂ ದೃಷ್ಟಿಹೀನರ ಬದುಕಿಗೆ ಹೊಸ ಅವಕಾಶಗಳನ್ನು ತೆರೆದಿದೆ. ಸ್ಕ್ರೀನ್ ರೀಡರ್‌ಗಳು, ಧ್ವನಿ ಆಧಾರಿತ ತಂತ್ರಜ್ಞಾನ, ಆಡಿಯೋ ಪುಸ್ತಕಗಳು ಮತ್ತು ವಿವಿಧ ಡಿಜಿಟಲ್ ಸಾಧನಗಳ ನೆರವಿನಿಂದ ಅವರು ಶಿಕ್ಷಣ, ಉದ್ಯೋಗ, ಸಾಹಿತ್ಯ, ಸಂಗೀತ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ.

ಆದರೆ ಸಮಾಜದ ಮನೋಭಾವ ಇನ್ನೂ ಬದಲಾಗಬೇಕಿದೆ. ದೃಷ್ಟಿಹೀನರನ್ನು ನೋಡಿದಾಗ ಮೊದಲು ಅವರ ಕೊರತೆಯನ್ನು ನೋಡುವ ಬದಲು ಅವರ ಸಾಮರ್ಥ್ಯವನ್ನು ನೋಡಬೇಕು. ?ಅವರಿಗೆ ಇದು ಸಾಧ್ಯವಿಲ್ಲ? ಎಂಬ ಅನುಮಾನವೇ ಅವರ ಮುಂದಿನ ಹೆಜ್ಜೆಗೆ ಅಡ್ಡಿಯಾಗಬಹುದು. ಕರುಣೆಯ ಹೆಸರಿನಲ್ಲಿ ಅವರನ್ನು ದುರ್ಬಲರೆಂದು ಭಾವಿಸುವುದು ಸರಿಯಲ್ಲ. ಅವರಿಗೆ ಬೇಕಾಗಿರುವುದು ಕೇವಲ ಅನುಕಂಪವಲ್ಲ; ಅವಕಾಶ, ಗೌರವ, ಸಮಾನತೆ ಮತ್ತು ಸ್ವಾವಲಂಬನೆಯ ಬದುಕು.

ಕುಟುಂಬ ಮತ್ತು ಶಿಕ್ಷಣ ಸಂಸ್ಥೆಗಳ ಪಾತ್ರವೂ ಮಹತ್ವದ್ದು. ದೃಷ್ಟಿಹೀನ ಮಗುವನ್ನು ಸದಾ ರಕ್ಷಿಸುವ ಹೆಸರಿನಲ್ಲಿ ಎಲ್ಲ ಕೆಲಸಗಳಿಂದ ದೂರವಿಡುವುದು ಪ್ರೀತಿಯಲ್ಲ. ಸ್ವತಃ ಪ್ರಯತ್ನಿಸಲು ಅವಕಾಶ ನೀಡಬೇಕು. ತಪ್ಪಾದರೆ ತಿದ್ದಬೇಕು; ಆದರೆ ಪ್ರಯತ್ನಿಸುವ ಹಕ್ಕನ್ನು ಕಸಿದುಕೊಳ್ಳಬಾರದು. ಆತ್ಮವಿಶ್ವಾಸದಿಂದ ತನ್ನ ಕಾಲಿನ ಮೇಲೆ ನಿಂತು ಬದುಕಿನ ದಾರಿಯನ್ನು ತಾನೇ ಆರಿಸಿಕೊಳ್ಳುವಂತೆ ಬೆಳೆಸುವುದೇ ನಿಜವಾದ ಬೆಂಬಲ.

ನಮ್ಮ ನಗರಗಳು, ರಸ್ತೆಗಳು ಮತ್ತು ಸಾರ್ವಜನಿಕ ಸ್ಥಳಗಳೂ ಎಲ್ಲರಿಗೂ ಸಮಾನವಾಗಿ ಅನುಕೂಲವಾಗಬೇಕು. ಪಾದಚಾರಿ ಮಾರ್ಗ, ಸ್ಪರ್ಶಾಧಾರಿತ ಮಾರ್ಗಸೂಚಿ, ಧ್ವನಿ ಸೂಚನೆ, ಸುಲಭವಾಗಿ ಬಳಸಬಹುದಾದ ಸಾರ್ವಜನಿಕ ಸಾರಿಗೆ ಮತ್ತು ಡಿಜಿಟಲ್ ಸೇವೆಗಳು ದೃಷ್ಟಿಹೀನರಿಗೆ ಸ್ವತಂತ್ರ ಬದುಕಿನ ಅವಕಾಶ ನೀಡುತ್ತವೆ. ಸಮಾನತೆ ಎಂಬುದು ಭಾಷಣಗಳಲ್ಲಿ ಮಾತ್ರ ಕೇಳಿಸಬಾರದು; ಅದು ನಮ್ಮ ನಡೆ-ನುಡಿಗಳಲ್ಲೂ, ವ್ಯವಸ್ಥೆಗಳಲ್ಲೂ ಕಾಣಬೇಕು.

ಇಂದು ನಾವು ಕಣ್ಣಿಗೆ ಕಾಣುವ ಸೌಂದರ್ಯ, ಹಣ, ಸ್ಥಾನಮಾನ ಮತ್ತು ಯಶಸ್ಸಿನ ಹಿಂದೆ ಓಡುತ್ತಿದ್ದೇವೆ. ಆದರೆ ದೃಷ್ಟಿಹೀನರು ನಮಗೆ ವಿಭಿನ್ನವಾದ ಬದುಕಿನ ಪಾಠ ಕಲಿಸುತ್ತಾರೆ. ನೆಮ್ಮದಿ, ಪ್ರೀತಿ, ಆತ್ಮಗೌರವ, ಜ್ಞಾನ, ಸಂಬಂಧ ಮತ್ತು ಸಾಧನೆ?ಇವುಗಳಲ್ಲಿ ಬಹಳಷ್ಟು ಕಣ್ಣಿಗೆ ಕಾಣುವುದಿಲ್ಲ; ಆದರೆ ಬದುಕಿಗೆ ನಿಜವಾದ ಅರ್ಥ ನೀಡುತ್ತವೆ.

ನಿಜವಾದ ದೃಷ್ಟಿ ಕಣ್ಣಿನಲ್ಲಿಲ್ಲ; ಅದು ಚಿಂತನೆಯಲ್ಲಿದೆ. ಕಣ್ಣುಗಳಿದ್ದರೂ ಗುರಿ ಕಾಣದವನು ಅಂಧಕಾರದಲ್ಲಿದ್ದಾನೆ. ಕಣ್ಣುಗಳಿಲ್ಲದಿದ್ದರೂ ಗುರಿಯತ್ತ ದೃಢವಾಗಿ ಸಾಗುವವನು ಬೆಳಕಿನಲ್ಲಿದ್ದಾನೆ. ದೃಷ್ಟಿ ದಾರಿಯನ್ನು ತೋರಿಸಬಹುದು; ಆದರೆ ದೂರದೃಷ್ಟಿ ಗಮ್ಯವನ್ನು ತೋರಿಸುತ್ತದೆ.

ಆದ್ದರಿಂದ ದೃಷ್ಟಿಹೀನರನ್ನು ಕರುಣೆಯಿಂದ ನೋಡುವುದಕ್ಕಿಂತ ಗೌರವದಿಂದ ನೋಡೋಣ. ಅವರ ಕೊರತೆಯನ್ನು ಎಣಿಸುವುದಕ್ಕಿಂತ ಸಾಮರ್ಥ್ಯವನ್ನು ಗುರುತಿಸೋಣ. ಅವರ ಕೈ ಹಿಡಿದು ಸದಾ ನಡೆಸುವುದಕ್ಕಿಂತ, ಅವರು ಸ್ವತಃ ನಡೆಯುವಂತಹ ದಾರಿಯನ್ನು ನಿರ್ಮಿಸೋಣ. ಏಕೆಂದರೆ ಅವರು ದೃಷ್ಟಿಹೀನರಲ್ಲ; ಅಂಧಕಾರವನ್ನೇ ಆತ್ಮವಿಶ್ವಾಸದಿಂದ ಸೋಲಿಸಿ, ಜ್ಞಾನದ ಬೆಳಕಿನಲ್ಲಿ ಬದುಕಿನ ಹೊಸ ದಾರಿಗಳನ್ನು ಹುಡುಕುತ್ತಿರುವ ದೂರದೃಷ್ಟಿಯುಳ್ಳವರು!.

# "ಸ್ವರ್ಣಗೌರಿ ಹಾಗೂ ಗಣೇಶಹಬ್ಬದ ಪೂಜಾ ಫಲ"



। ಸುಮ ಬೆಳೆಗೆರೆ

ಭಾರತೀಯ ಸನಾತನ ಪರಂಪರೆಯಲ್ಲಿ ಧಾರ್ಮಿಕ ಆಚರಣೆಗಳು ಅನಾದಿಕಾಲದಿಂದಲೂ ಪ್ರಾಮುಖ್ಯತೆ ಹೊಂದಿದೆ ಸಂತಸ ನೆಮ್ಮದಿಯ ಜೊತೆಗೆ ಸಡಗರ ತರುವ ಹಬ್ಬಗಳ ಆಚರಣೆ ನಮ್ಮ ಬದುಕಿನ ಜೊತೆ ಅವಿನಾಭಾವ ಸಂಬಂಧ ಹೊಂದಿದೆ ಇಂತಹ ಹಬ್ಬಗಳಲ್ಲಿ ಹಿಂದೂ ಸಂಪ್ರದಾಯದ ಸ್ವರ್ಣ ಗೌರಿ ಮತ್ತು ಗಣಪತಿ ಹಬ್ಬನಮ್ಮ ನಾಡಿನ ದೊಡ್ಡ ಹಬ್ಬಗಳು. ಗೌರಿದೇವಿಯು ಆದಿಶಕ್ತಿ ಮಾತೆಯ ಅವತಾರ ಎಂದು ಹೇಳುತ್ತಾರೆ ಗೌರಿ ಶಿವನ ಶಕ್ತಿ ಭದ್ರಪದ ಮಾಸದ ಮೂರನೆಯ ದಿನ ಅಂದರೆ ತದಿಗೆ ದಿನ ಗೌರಿ ಹಬ್ಬವನ್ನು ಆಚರಿಸುತ್ತೇವೆ ಗೌರಿಯು ತನ್ನ ತವರು ಮನೆಗೆಬರುತ್ತಾಳೆ ಎಂಬ ನಂಬಿಕೆ ಇದೆ ಆ ದಿನವನ್ನು ಗೌರಿ ಹಬ್ಬ ಎಂದು ಗೌರಿದೇವಿ ಯನ್ನು ಪೂಜಿಸುತ್ತೇವೆ ಮತ್ತೆ ಗೌರಿಯನ್ನು ಕೈಲಾಸಕ್ಕೆ ಕರೆದುಕೊಂಡು ಹೋಗಲು ಗೌರಿ ಪುತ್ರನಾದ ಗಣೇಶನು ಭೂಮಿಗೆ ಬರುತ್ತಾನೆ. ಆ ದಿನವನ್ನು ಗಣಪತಿ ಹಬ್ಬ ಎಂದು ಪೂಜಿಸುತ್ತೇವೆ ಮಂಟಪ ಸಿದ್ದ ಮಾಡಿ ಬಾಳೆ ಕಂಬ ಮಾವಿನ ತೋರಣ ಕಟ್ಟಿ ಗೌರಿಯನ್ನು ಆರಿಶಿನಗೌರಿ ಮರಳುಗೌರಿ ಮತ್ತು ವಿಗ್ರಹದ ರೂಪದ ಗೌರಿಯನ್ನು ತಟ್ಟೆಯಲ್ಲಿ ಅಕ್ಕಿ ಹಾಕಿ ಮಂಟಪದಲ್ಲಿಟ್ಟು



ಗೌರಿಯನ್ನು ವಿವಿಧ ಬಗೆಯ ಹೂಗಳಿಂದ ಹೂಗಳಿಂದ ಅಲಂಕರಿಸಿ ಪೂಜೆ ಮಾಡಿ ವ್ರತಕಥೆಯನ್ನು ಓದಬೇಕು ಮರದ ಬಾಗಿನ ಇಟ್ಟು ಪೂಜೆ ಮಾಡಿ ಮುತ್ತೈದೆಯರಿಗೆ ಬಾಗಿನ ಕೊಡುತ್ತೇವೆ ಪತಿಯ ದೀರ್ಘಾ ಯುಷ್ಯಕ್ಕಾಗಿ ಗೌರಿದೇವಿಯ ಪೂಜೆಯನ್ನು ಪೂಜೆ ಮಾಡುತ್ತೇವೆ ಮರದ ಬಾಗಿನದಲ್ಲಿ ಹಾಕುವ ಪದಾರ್ಥಗಳು ಮತ್ತು ದೇವತೆಗಳ



ಬಗ್ಗೆ ಮಾಹಿತಿ ಅರಿಶಿಣ-ಗೌರಿದೇವಿ,
ಕುಂಕುಮ - ಮಹಾಲಕ್ಷ್ಮಿ, ಸಿಂಧೂರ-ಸರಸ್ವತಿ,
ಕನ್ನಡಿ- ರೂಪಲಕ್ಷ್ಮಿ ಬಾಚಣಿಗೆ-ಶೃಂಗಾರ ಲಕ್ಷ್ಮಿ ಕಾಡಿಗೆ-ಲಜ್ಜಾ ಲಕ್ಷ್ಮಿ
ಅಕ್ಕಿ-ಶ್ರೀಲಕ್ಷ್ಮಿ ತೊಗರಿಬೇಳೆ-ವರಲಕ್ಷ್ಮಿ, ಉದ್ದಿನಬೇಳೆ-ಸಿದ್ದಲಕ್ಷ್ಮಿ
ತೆಂಗಿನ ಕಾಯಿ-ಸಂತಾನ ಲಕ್ಷ್ಮಿ ವೀಳ್ಯದ ಎಲೆ-ಧನಲಕ್ಷ್ಮಿ,
ಅಡಕೆ-ಇಷ್ಟ ಲಕ್ಷ್ಮಿ,
ಫಲ ಹಣ್ಣು-ಜ್ಞಾನ ಲಕ್ಷ್ಮಿ, ಬೆಲ್ಲ-ರಸಲಕ್ಷ್ಮಿ
ವಸ್ತ್ರಾಖಣ-ವಸ್ತ್ರಲಕ್ಷ್ಮಿ ಹೆಸರುಬೇಳೆ-ವಿದ್ಯಾ ಲಕ್ಷ್ಮಿ.

ಮುತ್ತೈದೆ ದೇವತೆಯರು ಹದಿನಾರು ಜನರು ಇವರನ್ನು ಶೋಡಷ ಲಕ್ಷ್ಮಿ ಎಂದು ಕರೆಯುತ್ತಾರೆ ಸೀರೆಯ ಸೆರಗಿನಲ್ಲಿ ಮಹಾಲಕ್ಷ್ಮಿಯ ಸೌಭಾಗ್ಯ ಹೊಂದಿರುವುದರಿಂದ ಸೆರಗನ್ನು ಮೈತುಂಬ ಹೊದ್ದುಕೊಂಡು ಮರದ ಬಾಗಿನವನ್ನು ಕೊಡುತ್ತೇವೆ ಮರದ ಬಾಗಿನದಲ್ಲಿ ನಾರಾಯಣನ ಅಂಶ ಇರುತ್ತದೆ ಮರವೆಂಬ ನಾರಾಯಣ ಮತ್ತು ಒಳಗಿರುವ ಲಕ್ಷ್ಮಿ ಥರಹ ಜೊತೆಯಲ್ಲಿ ದಂಪತಿಗಳು ಲಕ್ಷ್ಮೀನಾರಾಯಣರ ಥರಹ ಇರಲಿ ಎಂದು ಹದಿನಾರು ಸುಮಂಗಲಿ ದೇವತೆಗಳ ಸಾಕ್ಷಿಯಾಗಿ ಬಾಗಿನ ಕೊಡುತ್ತಾರೆ.

ಶ್ರೀ ವಿದ್ಯಾಗಣಪತಿ- ಭಾದ್ರಪದ ಶುಕ್ಲದ ಚೌತಿಯಂದು ಗಣೇಶನ ಹಬ್ಬವನ್ನು ಗಣೇಶ ಚತುರ್ಥಿ ಎಂದು ಆಚರಿಸುತ್ತೇವೆ ಆ ದಿನ ಆನೆಯ ತಲೆಯ ದೇವತೆಯಾದ ಗಣೇಶನ ಜನ್ಮದಿನವೆಂಬ ನಂಬಿಕೆ ಇದೆ ಕಷ್ಟಗಳನ್ನು ಹೋಗಲಾಡಿಸುವವನು, ವಿದ್ಯೆ ಬುದ್ಧಿವಂತಿಕೆ, ಸಮೃದ್ಧಿ, ಅದೃಷ್ಟದ ದೇವರು ಎಂದು ಗಣೇಶನನ್ನು ಪೂಜಿಸುತ್ತೇವೆ.

ಗೌರಿದೇವಿ ತನ್ನ ಶರೀರದ ಮಣ್ಣಿನಿಂದ ಗಣೇಶನನ್ನು ಸೃಷ್ಟಿಸಿ ಜೀವವನ್ನು ನೀಡಿದಳು ಎಂಬ ಪ್ರತೀತಿಯಿದೆ.

, ಗಣೇಶನನ್ನು ಅಲಂಕರಿಸಿದ ಮಂಟಪದಲ್ಲಿ ಕುಳ್ಳಿರಿಸಿ 21 ವಿಧದ ಪತ್ರೆ ಎಲೆ ಗಳನ್ನು ಅರ್ಪಿಸಿ ಭಕ್ತಿಯಿಂದ ಪೂಜೆ ಮಾಡುತ್ತೇವೆ ಗಣಪತಿಗೆ ಕಾಯಿ ಕಡುಬು ಮತ್ತು ಮೋದಕ ಪ್ರಿಯವಾದದ್ದು ಆದ್ದರಿಂದ ಗಣಪತಿ ಹಬ್ಬದಂದು ಗಣೇಶನಿಗೆ 21 ಕಾಯಿ ಕಡುಬು ಅಥವಾ 21 ಮೋದಕವನ್ನು ನೈವೇದ್ಯ ಮಾಡುತ್ತೇವೆ ಗಣಪತಿಗೆ 21 ನಮಸ್ಕಾರಗಳನ್ನು ಮಾಡುತ್ತೇವೆ. ಗಣಪತಿ ಬಂದ ಕಾಯಿ ಕಡುಬು ತಿಂದ, ಮತ್ತು "ಗಣಪತಿ ಬಪ್ಪ ಮೋರೆಯಾ," ಎಂದು ಹೇಳುತ್ತೇವೆ ಮತ್ತು ಗಣೇಶನ ಹಬ್ಬದ ದಿನ ಚೌತಿ ಚಂದ್ರನ ಚಂದ್ರನ ದರ್ಶನವನ್ನು ಮಾಡಬಾರದು ಒಂದು ವೇಳೆ ಚಂದ್ರನ ದರ್ಶನ ಮಾಡಿದರೂ ಶಮಂತೋ ಪಾಕ್ಯಾನದ ಕಥೆಯನ್ನು ಕೇಳಿದರೆ ದೋಷ ಪರಿಹಾರವಾಗುತ್ತದೆ.

ಗಣೇಶನನ್ನು ಪೂಜೆ ಮಾಡುವ 21 ಎಲೆ ಮತ್ತು ಪತ್ರಗಳು
ಮಾಚಿ ಪತ್ರಂ-ದಾವಣ ಎಲೆ
ಬ್ರಹತಿ ಪತ್ರಂ-ಕರಿ ಗುಮ್ಮಟ ಎಲೆ, ಬಿಲ್ವ ಪತ್ರಂ-ಬಿಲ್ವದ ಎಲೆ,
ದೂರ್ವ ಪತ್ರಂ-ಗರಿಕೆ ಹುಲ್ಲು
ದಾತುರ ಪತ್ರಂ-ಉನ್ಮತಎಲೆ,
ಬದರಿ ಪತ್ರಂ-ಬೋರೆ ಹಣ್ಣಿನಎಲೆ, ಅಪಮಾರ್ಗ ಪತ್ರಂ-ಉತ್ರಾಣಿ ಎಲೆ, ತುಳಸಿ-ತುಳಸಿ ಎಲೆ ಚೂತಪತ್ರಂ-ಮಾವಿನ ಎಲೆ
ಕರವೀರ ಪತ್ರಂ-ಕಣಗಳ ಎಲೆ
ವಿಷ್ಣು ಕ್ರಾಂತ ಪತ್ರಂ-ವಿಷ್ಣು ಕ್ರಾಂತಿ ಎಲೆ,
ದಾದಿಮಿ ಪತ್ರಂ- ದಾಳಿಂಬೆ ಎಲೆ ದೇವದಾರು ಪತ್ರಂ-ದೇವದಾರು ಎಲೆ ಮರವಂತಿಕ ಪತ್ರಂ- ಮರುಗ
ಸಿಂಧು ವಾರ ಪತ್ರಂ-ಲಕ್ಕಿ ಗಿಡದ ಎಲೆ ಜಾಜಿ ಪತ್ರಂ-ಜಾಜಿ ಮಲ್ಲಿಗೆ ಎಲೆ ಗಂಡಕಿ ಪತ್ರಂ-ಲತಾ ಧ್ರುವ ಶಮಿಪತ್ರಂ-ಬನ್ನಿ ಪತ್ರ ಅಶ್ವತ್ಥಪತ್ರಂ-ಅಶ್ವತ್ಥಪತ್ರೆ
ಅರ್ಜುನ ಪತ್ರಂ-ನಿರ್ಮತಿ
ಆರ್ಕಾ ಪತ್ರಂ-ಎಕ್ಕೆ ಗಿಡದ ಎಲೆ ಎಲ್ಲರಿಗೂ ಗೌರಿ ಗಣಪತಿ ಹಬ್ಬದ ಹಾರ್ದಿಕ ಶುಭಾಶಯಗಳು.

# ಭಾದ್ರಪದ ಮಾಸದ ಶುಕ್ಲಪಕ್ಷ,ಕೃಷ್ಣಪಕ್ಷದ ವಿಶೇಷತೆಗಳು



। ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.

ಭಾದ್ರಪದ ಮಾಸ 12 ಮಾಸಗಳಲ್ಲಿ 6 ನೇಯ ಮಾಸವಾಗಿದೆ. ಶ್ರಾವಣ ಮಾಸ ಬಂದಾಗ ಜಡತ್ವ ಮಾಯವಾಗಿ ಉಲ್ಲಾಸ ಮನೆಮಾಡುವಂತೆ ಭಾದ್ರಪದ ಮಾಸದಲ್ಲಿ ವಿಘ್ನವಿನಾಶಕನ ಆಗಮನದಿಂದ ನಮ್ಮ ವಿಘ್ನಗಳೆಲ್ಲ ನಿವಾರಣೆಯಾಗುತ್ತವೆ. ಈ ತಿಂಗಳ ಹುಣ್ಣಿಮೆಯಂದು ಪೂರ್ವಭಾದ್ರಪದ,ಉತ್ತರಭಾದ್ರಪದ ನಕ್ಷತ್ರ ಬರುವದರಿಂದ ಈ ಮಾಸಕ್ಕೆ ಭಾದ್ರಪದ ಎಂದು ಕರೆಯುತ್ತಾರೆ. ವೇದದಲ್ಲಿ ಈ ಮಾಸಕ್ಕೆ 'ಈಶ' ಎಂದು ಕರೆದಿದ್ದಾರೆ. ಒಡೊಂದು ಮಾಸಕ್ಕೆ ಒಂದೊಂದು ದೇವರಿರುವಂತೆ ಭಾದ್ರಪದ ಮಾಸದ ಅಧಿದೇವತೆ ಋಷಿಕೇಶ . ಎಂದರೆ ಸಾಕ್ಷಾತ್ ಶ್ರೀಮನ್ನಾರಾಯಣ.ಈ ಮಾಸ ದೇವತಾ ಕಾರ್ಯಗಳಿಗೆ ಮತ್ತು ಪಿತೃದೇವತೆಗಳಿಗೆ ಸಮರ್ಪಿತವಾದ ಅರ್ಥಪೂರ್ಣವಾದ ಮಾಸವಾಗಿದೆ. ಈ ಮಾಸದಲ್ಲಿ ಬರುವ ಪ್ರತೀ ಹಬ್ಬಗಳಿಗೆ ವಿಶೇಷ ಮಹತ್ವವಿದೆ.ಇನ್ನು ಶುಕ್ಲಪಕ್ಷ,ಕೃಷ್ಣಪಕ್ಷದ ಮಹತ್ವ ತಿಳಿಯೋಣ.ಪ್ರತೀ ಮಾಸವನ್ನು ಎರಡು ಭಾಗವಾಗಿ ವಿಂಗಡಿಸಿದೆ. ಅಮವಾಸ್ಯೆಯ ಮರುದಿನದಿಂದ ಹುಣ್ಣಿಮೆವರೆಗಿನ ಅವಧಿಯನ್ನು ಶುಕ್ಲಪಕ್ಷ ಎಂದು ಕರೆದರೆ ಹುಣ್ಣಿಮೆ ದಿನದಿಂದ ಅಮವಾಸ್ಯೆವರೆಗಿನ ಕಾಲವನ್ನು ಕೃಷ್ಣಪಕ್ಷವೆಂದು ಕರೆಯುತ್ತೇವೆ. ಈ ಮಾಸದ ಶುಭಕಾರ್ಯಗಳೆಲ್ಲ ಶುಕ್ಲಪಕ್ಷದಲ್ಲಿ ಬರುತ್ತವೆ.

ಭಾದ್ರಪದ ಮಾಸದ ವಿಶೇಷತೆ- ಈ ಮಾಸದ ತೃತೀಯ ಅಥವಾ ತದಿಗೆಯಂದು ಸ್ವರ್ಣಗೌರಿ ಮತ್ತು ಹರತಾಳಿಕಾ ಗೌರಿ ವೃತ ಬರುವದು . ಚೌತಿಯ ದಿನ ಗಣಪತಿಯ ಹಬ್ಬ, ಪಂಚಮಿಯಂದು ಋಷಪಂಚಮಿ, ಅಷ್ಟಮಿಯಂದು ಜೇಷ್ಟಾ ಗೌರಿ,ವಿಶ್ವಕರ್ಮ ದಿನಾಚರಣೆ, ಏಕಾದಶಿಯಂದು ತಿರುಪತಿ ವೆಂಕಟಾಚಲನ ರಥೋತ್ಸವ, ದ್ವಾದಶಿಯಂದು ವಾಮನಜಯಂತಿ, ಕ್ಷೀರವೃತಾರಂಭ ಆರಂಭವಾಗುತ್ತದೆ. ಅನಂತ ಪದ್ಮನಾಭವೃತ ಆಚರಿಸಲಾಗುತ್ತದೆ.ಈ ಮಾಸದ ಕೃಷ್ಣಪಕ್ಷದಲ್ಲಿ ಮಹಾಲಯ ಪಕ್ಷ ಆರಂಭವಾಗುತ್ತದೆ. 15 ದಿನಗಳ ಕಾಲ ಪಿತೃಕಾರ್ಯಗಳು ಪ್ರಧಾನವಾಗಿ ನಡೆಯುತ್ತದೆ. ಭಾದ್ರಪದ ಮಾಸದ ಅಮವಾಸ್ಯೆಯಂದು ಮಹಾಲಯ ಅಮವಾಸ್ಯೆ ಆಚರಿಸಲಾಗುತ್ತದೆ. ಪ್ರತಿಯೊಂದು ಹಬ್ಬಕ್ಕೂ ಒಂದೊಂದು ಹಿನ್ನೆಲೆ ಮಹತ್ವವಿದೆ. ವೈಜ್ಞಾನಿಕ ಮಹತ್ವ ಕೂಡಾ ಇದೆ. ಮನೆಮಂದಿಯೆಲ್ಲಾ ಸೇರಿ ಆಚರಿಸುವ ಹಬ್ಬಗಳು ಮನಸ್ಸನ್ನು ಬೆಸೆಯುವ ಶಕ್ತಿ ಇರುತ್ತದೆ.

ಸ್ವರ್ಣಗೌರಿ ಕೈಲಾಸದಿಂದ ಭೂಲೋಕಕ್ಕೆ ಬರುವ ಮಾಸ ಇದಾಗಿದೆ. ತಾಯಿ ಗೌರಿಯ ಹಿಂದೆಯೇ ಮಗ ಗಣೇಶ ಬರುತ್ತಾನೆ. ಹೆಸರೇ ಸೂಚಿಸುವಂತೆ ಸ್ವರ್ಣ ಎಂದರೆ ಬಂಗಾರ



.ಬಂಗಾರದ ಬಣ್ಣದಿಂದ ಹೊಳೆಯುವ ಗೌರಿಗೆ ಷೋಡೋಪಚಾರಗಳಿಂದ ಪೂಜೆ,ಆ ಪೂಜೆಯಿಂದ ಮಾಂಗಲ್ಯಭಾಗ್ಯ,ಐಶ್ವರ್ಯ ಲಭಿಸುತ್ತದೆ ಎನ್ನುವದು ನಮ್ಮಲ್ಲಿ ಬಲವಾದ ನಂಬಿಕೆಯಿದೆ. ಗೌರಿ ಗಣೇಶದ ನಂತರ ಋಷಪಂಚಮಿ ವೃತ ಎಲ್ಲ ಋಷಿಗಳನ್ನುನೆನೆಯುವ ದಿನವೇ ಋಷಪಂಚಮಿ .ಈ ಆಚರಣೆಯಿಂದ ಸಕಲ ಪಾಪಗಳೂ ನಿವಾರಣೆಯಾಗಿ ಐಶ್ವರ್ಯ ಪ್ರಾಪ್ತಿಯಾಗುವದು ಎಂಬ ನಂಬಿಕೆಯಿದೆ.ಶುಕ್ಲಪಕ್ಷದ ದ್ವಾದಶಿಯಂದು ವಾಮನಜಯಂತಿ, ವಿಷ್ಣು ವಾಮನರೂಪ ತಾಳಿದ್ದು ವಿಶೇಷದಿನವಾಗಿದೆ. ಭಾದ್ರಪದ ಮಾಸದ ಕೃಷ್ಣಪಕ್ಷವನ್ನು ಪಿತೃಪಕ್ಷ,ಮಹಾಲಯಪಕ್ಷವೆಂದು ಕರೆಯುತ್ತಾರೆ. ಪಿತೃಗಳನ್ನು ಉದ್ದೇಶಿಸಿ ಮಾಡುವ ದಾನಧರ್ಮಗಳಿಗೆ ಹೆಚ್ಚಿನ ಪ್ರಧಾನ್ಯತೆ ಈ ಮಾಸದಲ್ಲಿ ನೀಡಲಾಗುತ್ತದೆ. ಗತಿಸಿದ ಪಿತೃಗಳನ್ನು ನೆನೆಯುವ ಪವಿತ್ರ ಕಾರ್ಯವನ್ನು ಶ್ರದ್ಧೆಯಿಂದ ಈ ವೇಳೆ ಆಚರಣೆ ಮಾಡುವದರಿಂದ ಪೂರ್ವಿಕರ ಸಂಪೂರ್ಣ ಆಶೀರ್ವಾದ ನಮಗೆ ದೊರೆಯುತ್ತದೆ.

ಭಾದ್ರಪದ ಮಾಸದಲ್ಲಿ ಗೌರಿ,ಗಣೇಶರ ಪೂಜೆಯ ಫಲ,ಜೇಷ್ಟಾ ಗೌರಿಯ ವರ,ಅನಂತ ಹಬ್ಬದ ಆಚರಣೆಯ ಫಲ,ಪಿತೃಪಕ್ಷದ ಹಿರಿಯರ ಆಶೀರ್ವಾದ ಪಡೆದು ನೆಮ್ಮದಿಯ ಜೀವನ ಬಯಸಿ ಬಾಳೋಣ.

# ನಡಿಗೆಯ ಹಾದಿ, ಸಾವಿನ ವಿರೋಧಿ



ನಡಿಗೆ ಎಂದರೆ ನೆಲದ ಮೇಲೆ ನಾವು ಬರೆಯುವ ಜೀವಸಂಜೀವಿನಿ ಕವಿತೆ. ಅದು ಪಾದಗಳ ಚಲನೆಯಲ್ಲ, ಹೃದಯದ ಮೃದಂಗಕ್ಕೆ ಪಾದಗಳು ನೀಡುವ ತಾಳ. ಮುಂಜಾವಿನ ಇಬ್ಬನಿ ಹುಲ್ಲಿನ ಮೇಲೆ ಬರಿಗಾಲು ಇಟ್ಟಾಗ ಭೂಮಿಯ ಮಡಿಲ ಸ್ಪರ್ಶದಿಂದ ದೇಹದ ವಿದ್ಯುದಾವೇಶದ ಕಲ್ಮಶ ಇಳಿದು ನರಮಂಡಲಕ್ಕೆ ನವಿರು ಜಾಗೃತಿ ದೊರೆಯುತ್ತದೆ. ಇದು ಪ್ರಕೃತಿಯೊಂದಿಗೆ ನಡೆಯುವ ಮೂಕ ಸಂಭಾಷಣೆಯೇ ಸರಿ.

ಲಯಬದ್ಧ ನಡಿಗೆಯಲ್ಲಿ ನಿಮಿಷಕ್ಕೆ ನೂರು ಹೆಜ್ಜೆಯ ಜವನಿಕೆಯು ಮಿದುಳಲ್ಲಿ ಆನಂದದ ಝರಿ ಚಿಮ್ಮಿಸಿ ನೋವಿನ ನೆರಳನ್ನು ಅಳಿಸುತ್ತದೆ. ಮೂರು ನಿಮಿಷ ವೇಗ, ಒಂದು ನಿಮಿಷ ನಿಧಾನದ ಅಂತರದ ಕುಣಿತವು ಹೃದಯಕ್ಕೆ ಸ್ಥಿತಿಸ್ಥಾಪಕತ್ವದ ಕವಚ ತೊಡಿಸಿ, ತಾರುಣ್ಯದ ಅಪೆಲಿನ್ ಹಾರ್ಮೋನನ್ನು ಜಾಗೃತಗೊಳಿಸುತ್ತದೆ. ಪ್ರತಿ ಕಂಪನವೂ ದೇಹದೊಳಗಿನ ದುಗ್ಧರಸದ ನದಿಯನ್ನು ಉಕ್ಕಿಸಿ ಜೀವಕೋಶದ ಕಸವನ್ನು ಪಾವನವಾಗಿ ತೊಳೆದು ಹಗುರಗೊಳಿಸುತ್ತದೆ.

ನಡಿಗೆ ಒಂಟಿ ವ್ಯಾಯಾಮವಲ್ಲ, ಅದು ಊರನ್ನು ಹೆಣೆಯುವ ಸಾಮೂಹಿಕ ದಾರ. ಕೆರೆ ಏರಿಯ ಪ್ರಭಾತ ಫೇರಿಯಲ್ಲಿ ಅಧಿಕಾರಿ, ಅಂಗಡಿಕಾರ, ಅನ್ನದಾತರೆಲ್ಲ ಒಂದೇ ಹೆಜ್ಜೆಗುರುತಿನ ಬಂಧುಗಳಾಗುತ್ತಾರೆ. ಹಿರಿಯರ ನಡಿಗೆ ಬಳಗವು ಏಕಾಂತದ ಬೇಲಿ ಕಿತ್ತು ಹರಟೆಯ ಹೊನಲು ಹರಿಸಿದರೆ, ಮಕ್ಕಳ ನಡಿಗೆ ಬಸ್ ಸಾಲು ರಸ್ತೆಯ ಅರಾಜಕತೆಗೆ ಸ್ನೇಹದ ಲಗಾಮು ಹಾಕಿ ಸುರಕ್ಷತೆಯ ಪಾಠ ಕಲಿಸುತ್ತದೆ. ಇದರ ಸಿದ್ಧಸೂತ್ರ ಸರಳ ಎದ್ದೊಡನೆ ಜೇನು-ನಿಂಬೆ ಬೆಚ್ಚನೆಯ ತೀರ್ಥ ಸೇವಿಸಿ ಹೊರಡಿ, ಏರು-ಇಳಿಜಾರಿನ ಹಾದಿ ಆಯ್ದು ಪಾದದ ಸ್ನಾಯುಗಳಿಗೆ ಸವಾಲು ನೀಡಿ, ನಡುವೆ ಪಕ್ಷಿಕಲರವಕ್ಕೆ ಕಿವಿಯಾಗುವ ಮೌನ ನಡಿಗೆ ಮಾಡಿ, ತಿಂಗಳಿಗೊಮ್ಮೆ ಮಾತಿಲ್ಲದ ಕಾಡು ಚಾರಣ ಕೈಗೊಳ್ಳಿ. ನಡಿಗೆಯನ್ನು ಉಸಿರಂತೆ ಪ್ರೀತಿಸಿದರೆ ಮೃತ್ಯುವೇ ಮೆಲ್ಲನೆ ಹೆಜ್ಜೆ ಹಿಂದಿಡುತ್ತದೆ.

ಅಂಕಣ 19
ಸಾವು ಸಂಕಟಪಡುವ ಸಂಗತಿಗಳು..!



|ಡಾ.ಸುಧಾಕರ.ಜಿ.ಲಕ್ಕವಳ್ಳಿ

# ಇಂಡಿಯಾ ಸ್ಕಿಲ್; ಹೆಸರು ನೋಂದಣಿಗೆ ಅವಕಾಶ

**ಮಡಿಕೇರಿ:** ವಿಶ್ವದ ಅತಿ ದೊಡ್ಡ ಕೌಶಲ್ಯ ಹಬ್ಬ ವರ್ಲ್ಡ್ ಸ್ಕಿಲ್ಸ್ ಸ್ಪರ್ಧೆಯು ಪ್ರತಿ ಎರಡು ವರ್ಷಗಳಿಗೊಮ್ಮೆ ನಡೆಯುವ ಜಗತ್ತಿನ ಅತಿ ದೊಡ್ಡ ವೃತ್ತಿಪರ ಕೌಶಲ್ಯ ಸ್ಪರ್ಧೆ ಆಗಿದೆ. ಕರ್ನಾಟಕ ರಾಜ್ಯ ಕೌಶಲ್ಯ ಒಲಂಪಿಕ್ಸ್ 2026-27 ಅನ್ನು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಆಯೋಜಿಸಲಾಗುತ್ತಿದೆ. 'ವರ್ಲ್ಡ್ ಸ್ಕಿಲ್-2028' ಜಾಗತಿಕ ಮಟ್ಟದ ಸ್ಪರ್ಧೆಯು ಜಪಾನಿನ ಐಚಿಯಲ್ಲಿ ನಡೆಯಲಿದ್ದು, ಭಾರತವನ್ನು ಪ್ರತಿನಿಧಿಸಲು ಬಯಸುವ ಯುವಕ ಯುತಿಯರಿಗೆ ಇಂಡಿಯಾ ಸ್ಕಿಲ್ಸ್ -2026 ಕಾರ್ಯಕ್ರಮ ರಾಜ್ಯ ಮಟ್ಟದ ವೇದಿಕೆ ಒದಗಿಸುತ್ತಿದೆ.

63 ವಿವಿಧ ವೃತ್ತಿಪರ ಕೌಶಲ್ಯ ವಿಭಾಗಗಳಲ್ಲಿ ನೈಪುಣ್ಯತೆ ಹೊಂದಿರುವ 16 ರಿಂದ 25 ವರ್ಷ ವಯೋಮಿತಿಯ ಜಿಲ್ಲೆಯ ಯುವಜನರು ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಆಸಕ್ತಿಯಿರುವ ಅಭ್ಯರ್ಥಿಗಳು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಆಧಾರ್ ಮಾಹಿತಿಯೊಂದಿಗೆ https://www.skillindiadigital.gov.in/home ಲಿಂಕ್‌ಗೆ ಭೇಟಿ ನೀಡಿ ನೋಂದಾಯಿಸಿಕೊಳ್ಳಬಹುದು.

ಸ್ಪರ್ಧೆಗೆ ನೋಂದಾಯಿಸಿಕೊಳ್ಳಲು ಸೆಪ್ಟೆಂಬರ್ 15 ಕೊನೆ ದಿನವಾಗಿದೆ. ಸ್ಪರ್ಧೆಗೆ ಗುರುತಿಸಲಾಗಿರುವ 63 ವಿವಿಧ ವೃತ್ತಿಪರ ಕೌಶಲ್ಯಗಳ ಪಟ್ಟಿ, ವಯಸ್ಸಿನ ಮಾನದಂಡಗಳು ಹಾಗೂ ವರ್ಲ್ಡ್ ಮತ್ತು ಇಂಡಿಯಾ ಸ್ಕಿಲ್ಸ್ ಕರ್ನಾಟಕ-2026 ಕುರಿತಾದ ಸಂಪೂರ್ಣ ಮಾಹಿತಿಗಾಗಿ www.skillindiadigital.gov.in ಭೇಟಿ ನೀಡಬಹುದು. ನೋಂದಣಿ ಮತ್ತು ಭಾಗವಹಿಸುವಿಕೆ ಸಂಪೂರ್ಣವಾಗಿ ಉಚಿತವಾಗಿದೆ. ಹೆಚ್ಚಿನ ಮಾಹಿತಿಗೆ 9606492216 ಗೆ ಕರೆ ಮಾಡುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮಂಜುನಾಥ್ ಅವರು ತಿಳಿಸಿದ್ದಾರೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,